24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 142 | ನವದೆಹಲಿ | ಬೆಲೆ ₹10 | ನವಂಬರ್ 19, 2026, ಗುರುವಾರ

ಒಳಪುಟಗಳಲ್ಲಿ

ಕಾಂಗ್ರೆಸ್, ಸಿಜೆಪಿ ಸೇರಿದಂತೆ ನಾಲ್ಕು ಸಂಘಟನೆಗಳಿಗೆ ಸುಪ್ರೀಂ ನೋಟಿಸ್-ರಾಮಲೀಲಾ ಮೈದಾನದಲ್ಲಿ ಪ್ರತಿಭಟನೆಗೆ ನಿರ್ಬಂಧ ಕೋರಿ ವ್ಯಾಪಾರಿಗಳ ಅರ್ಜಿ - ಪು.4

ಜಿಬಿಎ ಚುನಾವಣೆ: ಮತ್ತಷ್ಟು ಸಮಯಾವಕಾಶ ಕೋರಿ ಸುಪ್ರೀಂಗೆ - ಪು.5

ಚಂಡಮಾರುತ ಪರಿಣಾಮ: ಆಂಧ್ರದ ವಿದ್ಯುತ್ ವ್ಯವಸ್ಥೆ ಸರಿಪಡಿಸಿದ ಕರ್ನಾಟಕ

ಆಂಧ್ರಪ್ರದೇಶದಲ್ಲಿ ಕ್ಷಿಪ್ರ ಕಾರ್ಯಾಚರಣೆಗೆ ನೆರವಾದ ವಿದ್ಯುತ್ ತಾಂತ್ರಿಕ ತಂಡ ಸಿಎಂ ಡಿಕೆಶಿ ಸಹಕಾರಕ್ಕೆ ಚಂದ್ರಬಾಬು ನಾಯ್ಡು ಧನ್ಯವಾದ


ಬೆಂಗಳೂರು, ನ.18: ಅರ್ನಾಬ್ ಮತ್ತು ಮುರಸು ಅವಳಿ ಚಂಡಮಾರುತಗಳಿಂದ ಆಂಧ್ರಪ್ರದೇಶದಲ್ಲಿ ಉಂಟಾದ ಭಾರಿ ಹಾನಿಯ ನಂತರ, ವಿದ್ಯುತ್ ಪೂರೈಕೆ ಪುನರ್ಸ್ಥಾಪನೆ ಕಾರ್ಯಗಳಿಗೆ ಸಕಾಲಿಕ ನೆರವು ನೀಡಿದ ಕರ್ನಾಟಕ ಸರ್ಕಾರಕ್ಕೆ ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಕೃತಜ್ಞತೆ ಸಲ್ಲಿಸಿದ್ದಾರೆ.

ಈ ಕುರಿತು ಅವರು ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಧಿಕೃತ ಪತ್ರ ಬರೆದು ಧನ್ಯವಾದ ತಿಳಿಸಿದ್ದಾರೆ.

ಚಂಡಮಾರುತಗಳ ತೀವ್ರತೆಯಿಂದಾಗಿ ಆಂಧ್ರಪ್ರದೇಶದ ಹಲವು ಭಾಗಗಳಲ್ಲಿ ವಿದ್ಯುತ್ ಮೂಲಸೌಕರ್ಯಕ್ಕೆ ವ್ಯಾಪಕ ಹಾನಿಯಾಗಿ ವಿದ್ಯುತ್ ಸಂಪರ್ಕ ಕಡಿತಗೊಂಡಿತ್ತು. ಈ ಸಂಕಷ್ಟದ ಸಮಯದಲ್ಲಿ ಕರ್ನಾಟಕ ಸರ್ಕಾರವು ತಕ್ಷಣ ಸ್ಪಂದಿಸಿ, 68 ತಂಡಗಳಲ್ಲಿ ಒಟ್ಟು 592 ಸಿಬ್ಬಂದಿಯನ್ನು ಪುನರ್‌ಸ್ಥಾಪನೆ ಕಾರ್ಯಕ್ಕಾಗಿ ಆಂಧ್ರಪ್ರದೇಶಕ್ಕೆ ನಿಯೋಜಿಸಿತ್ತು.

ಆಂಧ್ರಪ್ರದೇಶ ಕೇಂದ್ರ ವಿದ್ಯುತ್ ವಿತರಣಾ ನಿಗಮ (ಎಪಿಸಿಪಿಡಿಸಿಎಲ್)ದ ವ್ಯಾಪ್ತಿಯೊಂದರಲ್ಲೇ ಅರ್ನಾಬ್ ಚಂಡಮಾರುತದಿಂದ ಬಾಧಿತವಾದ 1,333 ಗ್ರಾಮಗಳು ಹಾಗೂ ಮುರಸು ಚಂಡಮಾರುತದಿಂದ ಬಾಧಿತವಾದ 1,825 ಗ್ರಾಮಗಳಿಗೆ ವಿದ್ಯುತ್ ಪೂರೈಕೆಯನ್ನು ಮರುಸ್ಥಾಪಿಸಬೇಕಾಗಿತ್ತು. ಅಲ್ಲದೆ, ಅರ್ನಾಬ್ ಚಂಡಮಾರುತದಲ್ಲಿ 1,852 ವಿದ್ಯುತ್ ಕಂಬಗಳು ಹಾಗೂ ಮುರಸು ಚಂಡಮಾರುತದಲ್ಲಿ 7,850 ಕಂಬಗಳು ಹಾನಿಗೊಳಗಾಗಿದ್ದವು ಅಥವಾ ನೆಲಕ್ಕುರುಳಿದ್ದವು.





ಎಪಿಸಿಪಿಡಿಸಿಎಲ್ ವ್ಯಾಪ್ತಿಯಲ್ಲಿ ಅರ್ನಾಬ್ ಚಂಡಮಾರುತದ ನಂತರ 165 ತಂಡಗಳಲ್ಲಿ 1,580 ಸಿಬ್ಬಂದಿಯನ್ನು ಮತ್ತು ಮುರಸು ಚಂಡಮಾರುತದ ನಂತರ 390 ತಂಡಗಳಲ್ಲಿ 3,292 ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಇದಕ್ಕೆ ಪೂರಕವಾಗಿ ಕರ್ನಾಟಕದಿಂದ ಬಂದ 592 ಸಿಬ್ಬಂದಿಯಿದ್ದ 68 ತಂಡಗಳು ಕಠಿಣ ಪರಿಸ್ಥಿತಿಯಲ್ಲೂ ಸ್ಥಳೀಯ ಸಿಬ್ಬಂದಿಯೊಂದಿಗೆ ಕೈಜೋಡಿಸಿ, ಸಮರ ಸಜ್ಜಿನಂತೆ ವಿದ್ಯುತ್ ಸಂಪರ್ಕ ಕಲ್ಪಿಸಲು ದೊಡ್ಡ ಬಲ ನೀಡಿತು ಎಂದು ನಾಯ್ಡು ಶ್ಲಾಘಿಸಿದ್ದಾರೆ.

ಭವಿಷ್ಯದಲ್ಲಿ ಕರ್ನಾಟಕಕ್ಕೆ ನೆರವಿನ ಭರವಸೆ

ಎರಡೂ ರಾಜ್ಯಗಳು ಭೌಗೋಳಿಕ, ಆರ್ಥಿಕ ಮತ್ತು ಸಾಂಸ್ಕೃತಿಕವಾಗಿ ನಿಕಟ ಬಾಂಧವ್ಯ ಹೊಂದಿದ್ದು, ವಿಪತ್ತಿನ ಸಂದರ್ಭದಲ್ಲಿ ಇಂತಹ ಪರಸ್ಪರ ಸಹಕಾರವು ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ. ಭವಿಷ್ಯದಲ್ಲಿ ಕರ್ನಾಟಕಕ್ಕೆ ಯಾವುದೇ ನೈಸರ್ಗಿಕ ವಿಕೋಪ ಅಥವಾ ತುರ್ತು ಪರಿಸ್ಥಿತಿ ಎದುರಾದಲ್ಲಿ, ಆಂಧ್ರಪ್ರದೇಶ ಸರ್ಕಾರವು ಸಿಬ್ಬಂದಿ, ಉಪಕರಣಗಳು ಮತ್ತು ಯಂತ್ರೋಪಕರಣ ಸೇರಿದಂತೆ ಎಲ್ಲ ರೀತಿಯ ನೆರವು ನೀಡಲು ಸದಾ ಸಿದ್ಧವಿರುತ್ತದೆ ಎಂದು ಚಂದ್ರಬಾಬು ನಾಯ್ಡು ಭರವಸೆ ನೀಡಿದ್ದಾರೆ.

ಮಹಿಳಾ ಮೀಸಲಾತಿ ಶೀಘ್ರ ಜಾರಿಗೆ ಸರ್ವಪಕ್ಷಗಳ ಸಹಮತ ಅಗತ್ಯ: ಡಿ.ಪುರಂದೇಶ್ವರಿ

ಬೆಂಗಳೂರು, ನ.18: ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಕಲ್ಪಿಸುವ ಕಾಯ್ದೆಯ ಅನುಷ್ಠಾನ ವಿಳಂಬವಾಗದಂತೆ ಎಲ್ಲ ರಾಜಕೀಯ ಪಕ್ಷಗಳು ಒಮ್ಮತಕ್ಕೆ ಬರಬೇಕು ಎಂದು ಕಾಮನ್‌ವೆಲ್ತ್ ಮಹಿಳಾ ಸಂಸದೀಯ ಪ್ರತಿನಿಧಿಗಳ ಭಾರತ ವಲಯದ ಅಧ್ಯಕ್ಷೆ ಡಾ.ಡಿ.ಪುರಂದೇಶ್ವರಿ ಆಗ್ರಹಿಸಿದರು.

ಬೆಂಗಳೂರಿನಲ್ಲಿ ನಡೆದ ಎರಡು ದಿನಗಳ ಭಾರತ ವಲಯದ ಪ್ರಥಮ ಸಮಾವೇಶದ ಸಮಾರೋಪದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳಾ ಮೀಸಲಾತಿಯನ್ನು ಜನಗಣತಿ ಪ್ರಕ್ರಿಯೆಯಿಂದ ಪ್ರತ್ಯೇಕಿಸುವುದು ಅಥವಾ ಕ್ಷೇತ್ರ ಮರುವಿಂಗಡಣೆಯನ್ನು ತ್ವರಿತವಾಗಿ ಪೂರ್ಣಗೊಳಿಸುವುದು ಸೇರಿದಂತೆ ಸಾಧ್ಯವಿರುವ ಮಾರ್ಗಗಳ ಕುರಿತು ರಾಜಕೀಯ ಪಕ್ಷಗಳು ಚರ್ಚಿಸಬೇಕು ಎಂದರು.

ಮಹಿಳಾ ಮೀಸಲಾತಿಯಂತಹ ಮಹತ್ವದ ವಿಷಯದಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಮೀರಿ ಎಲ್ಲ ಪಕ್ಷಗಳೂ ಒಂದಾಗಬೇಕು. ಮಹಿಳೆಯರ ನಾಯಕತ್ವವನ್ನು ಬಲಪಡಿಸುವುದು ನಮ್ಮ ಆದ್ಯತೆಯಾಗಿದೆ ಎಂದು ಹೇಳಿದರು.

ಸಮಾವೇಶದಲ್ಲಿ ದೇಶದ ವಿವಿಧ ರಾಜ್ಯಗಳಿಂದ 109 ಮಹಿಳಾ ಸಂಸದರು ಮತ್ತು ಶಾಸಕರು ಭಾಗವಹಿಸಿದ್ದರು. ಆಫ್ರಿಕಾ ವಲಯದ CWP ಅಧ್ಯಕ್ಷೆ ಹಾಗೂ ಮಲಾವಿ ಸಂಸದೆ ಗ್ರೇಸ್ ಸೇರಿದಂತೆ ನಾಲ್ವರು ಆಫ್ರಿಕಾದ ಸಂಸದರು ಆನ್‌ಲೈನ್ ಮೂಲಕ ಪಾಲ್ಗೊಂಡಿದ್ದರು ಎಂದು ತಿಳಿಸಿದರು.



ಕಾಮನ್‌ವೆಲ್ತ್ ಮಹಿಳಾ ಸಂಸದೀಯ ಪ್ರತಿನಿಧಿಗಳ ಸಮ್ಮೇಳನದಲ್ಲಿ ರಾಜ್ಯಪಾಲೆ ಡಾ. ಸುಧಾ ಯಾದವ್ ಅವರನ್ನು ಗೌರವಿಸಲಾಯಿತು. ರಾಜ್ಯಸಭೆ ಉಪಸಭಾಪತಿ ಹರಿವಂಶ್, ವಿಧಾನ ಸಭಾಧ್ಯಕ್ಷ ಜಿ.ಎಸ್. ಪಾಟೀಲ್, ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ಡಾ. ಡಿ. ಪುರಂದೇಶ್ವರಿ ಇದ್ದರು.

ಮಹಿಳೆಯರ ವಿರುದ್ಧ ನಡೆಯುತ್ತಿರುವ ಸೈಬರ್ ಕಿರುಕುಳ, ಡೀಪ್‌ಫೇಕ್, ಮಾರ್ಫಿಂಗ್ ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ಅವಹೇಳನಕಾರಿ ವಿಷಯಗಳ ಪ್ರಸಾರವನ್ನು ತಡೆಯಲು ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನವನ್ನು ಬಳಸುವ ಕುರಿತು ಸಮಾವೇಶದಲ್ಲಿ ಮಹತ್ವದ ಸಲಹೆಗಳು ವ್ಯಕ್ತವಾಗಿವೆ. ಈ ವಿಚಾರವನ್ನು ಕೇಂದ್ರ ಸರ್ಕಾರದ ಮಟ್ಟಕ್ಕೆ ಕೊಂಡೊಯ್ಯಲಾಗುವುದು ಎಂದರು.

ಸಮಾವೇಶದಲ್ಲಿ ವ್ಯಕ್ತವಾದ ಸಲಹೆಗಳು ಕೇವಲ ಚರ್ಚೆಗೆ ಸೀಮಿತವಾಗುವುದಿಲ್ಲ.

ಸಿಡಬ್ಲ್ಯೂಪಿ ಭಾರತ ವಲಯ, ರಾಷ್ಟ್ರೀಯ ಮಹಿಳಾ ಆಯೋಗ ಹಾಗೂ ಮಹಿಳಾ ಸಬಲೀಕರಣ ಸಮಿತಿ ಸಮನ್ವಯದಿಂದ ಕಾರ್ಯಸಾಧ್ಯವಾದ ಶಿಫಾರಸುಗಳ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಿವೆ ಎಂದು ತಿಳಿಸಿದರು.

ಹೊಸದಾಗಿ ಆಯ್ಕೆಯಾಗುವ ಮಹಿಳಾ ಜನಪ್ರತಿನಿಧಿಗಳಿಗೆ ನೀತಿ ನಿರೂಪಣೆ, ಹಣಕಾಸು ನಿರ್ವಹಣೆ ಮತ್ತು ಶಾಸನಾತ್ಮಕ ಕಾರ್ಯಚಟುವಟಿಕೆಗಳ ಕುರಿತು ತರಬೇತಿ ನೀಡುವ ಅಗತ್ಯವಿದೆ. ಈ ಉದ್ದೇಶಕ್ಕಾಗಿ ವಲಯವಾರು ಮಾರ್ಗದರ್ಶನ ಕಾರ್ಯಕ್ರಮಗಳನ್ನು ನಡೆಸುವ ಸಾಧ್ಯತೆಯನ್ನೂ ಪರಿಶೀಲಿಸಲಾಗುವುದು ಎಂದು ಹೇಳಿದರು.

ಮಹಿಳೆಯರ ಋತುಬಂಧ ಮತ್ತು ಆರೋಗ್ಯದ ಕುರಿತು ನಡೆದ ವಿಶೇಷ ಅಧಿವೇಶನದಲ್ಲಿಯೂ ಮಹತ್ವದ ವಿಚಾರಗಳು ಚರ್ಚೆಯಾಗಿದ್ದು, ಈ ವಿಷಯದಲ್ಲಿನ ಸಾಮಾಜಿಕ ಮುಜುಗರ ನಿವಾರಣೆ ಮತ್ತು ಜಾಗೃತಿ ಹೆಚ್ಚಿಸಲು ಗಮನಹರಿಸಲಾಗುವುದು ಎಂದರು.

ಮಹಿಳೆಯರ ಡಿಜಿಟಲ್ ಸುರಕ್ಷತೆ, ನಾಯಕತ್ವ ಬಲವರ್ಧನೆಗೆ ಕ್ರಮ ಅಗತ್ಯ: ರಾಜ್ಯಪಾಲೆ ಡಾ. ಸುಧಾಯಾದವ್ ಪ್ರತಿಪಾದನೆ

ಡಿಜಿಟಲ್ ತಂತ್ರಜ್ಞಾನದ ಬೆಳವಣಿಗೆಯಲ್ಲಿ ಮಹಿಳೆಯರು ಕೇವಲ ಬಳಕೆದಾರರಾಗದೆ, ನಾಯಕಿಯರು, ಆವಿಷ್ಕಾರಕರು ಹಾಗೂ ನಿರ್ಣಯ ಕೈಗೊಳ್ಳುವವರಾಗಿ ಹೊರಹೊಮ್ಮಬೇಕು. ಇದಕ್ಕಾಗಿ ಸುರಕ್ಷಿತ ಡಿಜಿಟಲ್ ವಾತಾವರಣ, ಬಲಿಷ್ಠ ಕಾನೂನು ರಕ್ಷಣೆ ಮತ್ತು ಪರಿಣಾಮಕಾರಿ ಮಾರ್ಗದರ್ಶನ ವ್ಯವಸ್ಥೆ ಅಗತ್ಯ ಎಂದು ಕರ್ನಾಟಕದ ರಾಜ್ಯಪಾಲೆ ಡಾ. ಸುಧಾ ಯಾದವ್ ಪ್ರತಿಪಾದಿಸಿದರು. ಕೃತಕ ಬುದ್ಧಿಮತ್ತೆ ಆಧಾರಿತ ಡೀಪ್‌ಫೇಕ್‌ಗಳು, ಸುಳ್ಳು ಮಾಹಿತಿ ಪ್ರಸಾರ ಹಾಗೂ ಸಾಮಾಜಿಕ ಮಾಧ್ಯಮಗಳಲ್ಲಿ ಮಹಿಳೆಯರ ವಿರುದ್ಧ ನಡೆಯುತ್ತಿರುವ ಕಿರುಕುಳಗಳು ಗಂಭೀರ ಸವಾಲಾಗಿ ಪರಿಣಮಿಸಿವೆ. ವಿಶೇಷವಾಗಿ ಸಾರ್ವಜನಿಕ ಜೀವನದಲ್ಲಿರುವ ಮಹಿಳೆಯರ ಧ್ವನಿಯನ್ನು ಅಡಗಿಸಲು ಮತ್ತು ಅವರ ನಾಯಕತ್ವದ ಮೇಲಿನ ಸಾರ್ವಜನಿಕ ವಿಶ್ವಾಸವನ್ನು ಕುಂದಿಸಲು ಇಂತಹ ತಂತ್ರಜ್ಞಾನಗಳನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.ಸಾಮಾಜಿಕ ಮಾಧ್ಯಮ ವೇದಿಕೆಗಳ ಹೊಣೆಗಾರಿಕೆಯನ್ನು ಹೆಚ್ಚಿಸುವುದು, ಕಾನೂನು ಮತ್ತು ಸಾಂಸ್ಥಿಕ ರಕ್ಷಣಾ ವ್ಯವಸ್ಥೆಗಳನ್ನು ಬಲಪಡಿಸುವುದು ಹಾಗೂ ಗ್ರಾಮೀಣ ಮತ್ತು ಹಿಂದುಳಿದ ವರ್ಗಗಳ ಮಹಿಳೆಯರಲ್ಲಿ ಡಿಜಿಟಲ್ ಸಾಕ್ಷರತೆ ಹೆಚ್ಚಿಸುವುದು ಅತ್ಯಗತ್ಯ. ಅನುಭವಿ ಮಹಿಳಾ ಜನಪ್ರತಿನಿಧಿಗಳು ಹೊಸದಾಗಿ ಆಯ್ಕೆಯಾದ ಮಹಿಳೆಯರಿಗೆ ಮಾರ್ಗದರ್ಶನ ನೀಡುವ ವ್ಯವಸ್ಥೆಯೂ ರೂಪುಗೊಳ್ಳಬೇಕು ಎಂದು ಸಲಹೆ ನೀಡಿದರು.

ಮಹಿಳೆಯರ ಘನತೆ ರಕ್ಷಿಸುವುದು ಸವಾಲು: ಹರಿವಂಶ್

ಸಮಾರೋಪ ಸಮಾರಂಭದಲ್ಲಿ ಮಾತನಾಡಿ ರಾಜ್ಯಸಭೆ ಉಪಸಭಾಪತಿ ಹರಿವಂಶ್, ಮಹಿಳೆಯರ ರಾಜಕೀಯ ಪಾಲ್ಗೊಳ್ಳುವಿಕೆ ಬಲಪಡಿಸುವುದರ ಜೊತೆಗೆ ಡಿಜಿಟಲ್ ಜಗತ್ತಿನಲ್ಲಿ ಅವರ ಗೌಪ್ಯತೆ ಮತ್ತು ಘನತೆಯನ್ನು ರಕ್ಷಿಸುವುದು ಇಂದಿನ ಪ್ರಮುಖ ಸವಾಲಾಗಿದೆ ಎಂದು ಹೇಳಿದರು. ಸಾಮಾಜಿಕ ಮಾಧ್ಯಮಗಳ ದುರ್ಬಳಕೆ, ಸೈಬರ್ ಕಿರುಕುಳ, ಡೀಪ್‌ಫೇಕ್‌ಗಳು ಹಾಗೂ ಎಐ ಆಧಾರಿತ ದಾಳಿಗಳು ಮಹಿಳಾ ಜನಪ್ರತಿನಿಧಿಗಳ ಸಾರ್ವಜನಿಕ ಜೀವನದ ಮೇಲೆ ಗಂಭೀರ ಪರಿಣಾಮ ಬೀರುತ್ತಿವೆ. ಈ ಕುರಿತು ಕಾನೂನು ಅರಿವು, ಪರಿಣಾಮಕಾರಿ ಅನುಷ್ಠಾನ ಮತ್ತು ಸಾರ್ವಜನಿಕ ಜಾಗೃತಿ ಹೆಚ್ಚಿಸಬೇಕಿದೆ ಎಂದು ಪ್ರತಿಪಾದಿಸಿದರು.



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ್
ಮಾನ್ಯ ಉಪಮುಖ್ಯಮಂತ್ರಿಗಳು

ನಗರಾಭಿವೃದ್ಧಿ ಇಲಾಖೆ
ಪೌರಾಡಳಿತ ನಿರ್ದೇಶನಾಲಯ

ಮಾಜಿ ಪ್ರಧಾನಮಂತ್ರಿ ಶ್ರೀಮತಿ ಇಂದಿರಾ ಗಾಂಧಿಯವರ ಜನ್ಮದಿನದ ಅಂಗವಾಗಿ






ರಾಜ್ಯದ ವಿವಿಧ ನಗರಗಳಲ್ಲಿ ನೂತನವಾಗಿ ನಿರ್ಮಿಸಿರುವ
16 ಇಂದಿರಾ ಕ್ಯಾಂಟೀನ್‌ಗಳ ಲೋಕಾರ್ಪಣೆ

ರಾಜ್ಯ ಮಟ್ಟದ "ಅತ್ಯುತ್ತಮ ಇಂದಿರಾ ಕ್ಯಾಂಟೀನ್"
ಪ್ರಶಸ್ತಿ ವಿತರಣಾ ಸಮಾರಂಭ.

ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆಯಡಿ ಕಾಮಗಾರಿಗಳು
ಹಾಗೂ ಯಂತ್ರೋಪಕರಣಗಳ ಲೋಕಾರ್ಪಣೆ.





ದಿನಾಂಕ: 19.11.2026, ಗುರುವಾರ
ಸಮಯ : ಬೆಳಿಗ್ಗೆ 10:00 ಗಂಟೆಗೆ


ಸ್ಥಳ:
"ಸಿ.ವಿ.ವಿಶ್ವೇಶ್ವರ ಸಭಾಂಗಣ"
ಯು.ಆರ್.ರಾವ್ ಭವನ, ಜವಾಹರಲಾಲ್ ನೆಹರು ತಾರಾಲಯ,
ಶ್ರೀ ಟಿ. ಚೌಡಯ್ಯ ರಸ್ತೆ, ಹೈ ಗ್ರೌಂಡ್ಸ್, ಬೆಂಗಳೂರು - 560001

ಮಾನ್ಯ ನಗರಾಭಿವೃದ್ಧಿ ಸಚಿವರಾದ ಡಾ॥ ಯತೀಂದ್ರ ಸಿದ್ದರಾಮಯ್ಯನವರು
ಸ್ವಚ್ಛತೆಯೇ ಸೇವೆ ಅಭಿಯಾನದ ಅಂಗವಾಗಿ ಸ್ವಚ್ಛತಾ ಪ್ರತಿಜ್ಞೆ ಬೋಧಿಸಿದ ಕ್ಷಣ.

ಮಾನ್ಯ ಪೌರಾಡಳಿತ ಸಚಿವರಾದ ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು
ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ ಉಪಾಹಾರ ಸೇವಿಸಿದ ಕ್ಷಣ.

ಸರ್ವರಿಗೂ ಆದರದ ಸ್ವಾಗತ

ನಿತ್ಯ ಪಂಚಾಂಗ 19.11.2026 ಗುರುವಾರ



ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು/ ಚಾಂದ್ರಮಾನ ಆಶ್ವಯುಜ-ಕಾರ್ತಿಕ ಮಾಸ

ಕಾರ್ತಿಕ ಶುದ್ಧ, ದಶಮಿ, ಪೂರ್ವಾಬಾದ್ರಾ ನಕ್ಷತ್ರ, ಕುಣಿಗಲ್ ಅಟವೀಶ್ವರ ಪುಣ್ಯತಿಥಿ, ಚಿಪ್ಪಾಗಿರಿ ವಿಜಯದಾಸ ಆರಾಧನೆ, ಬೆಳಗರಹಳ್ಳಿ ಭೂಕೈಲಾಸೋತ್ಸವ


ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ಎಥೆನಾಲ್ ಮಿಶ್ರಣ: ವೈಜ್ಞಾನಿಕ ಮಾಹಿತಿ ಆಧರಿಸಿಯೇ ಸಚಿವರ ಹೇಳಿಕೆ

ರಿಜ್ವಾನ್ ಅರ್ಷದ್ ಹೇಳಿಕೆ ಟೀಕಿಸುವುದು ಸರಿಯಲ್ಲ: ಡಾ.ಜಿ. ಪರಮೇಶ್ವರ್

ಬೆಂಗಳೂರು, ನ.18: ಎಥೆನಾಲ್ ಮಿಶ್ರಣದ ಕುರಿತು ಆಹಾರ ಸಚಿವ ರಿಜ್ವಾನ್ ಅರ್ಷದ್ ಹೇಳಿಕೆಯನ್ನು ಕೇಂದ್ರ ಸಚಿವರು ಟೀಕಿಸಿರುವ ಬಗ್ಗೆ ಡಿಸಿಎಂ ಜಿ.ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ಬುಧವಾರ ಮಾತನಾಡಿದ ಅವರು, ಪ್ರಯೋಗಾಲಯದ ಫಲಿತಾಂಶಗಳು ವೈಜ್ಞಾನಿಕ ಮಾಹಿತಿಯನ್ನು ಆಧರಿಸಿರುತ್ತವೆ. ಇಂಧನದಲ್ಲಿ ಶೇ.20ರಿಂದ ಶೇ.30ರಷ್ಟು ಎಥೆನಾಲ್ ಮಿಶ್ರಣವಾಗುತ್ತಿರುವ ಕುರಿತು ಪ್ರಯೋಗಾಲಯದ ವರದಿಗಳು



ಬಂದಿವೆ. ಇಂತಹ ವೈಜ್ಞಾನಿಕ ದತ್ತಾಂಶಗಳ ಆಧಾರದ ಮೇಲೆಯೇ ಆಹಾರ ಸಚಿವರು ಮಾತನಾಡಿದ್ದಾರೆ. ಎಂದರು. ಇಡೀ ದೇಶದಲ್ಲಿ ಇದೇ ರೀತಿ ನಡೆಯುತ್ತಿದೆ ಎಂದು ಅವರು ಹೇಳಿಲ್ಲ. ಕರ್ನಾಟಕದಲ್ಲಿ ಇಂತಹ ಪರಿಸ್ಥಿತಿ ಉಂಟಾಗಬಾರದು ಹಾಗೂ ಈ ಕುರಿತು ತೈಲ ಕಂಪನಿಗಳಿಗೆ ಸೂಕ್ತ ಸೂಚನೆ ನೀಡಬೇಕು ಎಂಬುದು ಅವರ ಉದ್ದೇಶವಾಗಿದೆ. ವೈಜ್ಞಾನಿಕ ವರದಿಗಳ ಆಧಾರದ ಮೇಲೆ ನೀಡಿರುವ ಹೇಳಿಕೆಯನ್ನು ಕೇಂದ್ರ ಸಚಿವರು ಈ ರೀತಿ ಟೀಕಿಸುವುದು ಸರಿಯಲ್ಲ ಎಂದು ಹೇಳಿದರು.

ಜಿಬಿಎ ಚುನಾವಣೆ ಮುಂದೂಡಿಕೆಗೆ ಗೊಂದಲಗಳೇ ಕಾರಣ

ಬಿಬಿಎಂಪಿ ಹಾಗೂ ಜಿಬಿಎ ಚುನಾವಣೆಯನ್ನು ಪದೇಪದೇ ಮುಂದೂಡುತ್ತಿರುವ ಕುರಿತು ಪ್ರತಿಕ್ರಿಯಿಸಿ, ಚುನಾವಣೆ ನಡೆಸುವ ಸಂಬಂಧ ಮತದಾರರ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆ ಪ್ರಸ್ತುತ ನಡೆಯುತ್ತಿದೆ. ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಮತದಾರರ ಸೇರ್ಪಡೆ ಮತ್ತು ಕೈಬಿಡುವಿಕೆ ಸೇರಿದಂತೆ ಎಲ್ಲ ಪ್ರಕ್ರಿಯೆ ಪೂರ್ಣಗೊಂಡು ಅಂತಿಮ ಮತದಾರರ ಪಟ್ಟಿ ಸಿದ್ಧವಾದ ಬಳಿಕ ಚುನಾವಣೆ ನಡೆಸಲು ಸಾಧ್ಯವಾಗಲಿದೆ. ಇಲ್ಲವಾದಲ್ಲಿ 2011ರ ಜನಗಣತಿಯ ಆಧಾರದ ಮೇಲಾದರೂ ಚುನಾವಣೆ ನಡೆಸಲು ಅನುಮತಿ ನೀಡಬೇಕು. ಸದ್ಯ ಜನಗಣತಿ ಪ್ರಕ್ರಿಯೆ ಆರಂಭವಾಗುತ್ತಿದೆ. ಜನಗಣತಿ ಪೂರ್ಣಗೊಳ್ಳುವವರೆಗೆ ಕಾಯಬೇಕೇ ಅಥವಾ ಬೇರೆ ಯಾವುದಾದರೂ ಮಾನದಂಡದ ಆಧಾರದ ಮೇಲೆ ಚುನಾವಣೆ ನಡೆಸಬೇಕೇ ಎಂಬುದನ್ನು ನಿರ್ಧರಿಸಬೇಕು. ಚುನಾವಣೆ ಮುಂದೂಡಿಕೆಯಾಗುತ್ತಿರುವುದಕ್ಕೆ ಈ ಗೊಂದಲಗಳೇ ಕಾರಣವಾಗಿವೆ ಎಂದು ಡಾ.ಜಿ. ಪರಮೇಶ್ವರ್ ತಿಳಿಸಿದರು.

3ನೇ ಮುಖ್ಯಮಂತ್ರಿ: ಅನಗತ್ಯ ಚರ್ಚೆ

ರಾಜ್ಯದಲ್ಲಿ ಮೂರನೇ ಮುಖ್ಯಮಂತ್ರಿ ನೇಮಕವಾಗಲಿದ್ದಾರೆ ಎಂಬ ಚರ್ಚೆಗಳ ಕುರಿತು ಪ್ರತಿಕ್ರಿಯಿಸಿ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಸಮರ್ಥವಾಗಿ ಸರ್ಕಾರವನ್ನು ಮುನ್ನಡೆಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿನ ಭರವಸೆಗಳನ್ನು ಕಳೆದ ಮೂರು ವರ್ಷಗಳಲ್ಲಿ ಈಡೇರಿಸುವ ನಿಟ್ಟಿನಲ್ಲಿ ಸಿದ್ದರಾಮಯ್ಯ ಅವರು ಕಾರ್ಯನಿರ್ವಹಿಸಿದ್ದಾರೆ. ಉಳಿದ ಪ್ರಣಾಳಿಕೆಯ ಅಂಶಗಳನ್ನು ಕಾರ್ಯಗತಗೊಳಿಸುವತ್ತ ಮುಖ್ಯಮಂತ್ರಿಗಳು ಗಮನಹರಿಸಿದ್ದಾರೆ. ಇನ್ನೂ ಒಂದೂವರೆ ವರ್ಷದ ಅವಧಿಯಿದ್ದು, ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಪರಿಣಾಮಕಾರಿಯಾಗಿ ಕೆಲಸ ಮಾಡಿ 2028ರಲ್ಲಿ ಮತ್ತೆ ಅಧಿಕಾರಕ್ಕೆ ಮರಳುವುದು ನಮ್ಮ ಗುರಿಯಾಗಿದೆ. ಹೀಗಿರುವಾಗ ಮೂರನೇ ಮುಖ್ಯಮಂತ್ರಿ ಕುರಿತು ಅನಗತ್ಯ ಚರ್ಚೆ ನಡೆಸುವುದು ಸರಿಯಲ್ಲ ಎಂದು ಡಾ.ಜಿ. ಪರಮೇಶ್ವರ್ ಹೇಳಿದರು.



ಉತ್ತರ ಕನ್ನಡ ಜಿಲ್ಲೆ ಗೋಕರ್ಣದ ಹಾಲಕ್ಕಿ ಸಮಾಜದ ಮುಖಂಡರಾದ ನಾಗೇಶಗೌಡ , ಪದ್ಮನಾಭಗೌಡ ಮತ್ತು ಉದಯ್ ಮಯ್ಯರ್ ನೇತೃತ್ವದ ನಿಯೋಗವು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಗೃಹಕಚೇರಿ ಕೃಷ್ಣಾದಲ್ಲಿ ಬುಧವಾರ ಭೇಟಿಮಾಡಿ ಧಾರ್ಮಿಕ ಕಾರ್ಯಕ್ರಮಕ್ಕೆ ಆಹ್ವಾನ ನೀಡಿತು.



ಸಫ್ರಾನ್ ಇಂಡಿಯಾ ಸಿಇಒ ಜೆ.ಎಸ್.ಗಾಂವಕರ್ ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಬುಧವಾರ ವಿಧಾನಸೌಧದ ಸಿಎಂ ಕಚೇರಿಯಲ್ಲಿ ಭೇಟಿಮಾಡಿದ್ದರು. ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ, ಸಿಎಂ ಆರ್ಥಿಕ ಸಲಹೆಗಾರ ಎಲ್.ಕೆ.ಅತೀಕ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ.ಎಸ್. ಸೆಲ್ವಕುಮಾರ್, ಹಾಜರಿದ್ದರು.

ಬಂಕ್‌ಗಳಲ್ಲಿ ನಿಗದಿಗಿಂತ ಹೆಚ್ಚಿನ ಪ್ರಮಾಣದ ಎಥೆನಾಲ್ ಮಿಶ್ರಣ: ಕೇಂದ್ರ ಸಚಿವ ಹರ್ದೀಪ್‌ಸಿಂಗ್ ಪುರಿಗೆ ರಿಜ್ವಾನ್ ಅರ್ಷದ್ ಪತ್ರ



ಬೆಂಗಳೂರು, ನ.18: ರಾಜ್ಯದ ಪೆಟ್ರೋಲ್ ಬಂಕ್‌ಗಳಲ್ಲಿ ನಿಗದಿತ ಮಿತಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಎಥೆನಾಲ್ ಮಿಶ್ರಣ ಮಾಡಲಾಗುತ್ತಿದೆ ಮತ್ತು ಇಂಧನ ವಿತರಣಾ ಯಂತ್ರಗಳ ಅಳತೆಯಲ್ಲಿ ವ್ಯತ್ಯಾಸ ಕಂಡುಬಂದಿದೆ ಎಂದು ಆರೋಪಿಸಿ ಆಹಾರ ಸಚಿವ ರಿಜ್ವಾನ್ ಅರ್ಷದ್ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರಿಗೆ ಪತ್ರ ಬರೆದಿದ್ದು, ಜನಸಾಮಾನ್ಯರ ಹಿತಾಸಕ್ತಿ ಕಾಪಾಡಲು ತಕ್ಷಣವೇ ಮಧ್ಯಪ್ರವೇಶಿಸುವಂತೆ ಅವರು ಒತ್ತಾಯಿಸಿದ್ದಾರೆ.

ಮೈಲೇಜ್ ಕುಸಿತ, ಎಂಜಿನ್ ದುರಸ್ತಿ ಮತ್ತು ಕಡಿಮೆ ಪ್ರಮಾಣದ ಇಂಧನ ಪೂರೈಕೆಯ ಕುರಿತು ಸಾರ್ವಜನಿಕರಿಂದ ವ್ಯಾಪಕ ದೂರುಗಳು ಬಂದ ಹಿನ್ನೆಲೆಯಲ್ಲಿ, ಕಳೆದ ಸೆಪ್ಟೆಂಬರ್‌ನಲ್ಲಿ ರಾಜ್ಯದ 63 ಪೆಟ್ರೋಲ್ ಬಂಕ್‌ಗಳಿಂದ ಮಾದರಿಗಳನ್ನು ಸಂಗ್ರಹಿಸಲಾಗಿತ್ತು. ತೈಲ ಕಂಪನಿಗಳ ಪ್ರಯೋಗಾಲಯಗಳು ನೀಡಿದ 42 ವರದಿಗಳಲ್ಲಿ ಎಥೆನಾಲ್ ಪ್ರಮಾಣವನ್ನು ಉಲ್ಲೇಖಿಸಿರಲಿಲ್ಲ. ಹೀಗಾಗಿ, ರಾಜ್ಯ ಸರ್ಕಾರವು ಎನ್‌ಎಬಿಎಲ್ ಮಾನ್ಯತೆ ಪಡೆದ ಸ್ವತಂತ್ರ ಪ್ರಯೋಗಾಲಯಗಳಲ್ಲಿ 14 ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಿತು. ಇದರಲ್ಲಿ 11 ಮಾದರಿಗಳಲ್ಲಿ ನಿಗದಿತ ಶೇ.20ಕ್ಕಿಂತ ಹೆಚ್ಚು (ಗರಿಷ್ಠ ಶೇ.31.2 ರವರೆಗೆ) ಎಥೆನಾಲ್ ಇರುವುದು ದೃಢಪಟ್ಟಿದೆ. ಲೀಟರ್‌ಗೆ 120ರಿಂದ 140 ರೂ. ಬೆಲೆಯ ಪ್ರೀಮಿಯಂ ಪೆಟ್ರೋಲ್‌ನಲ್ಲೂ ಹೆಚ್ಚಿನ ಎಥೆನಾಲ್ ಕಂಡುಬಂದಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಕಾನೂನು ಮಾಪನಶಾಸ್ತ್ರ ಇಲಾಖೆಯು ರಾಜ್ಯದ 805 ಬಂಕ್‌ಗಳಲ್ಲಿ ನಡೆಸಿದ ತಪಾಸಣೆಯಲ್ಲಿ 768 ಬಂಕ್‌ಗಳ ಯಂತ್ರಗಳಿಗೆ ಮರು-ಮಾಪನಾಂಕ ನಿರ್ಣಯ ಅಗತ್ಯವಿರುವುದು ಕಂಡುಬಂದಿದೆ. 3,071 ನಾಜಲ್‌ಗಳ ಪೈಕಿ 2,618 ನಾಜಲ್‌ಗಳ ಅಳತೆಯಲ್ಲಿ ವ್ಯತ್ಯಾಸವಿದ್ದು, 101 ಬಂಕ್‌ಗಳ ವಿರುದ್ಧ ಪ್ರಕರಣ ದಾಖಲಿಸಿ 6.66 ಲಕ್ಷ ರೂ. ದಂಡ ವಸೂಲಿ ಮಾಡಲಾಗಿದೆ. ಯಂತ್ರಗಳು 9ರಿಂದ 11 ತಿಂಗಳಲ್ಲೇ ನಿಖರತೆ ಕಳೆದುಕೊಳ್ಳುತ್ತಿರುವುದರಿಂದ, ತಪಾಸಣಾ ಅವಧಿಯನ್ನು 2 ವರ್ಷಕ್ಕೆ ವಿಸ್ತರಿಸುವ ಹಾಗೂ ಖಾಸಗಿ ಕೇಂದ್ರಗಳಿಗೆ ಅನುಮತಿ ನೀಡುವ ಕೇಂದ್ರದ ಅಧಿಸೂಚನೆಗಳನ್ನು ರಾಜ್ಯದಲ್ಲಿ ಜಾರಿಗೊಳಿಸದಿರಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.

ಸಾಮಾನ್ಯಜನರ ಹಿತ ಕಾಪಾಡಲು ಮಧ್ಯಪ್ರವೇಶಿಸುವಂತೆ ಒತ್ತಾಯ

ಬೆಂಗಳೂರು, ನ.18: ರಾಜ್ಯದ ಪೆಟ್ರೋಲ್ ಬಂಕ್‌ಗಳಲ್ಲಿ ನಿಗದಿತ ಮಿತಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಎಥೆನಾಲ್ ಮಿಶ್ರಣ ಮಾಡಲಾಗುತ್ತಿದೆ ಮತ್ತು ಇಂಧನ ವಿತರಣಾ ಯಂತ್ರಗಳ ಅಳತೆಯಲ್ಲಿ ವ್ಯತ್ಯಾಸ ಕಂಡುಬಂದಿದೆ ಎಂದು ಆರೋಪಿಸಿ ಆಹಾರ ಸಚಿವ ರಿಜ್ವಾನ್ ಅರ್ಷದ್ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರಿಗೆ ಪತ್ರ ಬರೆದಿದ್ದು, ಜನಸಾಮಾನ್ಯರ ಹಿತಾಸಕ್ತಿ ಕಾಪಾಡಲು ತಕ್ಷಣವೇ ಮಧ್ಯಪ್ರವೇಶಿಸುವಂತೆ ಅವರು ಒತ್ತಾಯಿಸಿದ್ದಾರೆ.

ಮೈಲೇಜ್ ಕುಸಿತ, ಎಂಜಿನ್ ದುರಸ್ತಿ ಮತ್ತು ಕಡಿಮೆ ಪ್ರಮಾಣದ ಇಂಧನ ಪೂರೈಕೆಯ ಕುರಿತು ಸಾರ್ವಜನಿಕರಿಂದ ವ್ಯಾಪಕ ದೂರುಗಳು ಬಂದ ಹಿನ್ನೆಲೆಯಲ್ಲಿ, ಕಳೆದ ಸೆಪ್ಟೆಂಬರ್‌ನಲ್ಲಿ ರಾಜ್ಯದ 63 ಪೆಟ್ರೋಲ್ ಬಂಕ್‌ಗಳಿಂದ ಮಾದರಿಗಳನ್ನು ಸಂಗ್ರಹಿಸಲಾಗಿತ್ತು. ತೈಲ ಕಂಪನಿಗಳ ಪ್ರಯೋಗಾಲಯಗಳು ನೀಡಿದ 42 ವರದಿಗಳಲ್ಲಿ ಎಥೆನಾಲ್ ಪ್ರಮಾಣವನ್ನು ಉಲ್ಲೇಖಿಸಿರಲಿಲ್ಲ. ಹೀಗಾಗಿ, ರಾಜ್ಯ ಸರ್ಕಾರವು ಎನ್‌ಎಬಿಎಲ್ ಮಾನ್ಯತೆ ಪಡೆದ ಸ್ವತಂತ್ರ ಪ್ರಯೋಗಾಲಯಗಳಲ್ಲಿ 14 ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಿತು. ಇದರಲ್ಲಿ 11 ಮಾದರಿಗಳಲ್ಲಿ ನಿಗದಿತ ಶೇ.20ಕ್ಕಿಂತ ಹೆಚ್ಚು (ಗರಿಷ್ಠ ಶೇ.31.2 ರವರೆಗೆ) ಎಥೆನಾಲ್ ಇರುವುದು ದೃಢಪಟ್ಟಿದೆ. ಲೀಟರ್‌ಗೆ 120ರಿಂದ 140 ರೂ. ಬೆಲೆಯ ಪ್ರೀಮಿಯಂ ಪೆಟ್ರೋಲ್‌ನಲ್ಲೂ ಹೆಚ್ಚಿನ ಎಥೆನಾಲ್ ಕಂಡುಬಂದಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಕಾನೂನು ಮಾಪನಶಾಸ್ತ್ರ ಇಲಾಖೆಯು ರಾಜ್ಯದ 805 ಬಂಕ್‌ಗಳಲ್ಲಿ ನಡೆಸಿದ ತಪಾಸಣೆಯಲ್ಲಿ 768 ಬಂಕ್‌ಗಳ ಯಂತ್ರಗಳಿಗೆ ಮರು-ಮಾಪನಾಂಕ ನಿರ್ಣಯ ಅಗತ್ಯವಿರುವುದು ಕಂಡುಬಂದಿದೆ. 3,071 ನಾಜಲ್‌ಗಳ ಪೈಕಿ 2,618 ನಾಜಲ್‌ಗಳ ಅಳತೆಯಲ್ಲಿ ವ್ಯತ್ಯಾಸವಿದ್ದು, 101 ಬಂಕ್‌ಗಳ ವಿರುದ್ಧ ಪ್ರಕರಣ ದಾಖಲಿಸಿ 6.66 ಲಕ್ಷ ರೂ. ದಂಡ ವಸೂಲಿ ಮಾಡಲಾಗಿದೆ. ಯಂತ್ರಗಳು 9ರಿಂದ 11 ತಿಂಗಳಲ್ಲೇ ನಿಖರತೆ ಕಳೆದುಕೊಳ್ಳುತ್ತಿರುವುದರಿಂದ, ತಪಾಸಣಾ ಅವಧಿಯನ್ನು 2 ವರ್ಷಕ್ಕೆ ವಿಸ್ತರಿಸುವ ಹಾಗೂ ಖಾಸಗಿ ಕೇಂದ್ರಗಳಿಗೆ ಅನುಮತಿ ನೀಡುವ ಕೇಂದ್ರದ ಅಧಿಸೂಚನೆಗಳನ್ನು ರಾಜ್ಯದಲ್ಲಿ ಜಾರಿಗೊಳಿಸದಿರಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.



ಭಾರತದಲ್ಲಿ ಯುಎಇ ರಾಯಭಾರಿ ಅಬ್ದುಲ್ಲ ಸೈಫ್ ಅಲಿ ಸ್ಲಯೆಮ್ ಅಲ್ಶೂಅಯ್ಮಿ ಅವರು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಬುಧವಾರ ಭೇಟಿಯಾಗಿ ಮಾತುಕತೆ ನಡೆಸಿದರು.

ನಮ್ಮನ್ನು ನೆನಪಿಸಿಕೊಳ್ಳದಿದ್ದರೆ ಎಚ್‌ಡಿಕೆಗೆ ನಿದ್ದೆ ಬರಲ್ಲ

ಅವರೊಬ್ಬ ಚಪಲ ಚೆನ್ನಿಗರಾಯನ ರೀತಿ: ಡಿ.ಕೆ.ಸುರೇಶ್

ಬೆಂಗಳೂರು, ನ.18: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಚಪಲ ಚೆನ್ನಿಗರಾಯ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಬಿರುದು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅವರು (ಎಚ್‌ಡಿಕೆ) ದೊಡ್ಡವರು, ಬಾಯಿಗೆ ಬಂದದ್ದನ್ನು ಮಾತನಾಡುತ್ತಿರುತ್ತಾರೆ. ಚಪಲ ಚೆನ್ನಿಗರಾಯ ಎನ್ನುತ್ತಾರಲ್ಲ ಆ ರೀತಿ. ಅಂತಹವರನ್ನು ಏನೂ ಮಾಡಲು ಸಾಧ್ಯವಿಲ್ಲ ಎಂದು ಟೀಕಿಸಿದ್ದಾರೆ.

ಮಂಗಳೂರಿನಲ್ಲಿ ನಡೆದ ಸಂಪುಟ ಸಭೆ ಕೇವಲ ವ್ಯವಹಾರ ವಿಸ್ತರಣೆಗಾಗಿ ನಡೆದಿವೆ ಎಂದು ಆರೋಪಿಸಿದ್ದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ



ಮಾಜಿ ಸಂಸದ ಡಿ.ಕೆ ಸುರೇಶ್ ವಾಗ್ದಾಳಿ ನಡೆಸಿದ್ದಾರೆ. ಚಪಲ ಚೆನ್ನಿಗರಾಯನಿಗೆ ನಮ್ಮನ್ನು ನೆನಪಿಸಿಕೊಳ್ಳದಿದ್ದರೆ ಊಟ ಸೇರಲ್ಲ, ನಿದ್ದೆ ಬರಲ್ಲ ಎಂದಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಡಿ.ಕೆ. ಸುರೇಶ್, ಕುಮಾರಸ್ವಾಮಿ ಅವರು ನಾಲಿಗೆಯಲ್ಲಿ ಮೂಳೆ ಇಲ್ಲ ಎಂದು ಏನೇನೋ ಮಾತನಾಡುತ್ತಿರುತ್ತಾರೆ. ಅವರಿಗೆ ನಮ್ಮನ್ನು ನೆನಪಿಸಿಕೊಳ್ಳದಿದ್ದರೆ ಊಟ ಸೇರಲ್ಲ, ನಿದ್ದೆ ಬರಲ್ಲ, ಇನ್ನೊಂದು ಆಗುವುದಿಲ್ಲವಂತೆ. ಮೂರೂ ಸೇರದೇ ಇರುವವರಿಗೆ ಏನು ಮಾಡಲು ಸಾಧ್ಯ. ನೀವಾದರೂ ಕನಿಷ್ಠ ಅವರಿಗೆ ಊಟವನ್ನಾದರೂ ಮಾಡಿಸಿ ಎಂದು ವ್ಯಂಗ್ಯವಾಡಿದ್ದಾರೆ.

ಗ್ರಾಪಂಗಳಿಗೆ ಕೇಂದ್ರ ನೀಡಿದ ಅನುದಾನದಲ್ಲಿ 225 ಕೋಟಿ ರೂ.ಗಳಷ್ಟು ವ್ಯತ್ಯಾಸ

ರಾಜ್ಯ ಸರ್ಕಾರ ತನ್ನ ಜವಾಬ್ದಾರಿ ಸರಿಯಾಗಿ ನಿರ್ವಹಿಸಲಿ: ಪ್ರತಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ

ಮೈಸೂರು, ನ.18: ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರುತ್ತಿರುವ ಅನುದಾನದ ವಿಚಾರದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಿ, ಕೇಂದ್ರದ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಹೋಗುವುದಾಗಿ ಹೇಳುತ್ತಿರುವ ರಾಜ್ಯ ಸರ್ಕಾರ ಮೊದಲು ತನ್ನ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಲಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ನೀಡಿರುವ ಅನುದಾನವನ್ನು ಸ್ಥಳೀಯ ಸಂಸ್ಥೆಗಳಿಗೆ ಸಮರ್ಪಕವಾಗಿ ಬಿಡುಗಡೆ ಮಾಡದೆ, ತನ್ನ ತಪ್ಪುಗಳನ್ನು ಮುಚ್ಚಿಕೊಳ್ಳಲು ಕೇಂದ್ರದ ಮೇಲೆ ಆರೋಪ ಮಾಡುವುದು ಸರಿಯಲ್ಲ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮನ್ವಯದಿಂದ ಕಾರ್ಯನಿರ್ವಹಿಸಿದರೆ ರಾಜ್ಯಕ್ಕೆ ಹೆಚ್ಚಿನ ಪ್ರಯೋಜನವಾಗಲಿದೆ. ಆದರೆ, ರಾಜ್ಯ ಸರ್ಕಾರ ಪದೇಪದೇ ಕೇಂದ್ರದೊಂದಿಗೆ ಸಂಘರ್ಷಕ್ಕೆ ಇಳಿಯುವ ಮೂಲಕ ಅಭಿವೃದ್ಧಿಗೆ ಅಡ್ಡಿಯಾಗುತ್ತಿದೆ. ಈ ಹಿಂದೆ ಸಿದ್ದರಾಮಯ್ಯನವರು ಕೇಂದ್ರದೊಂದಿಗೆ ಸಂಘರ್ಷಕ್ಕೆ ಇಳಿಯುತ್ತಿದ್ದರು. ಈಗ ಡಿ.ಕೆ.ಶಿವಕುಮಾರ್ ಕೂಡ ಅದೇ ಹಾದಿ ಹಿಡಿದಿದ್ದಾರೆ ಎಂದರು.

2024-25ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿಗಾಗಿ 2,133.25 ಕೋಟಿ ಅನುದಾನ ಬಿಡುಗಡೆ ಮಾಡಿದೆ. ಆದರೆ, ರಾಜ್ಯ ಸರ್ಕಾರ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಿರುವ ಹಣ ಕೇವಲ 1,907 ಕೋಟಿ ಮಾತ್ರ. ಇದರಿಂದ ಸುಮಾರು 225 ಕೋಟಿ ವ್ಯತ್ಯಾಸ ಕಂಡುಬಂದಿದೆ. ಕೇಂದ್ರದಿಂದ ಹಣ ಬಿಡುಗಡೆಯಾದ ಹತ್ತು ದಿನಗಳೊಳಗೆ ರಾಜ್ಯ ಸರ್ಕಾರ ಅದನ್ನು ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಬೇಕು ಎಂಬ ನಿಯಮವಿದೆ. ಇದು ಕೇಂದ್ರ ಸರ್ಕಾರ ಹೊಸದಾಗಿ ರೂಪಿಸಿರುವ ನಿಯಮವಲ್ಲ.



ಹಿಂದೆಯೂ ಇತ್ತು. ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲು ಚುನಾವಣೆಗಳು ನಡೆಯುವುದು ಕೂಡ ಪ್ರಮುಖ ಮಾನದಂಡವಾಗಿದೆ. ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳನ್ನು ರಾಜ್ಯ ಸರ್ಕಾರ ನಿರಂತರವಾಗಿ ಮುಂದೂಡುತ್ತಿದೆ. ಚುನಾವಣೆ ನಡೆಸದೆ ಕೇಂದ್ರ ಸರ್ಕಾರ ಅನುದಾನ ನೀಡುತ್ತಿಲ್ಲ ಎಂದು ಆರೋಪಿಸುವುದು ಎಷ್ಟು ಸರಿ. ಗ್ರಾಮ ಪಂಚಾಯಿತಿಗಳಿಗೆ



ಭಾರತದಲ್ಲಿ ಇರಾನ್ ರಾಯಭಾರಿ ಡಾ. ಮೊಹಮ್ಮದ್ ಫಥಾಲಿ ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ವಿಧಾನಸೌಧದ ಸಿಎಂ ಕಚೇರಿಯಲ್ಲಿ ಬುಧವಾರ ಭೇಟಿಯಾಗಿ ಕರ್ನಾಟಕ – ಇರಾನ್ ನಡುವೆ ವಿವಿಧ ಕ್ಷೇತ್ರಗಳಲ್ಲಿ ಸಂಬಂಧ ವೃದ್ಧಿ ಕುರಿತು ಮಾತುಕತೆ ನಡೆಸಿದರು. ಇರಾನ್ ರಾಯಭಾರ ಕಚೇರಿಯ ಅಧಿಕಾರಿಗಳು ಇದ್ದರು. ಕರ್ನಾಟಕ ಸರ್ಕಾರದ ಸಚಿವರಾದ ಎಂ.ಬಿ. ಪಾಟೀಲ್, ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ.ಸುಧೀಂದ್ರ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಐಎಎಸ್, ನಗರಾಭಿವೃದ್ಧಿ ಇಲಾಖೆ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಎಸ್.ಸೆಲ್ವಕುಮಾರ್ ಮತ್ತಿತರರು ಇದ್ದರು.

ಆನೆ ಹಾವಳಿ ತಡೆಗೆ ಕ್ರಮ: ಸಚಿವ ರಾಮಲಿಂಗಾರೆಡ್ಡಿ ಭರವಸೆ

ಬೆಂಗಳೂರು, ನ.18: ಹಾಸನ ಜಿಲ್ಲೆಯ ಬೇಲೂರಿನಲ್ಲಿ ಆನೆ ಹಾವಳಿಯನ್ನು ತಡೆಯಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ಬೇಲೂರಿನಲ್ಲಿ ಹಿಂದೆ ಅರಣ್ಯ ಪ್ರದೇಶವಿತ್ತು, ಆದರೆ ಈಗ ಇಲ್ಲವಾಗಿದೆ. 2009ರಲ್ಲಿ ಕೆಲವು ಆನೆಗಳು ಇಲ್ಲಿಗೆ ಬಂದಿದ್ದು, ಕೋವಿಡ್ ಸಮಯದಲ್ಲಿ ಅವುಗಳ ಸಂಖ್ಯೆ ಹೆಚ್ಚಾಗಿ ಈಗ 55–60 ಆನೆಗಳು ನೆಲೆಸಿವೆ. ಅರಣ್ಯ ಇಲ್ಲದ ಕಾರಣ ಈ ಆನೆಗಳು ತೋಟ ಮತ್ತು ಬೆಳೆಗಳಿಗೆ ನುಗ್ಗುತ್ತಿವೆ, ಇದರಿಂದ ಸ್ಥಳೀಯರಿಗೆ ತೊಂದರೆಯಾಗಿದೆ. ಎಂದರು. ಸ್ಥಳೀಯರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಆನೆಗಳನ್ನು ಬೇರೆಡೆ ಸ್ಥಳಾಂತರಿಸುವ ಭರವಸೆ ನೀಡಲಾಗಿದೆ. ಮಳೆಗಾಲ ಮುಗಿದ ನಂತರ ಶಿವಮೊಗ್ಗ ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದರು.

ಬರ ಪರಿಹಾರ: ರಾಜ್ಯದ ಮೂರು ಮನವಿಗೂ ಕೇಂದ್ರದಿಂದ ಉತ್ತರವಿಲ್ಲ

■ ಪ್ರಧಾನಿ, ಗೃಹ ಹಾಗೂ ಕೃಷಿ ಸಚಿವರಿಂದಲೂ ಪ್ರತಿಕ್ರಿಯೆ ಬಂದಿಲ್ಲ: ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್



ಬೆಂಗಳೂರು, ನ.18: ಕೇಂದ್ರ ಸರ್ಕಾರದಿಂದ ಬರ ಪರಿಹಾರ ಪಡೆಯುವ ಸಂಬಂಧ ಈಗಾಗಲೇ ಮೂರು ಬಾರಿ ಮನವಿ ಸಲ್ಲಿಸಲಾಗಿದೆ. ಮನವಿ ಸಲ್ಲಿಸಿದ ಬಳಿಕ ಕೇಂದ್ರದ ಕೃಷಿ ಸಚಿವರು, ಗೃಹ ಸಚಿವರು ಹಾಗೂ ಪ್ರಧಾನಮಂತ್ರಿಗಳ ಕಚೇರಿಗೆ ಭೇಟಿ ಮಾಡಲು ಸಮಯಾವಕಾಶ ಕೋರಿದ್ದೇವೆ. ಖುದ್ದಾಗಿ ಭೇಟಿ ಮಾಡಿ ರಾಜ್ಯದ ಪರಿಸ್ಥಿತಿಯನ್ನು ವಿವರಿಸಿ, ರೈತರಿಗೆ ಪರಿಹಾರ ಒದಗಿಸುವಂತೆ ಮನವಿ ಮಾಡುವುದು ನಮ್ಮ ಉದ್ದೇಶವಾಗಿತ್ತು. ಆದರೆ, ಈವರೆಗೂ ಯಾರಿಂದಲೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಡಿಸಿಎಂ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ಬೆಂಗಳೂರಿನ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿ, ಕಳೆದ ಬಾರಿಯೂ ಕೇಂದ್ರ ಸರ್ಕಾರ ರಾಜ್ಯಕ್ಕೆ ಪರಿಹಾರ ನೀಡಿರಲಿಲ್ಲ. ಈ ಹಿನ್ನೆಲೆಯಲ್ಲಿ ನಾವು ಪ್ರತಿಭಟನೆ ನಡೆಸಿ, ಸುಪ್ರೀಂ ಕೋರ್ಟ್ ಮೊರೆ ಹೋದ ಬಳಿಕ ನ್ಯಾಯಾಲಯದ ನಿರ್ದೇಶನದ ಮೇರೆಗೆ ಪರಿಹಾರ ನೀಡಲಾಯಿತು. ಆದರೂ ಕೇವಲ 3,500 ಕೋಟಿ ಮಾತ್ರ ಬಿಡುಗಡೆ ಮಾಡಲಾಗಿತ್ತು. ಈ ಬಾರಿಯೂ ಅದೇ ಪರಿಸ್ಥಿತಿ ಮರುಕಳಿಸುವುದಿಲ್ಲ ಎಂಬ ವಿಶ್ವಾಸವಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಇದೆ ಎಂಬ ಕಾರಣಕ್ಕೆ ಕೇಂದ್ರ ಸರ್ಕಾರ ಬೇರೆ ರೀತಿಯಲ್ಲಿ ಯೋಚಿಸಬಾರದು. ಜನರು ಸಂಕಷ್ಟದಲ್ಲಿದ್ದಾರೆ, ರೈತರು ತೊಂದರೆ ಅನುಭವಿಸುತ್ತಿದ್ದಾರೆ. ಎಲ್ಲ ರಾಜಕೀಯ ಪಕ್ಷಗಳಲ್ಲೂ ರೈತರಿದ್ದಾರೆ. ಹೀಗಾಗಿ ರೈತರ ಸಂಕಷ್ಟದ ವಿಚಾರದಲ್ಲಿ ರಾಜಕೀಯ ಮಾಡಬಾರದು ಎಂದು ಹೇಳಿದರು.

ಪರಿಹಾರ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಮೊರೆಹೋಗುವ ಕುರಿತು ಸದ್ಯಕ್ಕೆ ನಿರ್ಧಾರ ಕೈಗೊಂಡಿಲ್ಲ. ಮುಂದಿನ ದಿನಗಳಲ್ಲಿ ಕೇಂದ್ರ ಯಾವ ರೀತಿ ನಡೆದುಕೊಳ್ಳುತ್ತದೆ ಎಂಬುದನ್ನು ಗಮನಿಸಿ ನಿರ್ಧಾರ ಮಾಡಲಾಗುವುದು.
–ಡಾ.ಜಿ. ಪರಮೇಶ್ವರ್, ಡಿಸಿಎಂ

ಕಲಬುರಗಿ, ಹುಬ್ಬಳ್ಳಿ, ಮಂಗಳೂರಿಗೂ ಜಾಗತಿಕ ತಂತ್ರಜ್ಞಾನದ ಸ್ಪರ್ಶ

ಬೆಂಗಳೂರು, ನ.18: ಕರ್ನಾಟಕದ ಉದ್ಯಮಶೀಲತೆ ಮತ್ತು ನಾವೀನ್ಯತೆಯ ಪಯಣಕ್ಕೆ ಹೊಸ ದಿಕ್ಕು ನೀಡುವ ಆಶಯವನ್ನು ಬೆಂಗಳೂರು ನಾವೀನ್ಯತೆ ವರದಿ 2026 ವ್ಯಕ್ತಪಡಿಸಿದ್ದು, ಜಾಗತಿಕ ತಂತ್ರಜ್ಞಾನ ಕಂಪನಿಗಳನ್ನು ರಾಜ್ಯದ ವಿವಿಧ ನಗರಗಳಿಗೆ ಆಕರ್ಷಿಸುವ ಮೂಲಕ, ಬೆಂಗಳೂರು ಮಾತ್ರವಲ್ಲದೆ ಕಲಬುರಗಿ, ಹುಬ್ಬಳ್ಳಿ ಮತ್ತು ಮಂಗಳೂರಿನಂತಹ ನಗರಗಳನ್ನೂ ಭವಿಷ್ಯದ ತಂತ್ರಜ್ಞಾನ ಕೇಂದ್ರಗಳನ್ನಾಗಿ ರೂಪಿಸುವ ಗುರಿಯನ್ನು ಇದು ಹೊಂದಿದೆ ಎಂದು ಗೃಹ, ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಬೆಂಗಳೂರು ಅಂತರರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರದಲ್ಲಿ (ಬಿಐಇಸಿ) ನಡೆದ ಬೆಂಗಳೂರು ಟೆಕ್ ಶೃಂಗಸಭೆ 2026ರ ಎರಡನೇ ದಿನದ ಕಾರ್ಯಕ್ರಮದಲ್ಲಿ ಬೆಂಗಳೂರು ನಾವೀನ್ಯತೆ ವರದಿ– 2026 ಬಿಡುಗಡೆ ಮಾಡಿ ಮಾತನಾಡಿದರು.

ಕರ್ನಾಟಕ ಡಿಜಿಟಲ್ ಆರ್ಥಿಕತೆ ಮಿಷನ್ (ಕೆಡಿಇಎಂ) ಮತ್ತು 3ಒನ್4 ಕ್ಯಾಪಿಟಲ್ ಜಂಟಿಯಾಗಿ, ಟ್ರಾಕ್ಸನ್‌ನ ದತ್ತಾಂಶಗಳ ನೆರವಿನಿಂದ ಈ ವರದಿಯನ್ನು ಸಿದ್ಧಪಡಿಸಿವೆ. ದೇಶಿ ಸ್ಟಾರ್ಟ್‌ಅಪ್ ಮತ್ತು ಮಾರುಕಟ್ಟೆ ದತ್ತಾಂಶಗಳನ್ನು ಆಧರಿಸಿ ಸಿದ್ಧಪಡಿಸಿರುವ ಈ ವರದಿಯು ಬೆಂಗಳೂರಿನ ಪ್ರತಿಭಾ ಸಂಪನ್ಮೂಲ, ಹೂಡಿಕೆ, ಯುನಿಕಾರ್ನ್ ಕಂಪನಿಗಳು, ನೀತಿಗಳು, ಬೆಂಗಳೂರು ಆಚೆಗಿನ ಉದ್ಯಮ ಸಮೂಹಗಳು ಹಾಗೂ ಆರು ಪ್ರಮುಖ ಉದಯೋನ್ಮುಖ ತಂತ್ರಜ್ಞಾನ ಕ್ಷೇತ್ರಗಳ ಬೆಳವಣಿಗೆಯನ್ನು ವಿಶ್ಲೇಷಿಸಿದೆ. ಈ ವರದಿಯಲ್ಲಿನ ದತ್ತಾಂಶಗಳನ್ನು ಸೆಪ್ಟೆಂಬರ್ 23ರವರೆಗೆ ನವೀಕರಿಸಲಾಗಿದೆ.

ವರದಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಸಚಿವ ಸಚಿವ ಪ್ರಿಯಾಂಕ್ ಖರ್ಗೆ, ಕರ್ನಾಟಕದ ಉದ್ಯಮಶೀಲರು



ಬೆಂಗಳೂರಿನ ನಾವೀನ್ಯತೆ ವರದಿ 2026 ಬಿಡುಗಡೆ ಮಾಡಿದ ಸಚಿವ ಪ್ರಿಯಾಂಕ್ ಖರ್ಗೆ

ಈವರೆಗೆ ಸಾಧಿಸಿರುವ ಪ್ರಗತಿ ಮತ್ತು ಮುಂದಿನ ದಿನಗಳಲ್ಲಿ ಅವರು ಸಾಧಿಸಬಹುದಾದ ಬೆಳವಣಿಗೆಯ ಚಿತ್ರಣವನ್ನು ಬೆಂಗಳೂರು ನಾವೀನ್ಯತೆ ವರದಿ 2026 ನೀಡುತ್ತದೆ. ಈಗ ನಮ್ಮ ಮುಂದಿರುವ ಪ್ರಮುಖ ಕೆಲಸವೆಂದರೆ, ಜಾಗತಿಕ ಮಟ್ಟದ ಎಐ, ಕ್ವಾಂಟಮ್ ಅಥವಾ ಸೆಮಿಕಂಡಕ್ಟರ್ ಕಂಪನಿಗಳು ಕಲಬುರಗಿ, ಹುಬ್ಬಳ್ಳಿ ಅಥವಾ ಮಂಗಳೂರಿನಲ್ಲಿಯೂ ಯಶಸ್ವಿಯಾಗಿ ಬೆಳೆಯಲು ಅಗತ್ಯವಾದ ಅವಕಾಶಗಳನ್ನು ಸೃಷ್ಟಿಸುವುದು. ಡೀಪ್‌ಟೆಕ್ ಕ್ಷೇತ್ರದಲ್ಲಿ ತಾಳ್ಮೆ ಮತ್ತು ದೀರ್ಘಾವಧಿಯ ಬದ್ಧತೆ ಅಗತ್ಯ. ಕರ್ನಾಟಕ ಈ ದಾರಿಯಲ್ಲಿ ನಿರಂತರವಾಗಿ ಮುನ್ನಡೆಯಲಿದೆ ಎಂದು ಹೇಳಿದರು.

ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಡಾ. ಮಂಜುಳಾ ಎನ್., ಕೆಡಿಇಎಂ ಅಧ್ಯಕ್ಷ ಬಿ.ವಿ. ನಾಯ್ಡು, ಕರ್ನಾಟಕ ಸರ್ಕಾರದ ಸ್ಟಾರ್ಟ್‌ಅಪ್ ವಿಷನ್ ಗ್ರೂಪ್ ಅಧ್ಯಕ್ಷ ಪ್ರಶಾಂತ್ ಪ್ರಕಾಶ್ ಅವರು ಮಾತನಾಡಿದರು.

ವರದಿ ಮುಖ್ಯಾಂಶಗಳು

- 2010ರಿಂದ ಬೆಂಗಳೂರಿನ ಸ್ಟಾರ್ಟ್‌ಅಪ್‌ಗಳು ಸುಮಾರು 85 ಶತಕೋಟಿ ಡಾಲರ್ ಹೂಡಿಕೆ ಸಂಗ್ರಹಿಸಿವೆ.
- ಭಾರತದ ಡೀಪ್‌ಟೆಕ್ ಮತ್ತು ಸ್ವದೇಶಿ ಕೃತಕ ಬುದ್ಧಿಮತ್ತೆಯ ಎಐ ಕ್ಷೇತ್ರಗಳಲ್ಲಿನ ಸಕ್ರಿಯ ಹಾಗೂ ಹೂಡಿಕೆ ಪಡೆದ ಮಹಿಳಾ ನೇತೃತ್ವದ ಸ್ಟಾರ್ಟ್‌ಅಪ್‌ಗಳ ಪೈಕಿ ಶೇಕಡ 30ರಷ್ಟು ಬೆಂಗಳೂರಿನಲ್ಲಿ ಆರಂಭವಾಗಿವೆ.
- ನವೆಂಬರ್ 2024ರಿಂದ ಬೆಂಗಳೂರಿನೊಂದಿಗೆ ಸಂಬಂಧ ಹೊಂದಿರುವ 16 ಕಂಪನಿಗಳು ಷೇರುಪೇಟೆಯಲ್ಲಿ ನೋಂದಣಿಯಾಗಿವೆ. ಷೇರುಪೇಟೆಯಲ್ಲಿ ನೋಂದಣಿಯಾದ ಸಂದರ್ಭದಲ್ಲಿ ಈ ಕಂಪನಿಗಳ ಒಟ್ಟು ಮೌಲ್ಯ ಸುಮಾರು 42 ಶತಕೋಟಿ ಡಾಲರ್ ಆಗಿತ್ತು. ಈ ಅವಧಿಯಲ್ಲಿ ಭಾರತದಲ್ಲಿ ಹೂಡಿಕೆ ಪಡೆದ ಕಂಪನಿಗಳ ಒಟ್ಟು 226 ಐಪಿಒಗಳ ಪೈಕಿ 33 ಬೆಂಗಳೂರಿನ ಕಂಪನಿಗಳದ್ದಾಗಿವೆ. ಕರ್ನಾಟಕದಲ್ಲಿ ಪ್ರಧಾನ ಕಚೇರಿ ಹೊಂದಿರುವ ಕಂಪನಿಗಳ ಐಪಿಒಗಳ ಸಂಖ್ಯೆ 37ರಷ್ಟಿದ್ದು, ಇದು ಒಟ್ಟು ಐಪಿಒಗಳ ಸುಮಾರು ಶೇಕಡ 16ರಷ್ಟಿದೆ.
- ಬೆಂಗಳೂರು ವಿಶ್ವದ ಐದನೇ ಅತಿದೊಡ್ಡ ಯುನಿಕಾರ್ನ್ ಕೇಂದ್ರವಾಗಿ ಗುರುತಿಸಿಕೊಂಡಿದೆ. ಅಮೆರಿಕ, ಯುರೋಪ್ ಮತ್ತು ಚೀನಾ ಹೊರತುಪಡಿಸಿದರೆ ವಿಶ್ವದಲ್ಲೇ ಅತಿದೊಡ್ಡ ಯುನಿಕಾರ್ನ್ ಕೇಂದ್ರವಾಗಿದೆ. 2020ರಿಂದ ಭಾರತದಲ್ಲಿ ಸೃಷ್ಟಿಯಾಗಿರುವ 100 ಯುನಿಕಾರ್ನ್ ಕಂಪನಿಗಳ ಪೈಕಿ 46 ಬೆಂಗಳೂರಿನಲ್ಲಿವೆ.
- ಭಾರತದ 589 ಸೂನಿಕಾರ್ನ್ ಕಂಪನಿಗಳ ಪೈಕಿ 212 ಬೆಂಗಳೂರಿನಲ್ಲಿವೆ. ಇದು ಒಟ್ಟು ಕಂಪನಿಗಳ ಶೇಕಡ 36ರಷ್ಟಾಗಿದೆ. ಬೆಂಗಳೂರಿನ ಸ್ಟಾರ್ಟ್‌ಅಪ್‌ಗಳು ಸುಮಾರು ಐದು ವರ್ಷಗಳಲ್ಲಿ ಸೂನಿಕಾರ್ನ್ ಸ್ಥಾನ ತಲುಪುತ್ತಿವೆ. ಭಾರತದ ಸೂನಿಕಾರ್ನ್ ಕಂಪನಿಗಳು ಸಂಗ್ರಹಿಸಿರುವ ಒಟ್ಟು ಹೂಡಿಕೆಯ ಪೈಕಿ ಸುಮಾರು ಶೇಕಡ 38ರಷ್ಟು ಬೆಂಗಳೂರಿನ ಕಂಪನಿಗಳಿಗೆ ದೊರೆತಿದೆ.
- ನವೋದ್ಯಮಗಳಲ್ಲಿ ಬಂಡವಾಳ ಹೂಡಿಕೆ ಮಾಡುವ 300 ವೆಂಚರ್ ಕ್ಯಾಪಿಟಲ್ ಸಂಸ್ಥೆಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ಬೆಂಗಳೂರಿನಲ್ಲಿ ಭಾರತದ ಒಟ್ಟು ಕೆಟಗರಿ–1 ಪರ್ಯಾಯ ಹೂಡಿಕೆ ನಿಧಿಗಳಲ್ಲಿ (ಎಐಎಫ್) ಶೇಕಡ 21ರಷ್ಟು ಅಂದರೆ 75 ನಿಧಿಗಳಿವೆ. ಈ ಸಂಖ್ಯೆಯಲ್ಲಿ ಮುಂಬೈ ನಂತರ ಬೆಂಗಳೂರು ಎರಡನೇ ಸ್ಥಾನದಲ್ಲಿದೆ.
- ದೇಶೀಯ ಹೂಡಿಕೆ ಬಂಡವಾಳವೂ ಹೆಚ್ಚುತ್ತಿದೆ. ಕೆಟಗರಿ–1 ಮತ್ತು ಕೆಟಗರಿ–2 'ಎಐಎಫ್'ಗಳು ಸಂಗ್ರಹಿಸುತ್ತಿರುವ ಒಟ್ಟು ಬಂಡವಾಳದ ಶೇಕಡ 52ರಷ್ಟು ಈಗ ದೇಶೀಯ ಹೂಡಿಕೆದಾರರಿಂದ ಬರುತ್ತಿದೆ. ಬೆಂಗಳೂರಿನ 10 ಕುಟುಂಬ ಆಧಾರಿತ ಹೂಡಿಕೆ ಸಂಸ್ಥೆಗಳು ಡೀಪ್‌ಟೆಕ್ ಕ್ಷೇತ್ರದಲ್ಲಿ ಸಕ್ರಿಯವಾಗಿವೆ. ಇವು ಡೀಪ್‌ಟೆಕ್ ಕ್ಷೇತ್ರದ 57 ಮತ್ತು ಸ್ವದೇಶಿ ಎಐ ಕ್ಷೇತ್ರದ 45 ಷೇರು ಹೂಡಿಕೆ ಸುತ್ತುಗಳಲ್ಲಿ ಭಾಗವಹಿಸಿವೆ.
- ರಾಜ್ಯ ಸರ್ಕಾರದ ಎಲೆವೇಟ್ ಅನುದಾನ ಕಾರ್ಯಕ್ರಮದಡಿ 2017ರಿಂದ ಈವರೆಗೆ 1,479 ಸ್ಟಾರ್ಟ್‌ಅಪ್‌ಗಳಿಗೆ ಒಟ್ಟು 393.58 ಕೋಟಿ ನೆರವು ನೀಡಲಾಗಿದೆ. ಇವುಗಳ ಪೈಕಿ ಶೇಕಡ 38.6ರಷ್ಟು ಸ್ಟಾರ್ಟ್‌ಅಪ್‌ಗಳು ಬೆಂಗಳೂರಿನ ಆಚೆಗಿನ ಪ್ರದೇಶಗಳಲ್ಲಿ ಸ್ಥಾಪನೆಯಾಗಿವೆ.

ಪೊಲೀಸ್ ಇಲಾಖೆಗೆ ಸರ್ಜರಿ ಹಿರಿಯ ಅಧಿಕಾರಿಗಳ ವರ್ಗಾವಣೆ

ಬೆಂಗಳೂರು, ನ.18: ರಾಜ್ಯ ಸರ್ಕಾರ ಗೃಹ ಇಲಾಖೆಯಲ್ಲಿ ಐಪಿಎಸ್ ಅಧಿಕಾರಿಗಳ ಭಾರೀ ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.

ಅಪರಾಧ ತನಿಖಾ ದಳದ (ಸಿಐಡಿ) ಎಡಿಜಿಪಿ ವಿಜಯ್ ಕುಮಾರ್ ಸಿಂಗ್ ಅವರನ್ನು ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಎಡಿಜಿಪಿಯಾಗಿ, ಮನೀಶ್ ಕಾರ್ಬಿಕಾರ್ ಅವರನ್ನು ಸಂವಹನ, ಲಾಜಿಸ್ಟಿಕ್ಸ್ ಮತ್ತು ಆಧುನೀಕರಣ ವಿಭಾಗದ ಎಡಿಜಿಪಿಯಾಗಿ, ಎಸ್. ಮುರುಗನ್ ಅವರನ್ನು, ಲೋಕಾಯುಕ್ತದ ಎಡಿಜಿಪಿಯಾಗಿ ನಿಯೋಜಿಸಲಾಗಿದೆ.

ಇತರ ನೇಮಕಾತಿಗಳಲ್ಲಿ ಎನ್. ಶಶಿಕುಮಾರ್ ಅವರನ್ನು ಪಶ್ಚಿಮ ವಲಯದ ಐಜಿಪಿಯಾಗಿ, ಅನುಪಮ್ ಅಗ್ರವಾಲ್ ಅವರನ್ನು ಕೆಎಸ್ಆರ್‌ಪಿ) ಐಜಿಪಿಯಾಗಿ ನೇಮಿಸಲಾಗಿದೆ.

ಶರಣಪ್ಪ ಎಸ್.ಡಿ. ಅವರನ್ನು ರೈಲ್ವೆ ವಿಭಾಗದ ಡಿಐಜಿಯಾಗಿ, ಕುಲದೀಪ್ ಕುಮಾರ್ ಆರ್. ಜೈನ್ ಅವನ್ನು ಕಲಬುರಗಿ ನಗರದ ಡಿಐಜಿ ಮತ್ತು ಪೊಲೀಸ್ ಆಯುಕ್ತರಾಗಿ ನೇಮಕ ಮಾಡಲಾಗಿದೆ. ಎಂ. ಪುಟ್ಟಮಾದಯ್ಯ ಅವರನ್ನು ದಕ್ಷಿಣ ವಲಯ ಡಿಐಜಿಯಾಗಿ, ಡಾ.ಶರಣಪ್ಪ ಎಸ್.ಡಿ. ಅವರನ್ನು ಪೊಲೀಸ್ ಇಲಾಖೆ ಡಿಐಜಿ ಹುದ್ದೆಗೆ ವರ್ಗಾಯಿಸಲಾಗಿದೆ.

ಸಿ. ವಂಶಿಕೃಷ್ಣ ಅವರಿಗೆ ಬೆಂಗಳೂರು ನಗರ ಜಂಟಿ ಪೊಲೀಸ್ ಆಯುಕ್ತರ (ಆಡಳಿತ), ಡಾ.ಎಂ. ಅಶ್ವಿನಿ ಅವರನ್ನು ಡಿಐಜಿ (ನೇಮಕಾತಿ) ಹುದ್ದೆಗೆ, ಜೆ.ಕೆ.ರಶ್ಮಿ ಅವರನ್ನು ಜಲಸಂಪನೂಲ ಇಲಾಖೆಯ ಡಿಐಜಿ (ಜಾಗೃತ ದಳ) ಹುದ್ದೆಗೆ ವರ್ಗಾಯಿಸಲಾಗಿದೆ.

ಲಕ್ಷ್ಮಣ್ ನಿಂಬರ್ಗಿ ಅವರನ್ನು ಬೆಂಗಳೂರು ನಗರ ಕೇಂದ್ರ ಡಿಸಿಪಿ (ಶಸ್ತ್ರಾಸ್ತ್ರ ಮೀಸಲು ಪಡೆ) ಹುದ್ದೆಗೆ, ನಾಗೇಶ್ ಡಿ.ಎಲ್. ಅವರನ್ನು ಬೆಂ. ನಗರ ಉತ್ತರ ಡಿಸಿಪಿ ಹುದ್ದೆಗೆ, ಯತೀಶ್ ಎನ್. ಅವರನ್ನು ಪಶ್ಚಿಮ ಬೆಂಗಳೂರು ಡಿಸಿಪಿ ಹುದ್ದೆಗೆ (ನೈರುತ್ಯ), ಸೈದುಲ್ಲಾ ಅದಾವತ್ ಅವರನ್ನು ಬೆಂ. ಆಂತರಿಕ ಭದ್ರತಾ ವಿಭಾಗದ ಎಸ್‌ಪಿ ಹುದ್ದೆಗೆ ವರ್ಗಾವಣೆ ಮಾಡಿ ಆದೇಶಿಸಲಾಗಿದೆ. ರಂಜಿತ್ ಕುಮಾರ್ ಬಂಡಾರು ಅವರನ್ನು ಬೆಂ. ನಗರ ಡಿಸಿಪಿ (ಆಡಳಿತ) ಹುದ್ದೆಗೆ, ಅಶೋಕ್ ಕೆ.ವಿ. ಅವರನ್ನು ಬೆಂ. ನಗರ ಪಶ್ಚಿಮ ವಲಯದ ಡಿಸಿಪಿ ಹುದ್ದೆಗೆ, ಅಮಾಠೆ ವಿಕ್ರಮ್ ಅವರನ್ನು ಬೆಂ. ನಗರ ಉತ್ತರ ಡಿಸಿಪಿ ಹುದ್ದೆಗೆ, ಲಕ್ಷ್ಮೀ ಗಣೇಶ್ ಕೆ. ಅವರನ್ನು ಬೆಂ.ನಗರ ಕೇಂದ್ರ ಡಿಸಿಪಿ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ.

ಬೆಂಗಳೂರಿಗೆ ಆರ್.ಹಿತೇಂದ್ರ ನೂತನ ಮುಖ್ಯ ಆಯುಕ್ತ



ಬೆಂಗಳೂರು, ನ.18: ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ವಲಯವಾರು ಹೊಸ ಆಯುಕ್ತರ ಹುದ್ದೆಗಳನ್ನು ಸೃಜಿಸಿ ಪ್ರಮುಖ ಅಧಿಕಾರಿಗಳಿಗೆ ಜವಾಬ್ದಾರಿ ನೀಡಲಾಗಿದೆ. ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಅವರನ್ನು ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಎಡಿಜಿಪಿಯಾಗಿ ವರ್ಗಾವಣೆ ಮಾಡಲಾಗಿದೆ. ಬೆಂಗಳೂರಿಗೆ 6 ಹೊಸ ಪೊಲೀಸ್ ಆಯುಕ್ತರ ನೇಮಕ ಮಾಡಲಾಗಿದ್ದು, ಆರ್ ಹಿತೇಂದ್ರ ಮುಖ್ಯ ಆಯುಕ್ತರನ್ನಾಗಿ ನೇಮಕಗೊಂಡಿದ್ದಾರೆ.

ನೂತನ ಆಯುಕ್ತರು: ಬೆಂ.ಸೆಂಟ್ರಲ್: ಲಾಬೂರಾಮ್, ಬೆಂ. ಪೂರ್ವ: ಡಾ. ಪಿ.ಎಸ್. ಹರ್ಷ, ಬೆಂ.ಪಶ್ಚಿಮ: ವಿಕಾಶ್‌ಕುಮಾರ್, ಬೆಂ.ಉತ್ತರ: ಡಾ. ಎಂ.ಬಿ. ಬೋರಲಿಂಗಯ್ಯ, ಬೆಂ.ಸಂಚಾರ: ಹೇಮಂತ್ ಎಂ. ನಿಂಬಾಳ್ಕರ್. **ಡಿಸಿಪಿಗಳ ನೇಮಕ:** ಅನೂಪ್ ಎ. ಶೆಟ್ಟಿ: ಡಿಸಿಪಿ (ಸಂಚಾರ) – ಬೆಂ. ಪೂರ್ವ, ಲೋಕೇಶ್ ಭರಮಪ್ಪ ಜಗಲಾಸರ್: ಡಿಸಿಪಿ (ಸಂಚಾರ) ಬೆಂ.ಕೇಂದ್ರ, ಸ್ನೇಹಾ: ಡಿಸಿಪಿ (ಸಂಚಾರ) – ಬೆಂ.ಪಶ್ಚಿಮ, ಶ್ರೀಹರಿಬಾಬು ಬಿ.ಎಲ್.: ಡಿಸಿಪಿ, ಬೆಂ.ಪೂರ್ವ ವ್ಯಾಪ್ತಿಯ ವೈಟ್‌ಫೀಲ್ಡ್, ಗೀತಾ ಎಂ.ಎಸ್.: ಡಿಸಿಪಿ, ಬೆಂ.ಪೂರ್ವ.

ಬೆಂಗಳೂರಿನಲ್ಲಿ ಅಕ್ರಮವಾಗಿ ನೆಲೆಸಿರುವವರ ಸಂಖ್ಯೆ ಲಕ್ಷ ದಾಟಿದೆ

ಬೆಂಗಳೂರು, ನ.18: ರಾಜ್ಯದಲ್ಲಿ ನಡೆಯುತ್ತಿರುವ ಅಕ್ರಮ ವಲಸಿಗರ ಸಮೀಕ್ಷೆಯ ವೇಳೆ ಆತಂಕಕಾರಿ

ಭಾರತದ ಆರ್ಥಿಕ ಪರಿಸ್ಥಿತಿ ಬಗ್ಗೆ ರಾಹುಲ್ ಟೀಕೆ: ಬಿಜೆಪಿ ಕಿಡಿ



ನವದೆಹಲಿ, ನ.18: ಭಾರತ ಗಂಭೀರ ಆರ್ಥಿಕ ಬಿಕ್ಕಟ್ಟಿನತ್ತ ಸಾಗುತ್ತಿದೆ. ದೇಶದಲ್ಲಿ ನಿರುದ್ಯೋಗ ಸಮಸ್ಯೆ ತೀವ್ರವಾಗಿದ್ದು, ಶಿಕ್ಷಣ ವ್ಯವಸ್ಥೆಯಲ್ಲೂ ಆಳವಾದ ಸಮಸ್ಯೆಗಳಿವೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಅಮೆರಿಕದ ನ್ಯೂಯಾರ್ಕ್‌ನಲ್ಲಿರುವ ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಮಂಗಳವಾರ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತದ ಆರ್ಥಿಕ ಪರಿಸ್ಥಿತಿ ಕುರಿತು ಕೇಂದ್ರದ ನರೇಂದ್ರ ಮೋದಿ ಸರ್ಕಾರದ ವಿರುದ್ಧ ತೀವ್ರ ಟೀಕೆ ವ್ಯಕ್ತಪಡಿಸಿದರು.

'ಭಾರತ ಆರ್ಥಿಕ ದುರಂತದ ಸ್ಥಿತಿಯಲ್ಲಿದೆ. ಇದು ವಾಸ್ತವ. ಈ ಸಮಸ್ಯೆಯನ್ನು ನಿರ್ಲಕ್ಷಿಸಬಹುದು, ಮಾಧ್ಯಮಗಳು ಮರೆಮಾಚಬಹುದು. ಆದರೆ ದೇಶದಲ್ಲಿ ಭಾರಿ ಪ್ರಮಾಣದ ನಿರುದ್ಯೋಗ ಸಮಸ್ಯೆ ಇದೆ. ಶಿಕ್ಷಣ ವ್ಯವಸ್ಥೆಯಲ್ಲೂ ಗಂಭೀರ ಸಮಸ್ಯೆಗಳಿವೆ' ಎಂದು ರಾಹುಲ್ ಗಾಂಧಿ ಹೇಳಿದರು.

ಭಾರತದ ಆರ್ಥಿಕ ಮಾದರಿ ಸುಮಾರು ಒಂದು ದಶಕದ ಹಿಂದೆಯೇ ನಿರೀಕ್ಷಿತ ಫಲಿತಾಂಶ ನೀಡುವುದನ್ನು ನಿಲ್ಲಿಸಿದೆ ಎಂದು ಅವರು ಅಭಿಪ್ರಾಯಪಟ್ಟರು. ಕೇಂದ್ರ ಸರ್ಕಾರದ 'ಮೇಕ್ ಇನ್ ಇಂಡಿಯಾ' ಮತ್ತು 'ಸ್ಟಾರ್ಟ್‌ಅಪ್ ಇಂಡಿಯಾ' ಯೋಜನೆಗಳು ಉತ್ಪಾದನಾ ವಲಯವನ್ನು ಬಲಪಡಿಸುವಲ್ಲಿ ಹಾಗೂ ಉದ್ಯೋಗ ಸೃಷ್ಟಿಸುವಲ್ಲಿ ನಿರೀಕ್ಷಿತ ಯಶಸ್ಸು ಸಾಧಿಸಿಲ್ಲ ಎಂದು ಟೀಕಿಸಿದರು.

ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಕೃಷಿ ಕ್ಷೇತ್ರಗಳು ದೇಶದ ಆರ್ಥಿಕತೆಯ ಪ್ರಮುಖ ಆಧಾರಸ್ತಂಭಗಳಾಗಿವೆ. ಇವುಗಳೇ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತವೆ. ಆದರೆ ಈ ವಲಯಗಳು ದುರ್ಬಲಗೊಂಡಿವೆ ಎಂದು ಹೇಳಿದರು.

ಕೇವಲ ಸೇವಾ ವಲಯದಿಂದ ದೇಶದ ಎಲ್ಲರಿಗೂ ಉದ್ಯೋಗ ಒದಗಿಸಲು ಸಾಧ್ಯವಿಲ್ಲ. ಉತ್ಪಾದನಾ ವಲಯವನ್ನು ಪುನರ್ನಿರ್ಮಿಸುವ ಅಗತ್ಯವಿದೆ. ದೇಶದಲ್ಲಿ ಖಾಸಗಿ ಹೂಡಿಕೆ ಏಕೆ ಹೆಚ್ಚುತ್ತಿಲ್ಲ ಎಂಬ ಪ್ರಶ್ನೆಯನ್ನೂ ಅವರು ಎತ್ತಿದರು. ಅದಾನಿ ಮತ್ತು ಅಂಬಾನಿ ಅವರಂತಹ ಕೆಲವೇ ದೊಡ್ಡ ಉದ್ಯಮ ಸಮೂಹಗಳು ಬೆಳವಣಿಗೆ ಕಾಣುತ್ತಿವೆ. ಸಣ್ಣ ಉದ್ಯಮಗಳು ಸಂಕಷ್ಟ ಎದುರಿಸುತ್ತಿವೆ ಎಂದು ಆರೋಪಿಸಿದರು.

ದೇಶದಲ್ಲಿ ಸಂಪತ್ತು ಮತ್ತು ರಾಜಕೀಯ ಅಧಿಕಾರ ಕೆಲವೇ ವ್ಯಕ್ತಿಗಳ ಕೈಯಲ್ಲಿ ಕೇಂದ್ರೀಕೃತವಾಗುತ್ತಿದೆ. ಆದಿವಾಸಿಗಳು, ದಲಿತರು, ಅಲ್ಪಸಂಖ್ಯಾತರು ಮತ್ತು ರೈತರು ಸೇರಿದಂತೆ ವಿವಿಧ ವರ್ಗಗಳು ಸಮಸ್ಯೆ ಎದುರಿಸುತ್ತಿವೆ ಎಂದೂ ರಾಹುಲ್ ಗಾಂಧಿ ಹೇಳಿದರು.

ಬಿಜೆಪಿಯಿಂದ ತೀವ್ರ ವಾಗ್ದಾಳಿ

ರಾಹುಲ್ ಗಾಂಧಿ ಹೇಳಿಕೆಗೆ ಬಿಜೆಪಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ವಿದೇಶಿ ನೆಲದಲ್ಲಿ ಭಾರತದ ಆರ್ಥಿಕತೆ ಮತ್ತು ಪ್ರಜಾಪ್ರಭುತ್ವದ ಬಗ್ಗೆ ನಕಾರಾತ್ಮಕವಾಗಿ ಮಾತನಾಡುವ ಮೂಲಕ ದೇಶದ ವರ್ಚಸ್ಸಿಗೆ ಧಕ್ಕೆ ತರುತ್ತಿದ್ದಾರೆ ಎಂದು ಬಿಜೆಪಿ ವಕ್ತಾರರು ಆರೋಪಿಸಿದ್ದಾರೆ.

ಬಿಜೆಪಿ ರಾಷ್ಟ್ರೀಯ ವಕ್ತಾರ ಪ್ರದೀಪ್ ಭಂಡಾರಿ, ರಾಹುಲ್ ಗಾಂಧಿಯನ್ನು 'ಭಾರತ ವಿರೋಧಿ ಪ್ರಚಾರದ ನಾಯಕ' ಎಂದು ಟೀಕಿಸಿದ್ದಾರೆ. ವಿಶ್ವದ ಪ್ರಮುಖ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಗಳಲ್ಲಿ ಭಾರತವೂ ಒಂದಾಗಿರುವ ಸಂದರ್ಭದಲ್ಲಿ ದೇಶವನ್ನು ಆರ್ಥಿಕ ದುರಂತದ ಸ್ಥಿತಿಯಲ್ಲಿದೆ ಎಂದು ಬಿಂಬಿಸುತ್ತಿದ್ದಾರೆ ಎಂದು ಆಕ್ಷೇಪಿಸಿದ್ದಾರೆ. ಪಶ್ಚಿಮ ಬಂಗಾಳದ ಬಿಜೆಪಿ ನಾಯಕ ದಿಲೀಪ್ ಘೋಷ್ ಕೂಡ ರಾಹುಲ್ ಹೇಳಿಕೆಗೆ ಪ್ರತಿಕ್ರಿಯಿಸಿ, ಭಾರತದ ಜಿಡಿಪಿ ಬೆಳವಣಿಗೆ ಮತ್ತು ವಿದೇಶಿ ವಿನಿಮಯ ಸಂಗ್ರಹ ದಾಖಲೆಯ ಮಟ್ಟದಲ್ಲಿರುವುದನ್ನು ಉಲ್ಲೇಖಿಸಿ ಟೀಕಿಸಿದ್ದಾರೆ.



ವಿಜ್ಞಾನ ಮತ್ತು ತಂತ್ರಜ್ಞಾನ ಭೂವಿಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಅವರು, ಬುಧವಾರ ನವದೆಹಲಿಯ ರಾಷ್ಟ್ರೀಯ ಮಾಧ್ಯಮ ಕೇಂದ್ರದಲ್ಲಿ) ನಡೆದ ಭಾರತ ಅಂತಾರಾಷ್ಟ್ರೀಯ ವಿಜ್ಞಾನ ಉತ್ಸವದ ಪೂರ್ವಭಾವಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕಾಂಗ್ರೆಸ್, ಸಿಜೆಪಿ ಸೇರಿದಂತೆ ನಾಲ್ಕು ಸಂಘಟನೆಗಳಿಗೆ ಸುಪ್ರೀಂ ನೋಟಿಸ್

ರಾಮಲೀಲಾ ಮೈದಾನದಲ್ಲಿ ಪ್ರತಿಭಟನೆಗೆ ನಿರ್ಬಂಧ ಕೋರಿ ವ್ಯಾಪಾರಿಗಳ ಅರ್ಜಿ



ನವದೆಹಲಿ, ನ.18: ದೆಹಲಿಯ ರಾಮಲೀಲಾ ಮೈದಾನದಲ್ಲಿ ಪ್ರತಿಭಟನೆಗಳನ್ನು ನಡೆಸುವುದಕ್ಕೆ ನಿರ್ಬಂಧ ವಿಧಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಕಾಂಗ್ರೆಸ್, ಆಮ್ ಆದ್ಮಿ ಪಕ್ಷ (ಆಪ್) ಸೇರಿದಂತೆ ನಾಲ್ಕು ಸಂಘಟನೆಗಳಿಗೆ ನೋಟಿಸ್ ಜಾರಿ ಮಾಡಿದೆ.

ದೆಹಲಿ ಕಿರಾಣಾ ಸಮಿತಿ ಮತ್ತು ದೆಹಲಿ ಐರನ್ ಆಂಡ್ ಹಾರ್ಡ್‌ವೇರ್ ಮರ್ಚೆಂಟ್ಸ್ ಅಸೋಸಿಯೇಷನ್ ಈ ಅರ್ಜಿ ಸಲ್ಲಿಸಿವೆ. ರಾಮಲೀಲಾ ಮೈದಾನ ಹಾಗೂ ಸುತ್ತಮುತ್ತ ನಡೆಯುವ ಪ್ರತಿಭಟನೆಗಳಿಂದ ವ್ಯಾಪಾರ ವಹಿವಾಟಿಗೆ ತೊಂದರೆ ಯಾಗುತ್ತಿದೆ. ಈ ಪ್ರದೇಶದಲ್ಲಿ ಹಲವು ಸಗಟು ಮಾರುಕಟ್ಟೆಗಳಿದ್ದು, ಪ್ರತಿಭಟನೆಗಳಿಂದ ವ್ಯಾಪಾರ ಚಟುವಟಿಕೆಗಳು ಅಸ್ತವ್ಯಸ್ತಗೊಳ್ಳುತ್ತಿವೆ ಎಂದು ಅರ್ಜಿದಾರರು ದೂರಿದ್ದಾರೆ. ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ನ್ಯಾಯಪೀಠ ಬುಧವಾರ ಅರ್ಜಿಯ ವಿಚಾರಣೆ ನಡೆಸಿತು. ಈ ವೇಳೆ ಕಾಂಗ್ರೆಸ್, ಆಮ್ ಆದ್ಮಿ ಪಕ್ಷ, ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಮತ್ತು ಅಖಿಲ ಭಾರತ ವಿದ್ಯಾರ್ಥಿ ಸಂಘಟನೆಗೆ (ಐಸಾ) ನೋಟಿಸ್ ಜಾರಿ ಮಾಡಿತು. ಕೇಂದ್ರ ಸರ್ಕಾರ, ದೆಹಲಿ ಸರ್ಕಾರ ಹಾಗೂ ದೆಹಲಿ ಪೊಲೀಸ್ ಆಯುಕ್ತರಿಗೂ ನೋಟಿಸ್ ನೀಡಲಾಗಿದೆ. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ದೆಹಲಿಯಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಿಂದ ಕೇಂದ್ರ ದೆಹಲಿಯ ವ್ಯಾಪಾರ ಚಟುವಟಿಕೆಗಳಿಗೆ ಅಡ್ಡಿಯಾಗುತ್ತಿದೆ ಎಂದು ವಾದಿಸಿದರು. ರಾಮಲೀಲಾ ಮೈದಾನ ನಗರದ ಪ್ರಮುಖ ವಾಣಿಜ್ಯ ಪ್ರದೇಶದ ಸಮೀಪದಲ್ಲಿರುವುದರಿಂದ ಅಲ್ಲಿ ಪ್ರತಿಭಟನೆಗಳಿಗೆ ಅವಕಾಶ ನೀಡಬಾರದು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಪ್ರತಿಭಟನೆ ನಡೆಸುವ ಹಕ್ಕು ಮತ್ತು ವ್ಯಾಪಾರ ವಹಿವಾಟು ನಡೆಸುವ ಹಕ್ಕು ಎರಡೂ ಮಹತ್ವದ್ದಾಗಿದ್ದು, ಇವೆರಡರ ನಡುವೆ ಸಮತೋಲನ ಕಾಯ್ದುಕೊಳ್ಳಬೇಕಿದೆ ಎಂದು ಅಭಿಪ್ರಾಯಪಟ್ಟಿತು.

ದೆಹಲಿಯಲ್ಲಿ ಪ್ರತಿಭಟನೆಗಳಿಗೆ ಸಂಬಂಧಿಸಿದ ನಿರ್ಬಂಧ ಪ್ರಶ್ನಿಸಿ ಸಲ್ಲಿಕೆಯಾಗಿರುವ ಇತರ ಅರ್ಜಿಗಳ ಜೊತೆಯಲ್ಲಿಯೇ ಈ ಅರ್ಜಿಯ ವಿಚಾರಣೆ ನಡೆಸಲು ನ್ಯಾಯಾಲಯ ನಿರ್ಧರಿಸಿದೆ. ನವೆಂಬರ್ 27ರಂದು ಮುಂದಿನ ವಿಚಾರಣೆ ನಡೆಯಲಿದೆ.

ಕುಲ್ಗಾಮ್: ಉಗ್ರ ಲತೀಫ್ ಭಟ್ ಹತ್ಯೆ



ಶ್ರೀನಗರ, ನ.18: ಜಮ್ಮು ಮತ್ತು ಕಾಶ್ಮೀರದ ಕುಲ್ಗಾಂ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ ಲಷ್ಕರ್-ಎ-ತೊಯ್ಬಾ ಸಂಘಟನೆಯ ಮೋಸ್ಟ್ ವಾಂಟೆಡ್ ಉಗ್ರ ಲತೀಫ್ ಭಟ್ ಹತನಾಗಿದ್ದು, ಈತ ಉಗ್ರ ಸಂಘಟನೆಗೆ ಸೇರಿದ ಸರಿಯಾಗಿ ಒಂದು ವರ್ಷದ ಬಳಿಕ ಭದ್ರತಾ ಪಡೆಗಳ ಗುಂಡಿಗೆ ಬಲಿಯಾಗಿದ್ದಾನೆ.

23 ವರ್ಷದ ಲತೀಫ್ ಭಟ್ ದಕ್ಷಿಣ ಕಾಶ್ಮೀರದ ಕುಲ್ಗಾಂ ಜಿಲ್ಲೆಯ ನಿವಾಸಿಯಾಗಿದ್ದ. ಈತನನ್ನು ಭದ್ರತಾ ಸಂಸ್ಥೆಗಳು 'ಎ ಕೆಟಗರಿ' ಉಗ್ರ ಎಂದು ಗುರುತಿಸಿದ್ದವು. ಕಣಿವೆಯಲ್ಲಿ ಸಕ್ರಿಯವಾಗಿದ್ದ ವಿಕೈಕ ಸ್ಥಳೀಯ ಉಗ್ರ ಈತನೇ ಆಗಿದ್ದ ಎಂದು ಸೇನಾ ಮೂಲಗಳು ತಿಳಿಸಿವೆ.

ಕಾರ್ಯಾಚರಣೆ ವೇಳೆ ಲತೀಫ್ ಭಟ್ ಮಸೀದಿಯಲ್ಲಿ ಅಡಗಿಕೊಂಡಿದ್ದ. ಆತನಿಗೆ ಶರಣಾಗುವಂತೆ ಭದ್ರತಾ ಪಡೆಗಳು ಅವಕಾಶ ನೀಡಿದ್ದರೂ ಆತ ಒಪ್ಪಿರಲಿಲ್ಲ. ಬೆಳಗಿನ ಜಾವ 2.45ಕ್ಕೆ ಭದ್ರತಾ ಪಡೆಗಳ ಮೇಲೆ ಆತ ಗುಂಡಿನ ದಾಳಿ ನಡೆಸಿದ್ದಾನೆ.

ಇದಕ್ಕೆ ಪಡೆಗಳು ಪ್ರತಿದಾಳಿ ನಡೆಸಿ ಆತನನ್ನು ಹತ್ಯೆ ಮಾಡಿವೆ. ಕಾರ್ಯಾಚರಣೆ ವೇಳೆ ಮಸೀದಿಗೆ ಯಾವುದೇ ಹಾನಿಯಾಗದಂತೆ ಭದ್ರತಾ ಪಡೆಗಳು ಎಚ್ಚರಿಕೆ ವಹಿಸಿದ್ದವು ಎಂದು ಪೊಲೀಸರು ತಿಳಿಸಿದ್ದಾರೆ.

ಉಗ್ರ ಸಂಘಟನೆ ಸೇರಿದ ಒಂದು ವರ್ಷದ ಬಳಿಕ ಅಂತ್ಯ

ಭದ್ರತಾ ಸಂಸ್ಥೆಗಳ ಪ್ರಕಾರ, ಲತೀಫ್ ಭಟ್ 2025ರ ನವೆಂಬರ್ 18ರಿಂದ ಉಗ್ರ ಚಟುವಟಿಕೆಗಳಲ್ಲಿ ಸಕ್ರಿಯನಾಗಿದ್ದ. ಅಂದರೆ, ಲಷ್ಕರ್ ಸಂಘಟನೆ ಸೇರಿದ ಸರಿಯಾಗಿ ಒಂದು ವರ್ಷದ ಬಳಿಕ ಎನ್‌ಕೌಂಟರ್‌ನಲ್ಲಿ ಹತನಾಗಿದ್ದಾನೆ.

ಲಷ್ಕರ್‌ನ ಸ್ಥಳೀಯ ಕಮಾಂಡರ್ ಆಗಿದ್ದ ಈತ ದಕ್ಷಿಣ ಕಾಶ್ಮೀರದಲ್ಲಿ ಉಗ್ರ ಚಟುವಟಿಕೆಗಳನ್ನು ಮುನ್ನಡೆಸುತ್ತಿದ್ದ. ಲಷ್ಕರ್‌ನ ಮತ್ತೊಂದು ಸಹೋದರ ಸಂಘಟನೆ ಎಂದು ಗುರುತಿಸಲಾಗಿರುವ ದಿ ರೆಸಿಸ್ಟೆನ್ಸ್ ಫ್ರಂಟ್ ಜತೆ ಸಂಪರ್ಕ ಹೊಂದಿದ್ದ. ಅಲ್ಲದೆ, ಕಾಶ್ಮೀರ ರೆವಲ್ಯೂಷನರಿ ಆರ್ಮಿ ಸಂಘಟನೆಯೊಂದಿಗೂ ನಂಟು ಹೊಂದಿದ್ದ ಎಂದು ಭದ್ರತಾ ಸಂಸ್ಥೆಗಳು ತಿಳಿಸಿವೆ.

ಕಳೆದ 5-6 ತಿಂಗಳಿನಿಂದ ಉಮರ್, ಕಮಾಂಡರ್ ಲತೀಫ್ ಭಟ್‌ಗೆ ಆಶ್ರಯ ಮತ್ತು ಲಾಜಿಸ್ಟಿಕ್ ನೆರವು ನೀಡುತ್ತಿದ್ದ ಅಖ್ತಾನ್ ದಾಳಿಯ ಬೆನ್ನಲ್ಲೇ ಈತ ಪಾಕಿಸ್ತಾನ ಮೂಲದ ಲಷ್ಕರ್-ಎ-ತೊಯ್ಬಾ ಅಂಗಸಂಸ್ಥೆಯಾದ 'ದಿ ರೆಸಿಸ್ಟೆನ್ಸ್ ಫ್ರಂಟ್' ಸಂಘಟನೆಗೆ ಸೇರ್ಪಡೆಗೊಂಡಿದ್ದ

ತಾಪಮಾನ 11 ಡಿಗ್ರಿಗೆ ಇಳಿಕೆ



ನವದೆಹಲಿ, ನ. 18: ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಬುಧವಾರ ಮುಂಜಾನೆ, ಕನಿಷ್ಠ ತಾಪಮಾನವು ಸಾಮಾನ್ಯಕ್ಕಿಂತ 1.3 ಡಿಗ್ರಿ ಕಡಿಮೆಯಾಗಿ 11 ಡಿಗ್ರಿ ಸೆಲ್ಸಿಯಸ್‌ಗೆ ಇಳಿದಿದೆ. ಇದೇ ವೇಳೆ, ನಗರದ ವಾಯು ಗುಣಮಟ್ಟ ಸೂಚ್ಯಂಕ ಕಳಪೆ ಹಂತದಲ್ಲೇ ಮುಂದುವರಿದಿದೆ. ಭಾರತೀಯ ಹವಾಮಾನ ಇಲಾಖೆಯ (ಐಎಂಡಿ) ಮಾಹಿತಿ ಪ್ರಕಾರ, ನಗರದ ಪ್ರಮುಖ ಹವಾಮಾನ ಕೇಂದ್ರಗಳಲ್ಲಿ ದಾಖಲಾದ ಕನಿಷ್ಠ ತಾಪಮಾನದ ವಿವರ ಹೀಗಿದೆ. ಸಫ್ದರ್‌ಜಂಗ್: 11 ಡಿಗ್ರಿ ಸೆಲ್ಸಿಯಸ್, ಆಯಾನಗರ: 11.1 ಡಿಗ್ರಿ ಸೆಲ್ಸಿಯಸ್ (ಸಾಮಾನ್ಯಕ್ಕಿಂತ 1.6 ಡಿಗ್ರಿ ಕಡಿಮೆ), ಪಾಲಂ: 11.5 ಡಿಗ್ರಿ ಸೆಲ್ಸಿಯಸ್ (ಸಾಮಾನ್ಯಕ್ಕಿಂತ 1.4 ಡಿಗ್ರಿ ಕಡಿಮೆ), ಲೋಧಿ ರಸ್ತೆ: 11.8 ಡಿಗ್ರಿ ಸೆಲ್ಸಿಯಸ್ (ಸಾಮಾನ್ಯಕ್ಕಿಂತ 0.8 ಡಿಗ್ರಿ ಹೆಚ್ಚು) ಮತ್ತು ದಿ ರಿಡ್ಜ್: 12.3 ಡಿಗ್ರಿ ಸೆಲ್ಸಿಯಸ್ (ಸಾಮಾನ್ಯಕ್ಕಿಂತ 1.2 ಡಿಗ್ರಿ ಕಡಿಮೆ).

ಹಗಲಿನಲ್ಲಿ ಸಾಧಾರಣ ಮಂಜು ಕವಿದ ವಾತಾವರಣ ಇರಲಿದ್ದು, ಗರಿಷ್ಠ ತಾಪಮಾನವು 27 ಡಿಗ್ರಿ ಸೆಲ್ಸಿಯಸ್ ಆಸುಪಾಸಿನಲ್ಲಿರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಂಕಿಅಂಶಗಳ ಪ್ರಕಾರ, ಬುಧವಾರ ಬೆಳಗ್ಗೆ 9 ಗಂಟೆಗೆ ದೆಹಲಿಯ ಸರಾಸರಿ **AQI** 218 ದಾಖಲಾಗಿದ್ದು, ಕಳಪೆ ವರ್ಗದಲ್ಲಿದೆ. ಬೆಳಗ್ಗೆ 7 ಗಂಟೆಗೆ 214 ಇದ್ದ ಸೂಚ್ಯಂಕ, ಮಂಗಳವಾರ ಸಂಜೆ 4 ಗಂಟೆಗೆ ದಾಖಲಾಗಿದ್ದ 204ಕ್ಕಿಂತ ತುಸು ಏರಿಕೆಯಾಗಿದೆ. ನಗರದ ಉತ್ತಮ್ ನಗರದಲ್ಲಿ ಅತ್ಯಂತ ಕಳಪೆ ಗಾಳಿಯ ಗುಣಮಟ್ಟ ದಾಖಲಾಗಿದ್ದು, ಬೆಳಗ್ಗೆ 7 ಗಂಟೆಗೆ 399 (ತೀರಾ ಕಳಪೆ) ಇದ್ದ **AQI**, 9 ಗಂಟೆಯ ವೇಳೆಗೆ 415ಕ್ಕೆ (ಗಂಭೀರ ಹಂತ) ತಲುಪಿದೆ. ಉಳಿದಂತೆ ಬುರಾರಿ ಕ್ರಾಸಿಂಗ್ (286), ಚಾಂದಿನಿ ಚೌಕ್ (292), ವಜೀರ್‌ಪುರ (242), ಅಲಿಪುರ (235), ಸೋನಿಯಾ ವಿಹಾರ್ (232), ರೋಹಿಣಿ (231), ನರೇಲಾ (218), ಆನಂದ್ ವಿಹಾರ್ (208) ಮತ್ತು ನಂಗ್ಲೋಯ್ (207) ಪ್ರದೇಶಗಳಲ್ಲಿ ಗಾಳಿಯ ಗುಣಮಟ್ಟ ಕಳಪೆ ಹಂತದಲ್ಲಿದೆ. ನಗರದ ಕೆಲವು ಭಾಗಗಳಲ್ಲಿ ವಾಯು ಗುಣಮಟ್ಟ ಸಾಧಾರಣ ಹಂತದಲ್ಲಿದ್ದು, ತುಸು ನಿರಾಳತೆ ತಂದಿದೆ. ಲೋಧಿ ರಸ್ತೆ (139), ವಸುಂಧರಾ ಎನ್‌ಕ್ಲೇವ್ (143), ಅರಬಿಂದೋ ಮಾರ್ಗ (167), ಆರ್.ಕೆ. ಪುರಂ (182) ಮತ್ತು ಐಜಿಐ ವಿಮಾನ ನಿಲ್ದಾಣದ ಟರ್ಮಿನಲ್-3 (197) ಪ್ರದೇಶಗಳಲ್ಲಿ ಉತ್ತಮ ಸ್ಥಿತಿ ದಾಖಲಾಗಿದೆ.

ಸಿಪಿಸಿಬಿ ಮಾನದಂಡಗಳ ಪ್ರಕಾರ, **AQI 0-50** ಉತ್ತಮ, 51-100 ತೃಪ್ತಿಕರ, 101-200 ಸಾಧಾರಣ, 201-300 ಕಳಪೆ, 301-400 ತೀರಾ ಕಳಪೆ ಮತ್ತು 401-500 ಗಂಭೀರ ಎಂದು ಪರಿಗಣಿಸಲಾಗುತ್ತದೆ. ವಾಯು ಗುಣಮಟ್ಟದಲ್ಲಿ ಸುಧಾರಣೆ ಕಂಡುಬಂದ ಹಿನ್ನೆಲೆಯಲ್ಲಿ, ವಾಯು ಗುಣಮಟ್ಟ ನಿರ್ವಹಣಾ ಆಯೋಗವು ನವೆಂಬರ್ 17ರಂದು ದೆಹಲಿ-ಎನ್‌ಸಿಆರ್ ವ್ಯಾಪ್ತಿಯಲ್ಲಿ ಜಾರಿಯಲ್ಲಿದ್ದ ಗ್ರೇಡೆಡ್ ರೆಸ್ಪಾನ್ಸ್ ಆಕ್ಷನ್ ಪ್ಲಾನ್ ಹಂತ-3ರ ನಿರ್ಬಂಧ ಹಿಂಪಡೆದ ಬೆನ್ನಲ್ಲೇ ಈ ಹೊಸ ಅಂಕಿ-ಅಂಶಗಳು ಹೊರಬಿದ್ದಿವೆ.

ಮತದಾರರ ಪಟ್ಟಿಯಲ್ಲಿ ಸೋನಿಯಾ ಗಾಂಧಿ ಹೆಸರು ಸೇರ್ಪಡೆ ಆರೋಪ
ಪೊಲೀಸರಿಂದ ವರದಿ ಕೇಳಿದ ದೆಹಲಿ ನ್ಯಾಯಾಲಯ

ನವದೆಹಲಿ, ನ.18: ಭಾರತದ ಪೌರತ್ವ ಪಡೆಯುವ ಮೊದಲೇ ಸೋನಿಯಾ ಗಾಂಧಿ ಅವರ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿತ್ತು ಎಂಬ ಆರೋಪಕ್ಕೆ ಸಂಬಂಧಿಸಿದ ದೂರಿನ ಬಗ್ಗೆ ದೆಹಲಿ ನ್ಯಾಯಾಲಯವು ಪೊಲೀಸರಿಂದ ವರದಿ ಕೇಳಿದೆ.

ಈ ಸಂಬಂಧ ಸಲ್ಲಿಕೆಯಾಗಿರುವ ದೂರಿನ ಕುರಿತು ತನಿಖೆ ನಡೆಸಿ, ಪ್ರಕರಣದ ಸ್ಥಿತಿಗತಿ ಕುರಿತು ವರದಿ ಸಲ್ಲಿಸುವಂತೆ ನ್ಯಾಯಾಲಯವು ಪೊಲೀಸರಿಗೆ ಸೂಚಿಸಿದೆ.

ದೂರುದಾರ ವಿಕಾಸ್ ತ್ರಿಪಾಠಿ ಅವರು ಸೋನಿಯಾ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ. 1980ರಲ್ಲಿ ನವದೆಹಲಿ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಸೋನಿಯಾ ಗಾಂಧಿ ಅವರ ಹೆಸರು ಸೇರ್ಪಡೆಯಾಗಿತ್ತು. ಆದರೆ ಅವರು 1983ರ ಏಪ್ರಿಲ್‌ನಲ್ಲಿ ಭಾರತೀಯ ಪೌರತ್ವ ಪಡೆದಿದ್ದರು ಎಂಬುದು ದೂರುದಾರರ ವಾದವಾಗಿದೆ.

1980ರಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಿದ್ದ ಹೆಸರು 1982ರಲ್ಲಿ ತೆಗೆದು ಹಾಕಲಾಗಿತ್ತು. ಬಳಿಕ 1983ರಲ್ಲಿ ಮತ್ತೆ ಸೇರ್ಪಡೆಯಾಗಿತ್ತು ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಈ ಪ್ರಕ್ರಿಯೆಯಲ್ಲಿ ನಕಲಿ ದಾಖಲೆಗಳನ್ನು ಬಳಸಲಾಗಿದೆ ಎಂಬುದು ದೂರುದಾರರ ಮತ್ತೊಂದು ಆರೋಪವಾಗಿದೆ.



ಈ ಹಿಂದೆ 2025ರ ಸೆಪ್ಟೆಂಬರ್ 11ರಂದು ಹೆಚ್ಚುವರಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಎಫ್‌ಐಆರ್ ದಾಖಲಿಸುವಂತೆ ಕೋರಿ ಸಲ್ಲಿಸಿದ್ದ ದೂರನ್ನು ತಿರಸ್ಕರಿಸಿತ್ತು. ಇದನ್ನು ಪ್ರಶ್ನಿಸಿ ವಿಕಾಸ್ ತ್ರಿಪಾಠಿ ಸೆಷನ್ಸ್ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದ್ದರು. 2026ರ ಸೆಪ್ಟೆಂಬರ್ 21ರಂದು ಸೆಷನ್ಸ್ ನ್ಯಾಯಾಧೀಶ ವಿಶಾಲ್ ಗೋಗೆ ಅವರು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಹಿಂದಿನ ಆದೇಶವನ್ನು ರದ್ದುಗೊಳಿಸಿ, ಪ್ರ

ಬೆಂಗಳೂರಿನ ವಿವಿಧೆಡೆ 522.23 ಕೋಟಿ ವೆಚ್ಚದ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ

ಏರ್‌ಪೋರ್ಟ್‌ಗೆ ಹೆಬ್ಬಾಳ ಮಾದರಿ ಹೊಸ ಫ್ಲೈಓವರ್ ನಿರ್ಮಾಣಕ್ಕೆ ಚಿಂತನೆ: ಸಿಎಂ

ಬೆಂಗಳೂರು, ನ.18: ಬೆಂಗಳೂರಿನ ಉತ್ತರ ಭಾಗದಿಂದ ವಿಮಾನ ನಿಲ್ದಾಣಕ್ಕೆ ತೆರಳುವ ವಾಹನ ಸವಾರರ ಸಂಚಾರ ದಟ್ಟಣೆ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಹೆಬ್ಬಾಳ ಮಾದರಿಯಲ್ಲಿ ಹೊಸ ಫ್ಲೈಓವರ್ ನಿರ್ಮಿಸುವ ಕುರಿತು ರಾಜ್ಯ ಸರಕಾರ ಚಿಂತನೆ ನಡೆಸಿದೆ. ಜಕ್ಕೂರು ವಿಮಾನ ನಿಲ್ದಾಣದ ಎದುರೇ ನೂತನ ಪಾಲಿಕೆ ಕಚೇರಿ ನಿರ್ಮಾಣ ಮಾಡಲಾಗುವುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

522.23 ಕೋಟಿ ವೆಚ್ಚದಲ್ಲಿ ಬೆಂಗಳೂರು ನಗರದ ವಿವಿಧ ಕಡೆಗಳಲ್ಲಿ ಹಮ್ಮಿಕೊಂಡಿದ್ದ ಶಂಕುಸ್ಥಾಪನೆ ಹಾಗೂ ಉದ್ಘಾಟನಾ ಕಾರ್ಯಕ್ರಮಗಳನ್ನು ಬುಧವಾರ ನೆರವೇರಿಸಿ ಮಾತನಾಡಿದ ಅವರು, ಏರ್‌ಪೋರ್ಟ್ ಕಡೆಗೆ ಹೋಗುವವರು ಹಾಗೂ ಉತ್ತರ ಬೆಂಗಳೂರಿನಿಂದ ನಗರದೊಳಗೆ ಬರುವವರು ಪ್ರತಿನಿತ್ಯ ಸಂಚಾರ ದಟ್ಟಣೆಯಿಂದ ತೊಂದರೆ ಅನುಭವಿಸುತ್ತಿದ್ದಾರೆ. ಸುಮಾರು 20 ಕಿ.ಮೀ. ವ್ಯಾಪ್ತಿಯಲ್ಲಿ ಈ ಸಮಸ್ಯೆ ಇದೆ. ವಿಮಾನ ನಿಲ್ದಾಣಕ್ಕೆ ತೆರಳಲು ಈಗಿರುವ ಮಾರ್ಗವನ್ನೇ ಎಲ್ಲರೂ ಅವಲಂಬಿಸಬೇಕಾಗಿದೆ. ಹೀಗಾಗಿ ಇಲ್ಲಿ ಹೊಸ ಫ್ಲೈಓವರ್ ನಿರ್ಮಿಸುವ ಅಗತ್ಯವಿದೆ ಎಂದು ತೀರ್ಮಾನಿಸಿದ್ದೇವೆ ಎಂದರು.

ಫ್ಲೈಓವರ್ ಅನ್ನು ಯಾವ ಮಾದರಿಯಲ್ಲಿ ನಿರ್ಮಿಸಬೇಕು ಅಥವಾ ಬೇರೆ ರೀತಿಯ ವ್ಯವಸ್ಥೆ ಮಾಡಬೇಕೇ ಎಂಬುದನ್ನು ತಾಂತ್ರಿಕವಾಗಿ ಪರಿಶೀಲಿಸಬೇಕಿದೆ. ಈ ಕುರಿತು ಈಗಾಗಲೇ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇವೆ.



ಸಿಎಂ ಡಿ ಕೆ ಶಿವಕುಮಾರ್ ಅವರು ಬ್ಯಾಟರಾಯನಪುರದ ಜಕ್ಕೂರು ರೈಲ್ವೆ ಮೇಲ್ಸೇತುವೆಯನ್ನು ಬುಧವಾರ ಉದ್ಘಾಟಿಸಿದರು. ಸಚಿವ ಕೃಷ್ಣ ಬೈರೇಗೌಡ, ಶಾಸಕ ಪ್ರಸಾದ್ ಅಬ್ಬಯ್ಯ, ದೊಡ್ಡಬಳ್ಳಾಪುರ ಮಾಜಿ ಶಾಸಕ ವೆಂಕಟರಮಣಯ್ಯ ಮತ್ತಿತರರು ಇದ್ದರು.

ಅಧಿಕಾರಿಗಳು, ಸಚಿವರು ಹಾಗೂ ಶಾಸಕರೊಂದಿಗೆ ಚರ್ಚಿಸಿದ್ದು, ಯಾವ ಮಾರ್ಗದಲ್ಲಿ ಕಾಮಗಾರಿ ಕೈಗೊಳ್ಳಬೇಕು ಎಂಬುದನ್ನು ನಿರ್ಧರಿಸಲಾಗುವುದು" ಎಂದು ತಿಳಿಸಿದರು.

ರೋಟರಿ ಮೇಲ್ಸೇತುವೆ ಬೆಂಗಳೂರಿನ ಕಿರೀಟವಾಗಲಿದೆ: ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಬೆಂಗಳೂರಿನಲ್ಲಿ ಹೆಬ್ಬಾಳ ಫ್ಲೈಓವರ್ ನಿರ್ಮಾಣವಾಯಿತು. ಬಳಿಕ ಇದುವೇ ಅತ್ಯಂತ ಪ್ರಮುಖವಾದ ಮೂಲಸೌಕರ್ಯ ನಿರ್ಮಾಣವಾಗಿದೆ. ಈ ಮೇಲ್ಸೇತುವೆ ಮೂರು ಕ್ಷೇತ್ರಗಳನ್ನು ಜೋಡಿಸುತ್ತದೆ. ಬೆಂಗಳೂರಿನ ನಾಗರಿಕರ ಸಮಯವನ್ನು ಉಳಿಸಬೇಕೆಂಬ ಉದ್ದೇಶದಿಂದ ಹಲವಾರು ಮೂಲಸೌಕರ್ಯ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದೇವೆ. ಈ ರೋಟರಿ ಮೇಲ್ಸೇತುವೆ ಬೆಂಗಳೂರಿಗೆ ಕಿರೀಟವಾಗಲಿದೆ" ಎಂದು ಹೇಳಿದರು.

"ಈ ಮೇಲ್ಸೇತುವೆ ಕಾಮಗಾರಿ ತಾಂತ್ರಿಕವಾಗಿ ಕ್ಲಿಷ್ಟಕರವಾಗಿದೆ. ಆರು ಪಥಗಳ ಫ್ಲೈಓವರ್ ಸುಲಭದ ಕೆಲಸವಲ್ಲ. ಆದ್ಯತೆ ಮೇರೆಗೆ ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಸಂಚಾರಕ್ಕೆ ಹೆಚ್ಚಿನ ತೊಂದರೆಯಾಗದಂತೆ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ಕೈಗೊಂಡಿದ್ದೇವೆ. ಜನರ ಸಲಹೆಗಳನ್ನು ಪಡೆದುಕೊಂಡು, ಸಂಚಾರಿ ಪೊಲೀಸರ, ನಾಗರಿಕರ ಸಲಹೆಗಳನ್ನು ಪಡೆದು ಕೊಂಡು ಅನುಷ್ಠಾನ ಮಾಡಲಾಗುತ್ತಿದೆ" ಎಂದರು.

ಒಂದೇ ದಿನದಲ್ಲಿ ಬದಲಾವಣೆ ತರಲು ಸಾಧ್ಯವಿಲ್ಲ: ಬೆಂಗಳೂರು ನಾಗರಿಕರ ಬದುಕಿನಲ್ಲಿ ಒಂದೇ ದಿನ ಯಾರ ಕೈಯಲ್ಲಿಯೂ ಬದಲಾವಣೆ ಮಾಡಲು ಸಾಧ್ಯವಿಲ್ಲ. ಒಂದು ಯೋಜನೆ ತಯಾರಾಗಬೇಕಾದರೆ ಆರ್ಥಿಕ ವ್ಯವಸ್ಥೆ ಕಲ್ಪಿಸಬೇಕು. ಆಸ್ತಿಗಳಿಗೆ ಖಾತೆ, ತೆರಿಗೆ, ಕಟ್ಟಬೇಕು. ತೆರಿಗೆಯ ಹೊರೆ ಹೆಚ್ಚಾಗದಂತೆ, ಕಾರ್ಪೊರೇಷನ್‌ಗಳಿಗೆ ಸಹಾಯ ಮಾಡಬೇಕೆಂದು ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಕ್ಕೂರು ವಿಮಾನ ನಿಲ್ದಾಣದ ಎದುರು ಪಾಲಿಕೆ ಕಚೇರಿ ನಿರ್ಮಾಣಕ್ಕೆ ಸಿದ್ಧತೆ

ಜಕ್ಕೂರು ವಿಮಾನ ನಿಲ್ದಾಣದ ಎದುರು ಪಾಲಿಕೆ ಕಚೇರಿ ನಿರ್ಮಾಣಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಈ ಕ್ಷೇತ್ರದ ಜನ ಬೆಂಗಳೂರು ಪಾಲಿಕೆಗೆ ಹೋಗಬೇಕಿಲ್ಲ. ನಿಮ್ಮದೇ ಪಾಲಿಕೆ ಕಚೇರಿ ನಿರ್ಮಾಣವಾಗಲಿದೆ. ಬೆಳೆಯುತ್ತಿರುವ ಬೆಂಗಳೂರಿನ ಅಗತ್ಯಗಳಿಗೆ ತಕ್ಕಂತೆ ವ್ಯವಸ್ಥೆಗಳನ್ನು ಕೈಗೊಳ್ಳಲಾಗುವುದು. ವಿಮಾನ ನಿಲ್ದಾಣ ನಿರ್ಮಾಣವಾದ ನಂತರ ಈ ಕ್ಷೇತ್ರದ ಆಸ್ತಿ ಬೆಲೆಯೂ ಹೆಚ್ಚಳವಾಗಿದೆ. ಹೊರ ರಾಜ್ಯಗಳ ಜನರೂ ಇಲ್ಲಿ ನೆಲೆಸಿದ್ದು ಅನೇಕರಿಗೆ ಅನುಕೂಲವಾಗಿದೆ. ಅದಕ್ಕೆ ಸೂಕ್ತ ಸೌಲಭ್ಯಗಳನ್ನು ಕಲ್ಪಿಸಲು ವ್ಯವಸ್ಥೆ ಕೈಗೊಳ್ಳಲಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಗ್ರಾಮೀಣ ಸೇವಾ ವೈದ್ಯರಿಗೆ ಬಿಗ್ ರಿಲೀಫ್: ವೇತನ ಕಡಿತ ಆದೇಶ ರದ್ದುಗೊಳಿಸಿದ ಹೈಕೋರ್ಟ್

ಬೆಂಗಳೂರು, ನ.18: ಸರ್ಕಾರಿ ಕೋಟಾದಡಿ ಎಂಬಿಬಿಎಸ್ ಪದವಿ ಪೂರೈಸಿ, ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ಒಂದು ವರ್ಷದ ಕಡ್ಡಾಯ ಸೇವೆಗೆ ನಿಯೋಜನೆಗೊಂಡಿರುವ ಕಿರಿಯ ವೈದ್ಯರ ಮಾಸಿಕ ವೇತನವನ್ನು ಕಡಿತಗೊಳಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶವನ್ನು ಕರ್ನಾಟಕ ಹೈಕೋರ್ಟ್ ರದ್ದುಪಡಿಸಿದೆ.

ಇದರಿಂದ ರಾಷ್ಟ್ರೀಯ ಆರೋಗ್ಯ ಮಿಷನ್ (ಎನ್‌ಹೆಚ್‌ಎಂ) ಮತ್ತು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ವೈದ್ಯರಿಗೆ ಈ ತೀರ್ಪಿನಿಂದ ದೊಡ್ಡ ರಿಲೀಫ್ ಸಿಕ್ಕಂತಾಗಿದೆ.

2024 ಮತ್ತು 2025ನೇ ಸಾಲಿನಲ್ಲಿ ಎಂಬಿಬಿಎಸ್ ಮುಗಿಸಿ ಗ್ರಾಮೀಣ ಸೇವೆಗೆ ನಿಯೋಜನೆಗೊಂಡಿದ್ದ ಕಲಬುರಗಿ ಮೂಲದ ಡಾ. ಶಶಿಕುಮಾರ್ (ಮುಂಡಗೋಡ ತಾಲೂಕು ಆಸ್ಪತ್ರೆ)



ಸೇರಿದಂತೆ ರಾಜ್ಯದ ವಿವಿಧ ಆಸ್ಪತ್ರೆಗಳ 38 ಮಂದಿ ವೈದ್ಯರು ಸರ್ಕಾರದ ವೇತನ ಕಡಿತ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುನಿಲ್ ದತ್ ಯಾದವ್ ಅವರಿದ್ದ ಏಕಸದಸ್ಯ ಪೀಠ, ವೈದ್ಯರ ಅರ್ಜಿಯನ್ನು ಪುರಸ್ಕರಿಸಿ ಸರ್ಕಾರದ ಕ್ರಮವನ್ನು ಅನೂರ್ಜಿತಗೊಳಿಸಿದೆ.

ಈ ಹಿಂದೆ 2025ರ ಆಗಸ್ಟ್ 18ರಂದು ಅಧಿಸೂಚನೆ ಹೊರಡಿಸಿದ್ದ ರಾಜ್ಯ ಸರ್ಕಾರ, ಎನ್‌ಎಚ್‌ಎಂ ಅಡಿಯಲ್ಲಿ ನಿಯೋಜನೆ ಗೊಂಡ ವೈದ್ಯರಿಗೆ ಮಾಸಿಕ 75,000 ರೂ. ಹಾಗೂ ಹೆಚ್‌ಎಫ್‌ಡಬ್ಲ್ಯೂಎಸ್ ಯೋಜನೆಯಡಿಯ ವೈದ್ಯರಿಗೆ ಮಾಸಿಕ 62,666 ರೂ. ವೇತನ ನಿಗದಿಪಡಿಸಿತ್ತು.

ಆದರೆ, ಕೇವಲ ಎರಡು ತಿಂಗಳ ಅಂತರದಲ್ಲಿ ಅಂದರೆ 2025ರ ಅಕ್ಟೋಬರ್ 28ರಂದು ಏಕಾಏಕಿ ಪರಿಷ್ಕೃತ ಅಧಿಸೂಚನೆ ಹೊರಡಿಸಿ, ವೇತನವನ್ನು ಕ್ರಮವಾಗಿ 70,000 ರೂ. ಮತ್ತು 60,000 ರೂ.ಗಳಿಗೆ ಕಡಿತಗೊಳಿಸಿತ್ತು.

ಸರ್ಕಾರದ ಈ ಏಕಪಕ್ಷೀಯ ನಿರ್ಧಾರ ಕಾನೂನುಬಾಹಿರವಾಗಿದೆ ಎಂದು ಅರ್ಜಿದಾರರು ನ್ಯಾಯಾಲಯದಲ್ಲಿ ವಾದ ಮಂಡಿಸಿದ್ದರು. ವಾದ–ಪ್ರತಿವಾದಗಳನ್ನು ಆಲಿಸಿದ ಹೈಕೋರ್ಟ್, ವೇತನ ಕಡಿತ ಆದೇಶವನ್ನು ರದ್ದುಪಡಿಸಿದ್ದಲ್ಲದೆ, ಹಳೆಯ ಅಧಿಸೂಚನೆ ಯಂತೆಯೇ ಎನ್ಟೆಚ್‌ಎಂ ವೈದ್ಯರಿಗೆ 75,000 ರೂ. ಹಾಗೂ ಎಚ್‌ಎಫ್‌ಡಬ್ಲ್ಯೂಎಸ್ ವೈದ್ಯರಿಗೆ 62,666 ರೂ. ಮಾಸಿಕ ವೇತನ ಪಾವತಿಸುವಂತೆ ರಾಜ್ಯ ಸರ್ಕಾರಕ್ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.

ಜಿಬಿಎ ಚುನಾವಣೆ: ಮತ್ತಷ್ಟು ಸಮಯಾವಕಾಶ ಕೋರಿ ಸುಪ್ರೀಂಗೆ ಕರ್ನಾಟಕ ಸರ್ಕಾರ ಮನವಿ


ಬೆಂಗಳೂರು, ನ.18: ಜಿಬಿಎ ಚುನಾವಣೆ ವಿಚಾರದಲ್ಲಿ ಚುನಾವಣಾ ಆಯೋಗ ಸುಪ್ರೀಂ ಕೋರ್ಟ್ ಕದ ತಟ್ಟಿರುವ ಸಂದರ್ಭದಲ್ಲೇ ಸರ್ಕಾರ ಕೂಡ ಚುನಾವಣೆಗೆ ಮತ್ತಷ್ಟು ಸಮಯ ನೀಡುವಂತೆ ನ್ಯಾಯಾಲಯಕ್ಕೆ ಮನವಿ ಮಾಡಿಕೊಂಡಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆ ನಡೆಸಲು ನಿಗದಿಪಡಿಸಿರುವ ಕಾಲಮಿತಿಯನ್ನು ವಿಸ್ತರಿಸುವಂತೆ ಕೋರಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ನ ಮೊರೆ ಹೋಗಿದೆ.

2026ರ ಡಿಸೆಂಬರ್ ಅಂತ್ಯದೊಳಗೆ ಚುನಾವಣೆ ನಡೆಸುವ ಬದಲಿಗೆ 2027ರ ಜನವರಿ 31ರೊಳಗೆ ಚುನಾವಣೆ ಪೂರ್ಣಗೊಳಿಸಲು ಅನುಮತಿ ನೀಡುವಂತೆ ಸರ್ಕಾರ ಮನವಿ ಮಾಡಿದೆ. ರಾಜ್ಯ ಚುನಾವಣಾ ಆಯೋಗವು ಸಲ್ಲಿಸಿರುವ ಕಾಲಾವಕಾಶ ವಿಸ್ತರಣೆಯ ಅರ್ಜಿಯನ್ನು ಬೆಂಬಲಿಸಿ ರಾಜ್ಯ ಸರ್ಕಾರವೂ ಸುಪ್ರೀಂ ಕೋರ್ಟ್‌ಗೆ ಪ್ರತ್ಯೇಕ ಅರ್ಜಿ ಸಲ್ಲಿಸಿದೆ. ಜೊತೆಗೆ, ಹೊಸದಾಗಿ ಮತದಾರರ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆಗೆ ಹೆಚ್ಚಿನ ಸಮಯ ಬೇಕಾಗುವುದರಿಂದ ಹಳೆಯ ಮತದಾರರ ಪಟ್ಟಿಯನ್ನೇ ಆಧರಿಸಿ ಚುನಾವಣೆ ನಡೆಸಲು ಅವಕಾಶ ನೀಡುವಂತೆ ಕೋರಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಸವಾಲು:

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಿಂದ ಬೆಂಗಳೂರಿನಲ್ಲಿ 43 ಲಕ್ಷಕ್ಕೂ ಅಧಿಕ ಮತದಾರರ ಹೆಸರುಗಳು ಕಡಿತಗೊಂಡಿರುವುದನ್ನು



ಸರ್ಕಾರ ತನ್ನ ಅರ್ಜಿಯಲ್ಲಿ ಉಲ್ಲೇಖಿಸಿದೆ. ಈ ಹಿನ್ನೆಲೆಯಲ್ಲಿ ಹೊಸದಾಗಿ ವಾರ್ಡ್‌ವಾರು ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ದೊಡ್ಡ ಸವಾಲಾಗಿ ಪರಿಣಮಿಸಿದೆ ಎಂದು ತಿಳಿಸಿದೆ.

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆಗಾಗಿ ಹೊಸದಾಗಿ ವಾರ್ಡ್‌ವಾರು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಕನಿಷ್ಠ ಎರಡು ತಿಂಗಳ ಕಾಲಾವಕಾಶ ಅಗತ್ಯವಿದೆ. ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ನಿಗದಿತ ಅವಧಿಯೊಳಗೆ ಚುನಾವಣೆ ನಡೆಸುವುದು ಕಷ್ಟಸಾಧ್ಯವಾಗಿರುವುದರಿಂದ ಕಾಲಾವಕಾಶ ವಿಸ್ತರಿಸುವ ಅಗತ್ಯವಿದೆ ಎಂಬುದು ಸರ್ಕಾರದ ವಾದವಾಗಿದೆ.

ಹಳೆಯ ಪಟ್ಟಿಯಲ್ಲಿ 88.95 ಲಕ್ಷ ಮತದಾರರು:

ಹಳೆಯ ಮತದಾರರ ಪಟ್ಟಿಯಲ್ಲಿ ಒಟ್ಟು 88.95 ಲಕ್ಷ ಮತದಾರರ ಹೆಸರುಗಳಿದ್ದು, ಇದೇ ಪಟ್ಟಿಯನ್ನು ಬಳಸಿಕೊಂಡು ಚುನಾವಣೆ ನಡೆಸಲು ಅನುಮತಿ ನೀಡುವಂತೆ ರಾಜ್ಯ ಸರ್ಕಾರ ಮನವಿ ಮಾಡಿದೆ. ಹೊಸ ಮತದಾರರ ಪಟ್ಟಿ ಸಿದ್ಧಪಡಿಸುವುದರಿಂದ ಎದುರಾಗಬಹುದಾದ ವಿಳಂಬವನ್ನು ತಪ್ಪಿಸಿ ಚುನಾವಣಾ ಪ್ರಕ್ರಿಯೆಯನ್ನು ಸುಗಮವಾಗಿ ನಡೆಸಲು ಹಳೆಯ ಪಟ್ಟಿಯ ಬಳಕೆ ಸಹಕಾರಿಯಾಗಲಿದೆ ಎಂಬ ಅಭಿಪ್ರಾಯವನ್ನು ಸರ್ಕಾರ ಮುಂದಿಟ್ಟಿದೆ. ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆಗಳನ್ನು ಮುಕ್ತ ಹಾಗೂ ನ್ಯಾಯಸಮ್ಮತವಾಗಿ ನಡೆಸಲು ಅಗತ್ಯವಿರುವ ಎಲ್ಲ ಸಹಕಾರವನ್ನು ರಾಜ್ಯ ಸರ್ಕಾರ ನೀಡಲಿದೆ ಎಂದು ಅರ್ಜಿಯಲ್ಲಿ ಭರವಸೆ ನೀಡಿದೆ. ಈಗಾಗಲೇ ಸುಪ್ರೀಂ ಕೋರ್ಟ್ ನಿಗದಿಪಡಿಸಿರುವ ಕಾಲಮಿತಿಯ ಹಿನ್ನೆಲೆಯಲ್ಲಿ, ರಾಜ್ಯ ಚುನಾವಣಾ ಆಯೋಗದ ಅರ್ಜಿಗೆ ಬೆಂಬಲ ಸೂಚಿಸಿ ಸರ್ಕಾರವೂ ನ್ಯಾಯಾಲಯದ ಮೊರೆ ಹೋಗಿರುವುದು ಮಹತ್ವ ಪಡೆದುಕೊಂಡಿದೆ.

ಚುನಾವಣೆ ಮುಂದೂಡಿಕೆ, ಹೊಸ ಮತದಾರರ ಪಟ್ಟಿ ಸಿದ್ಧಪಡಿಸುವ ಅವಧಿ ಹಾಗೂ ಹಳೆಯ ಪಟ್ಟಿಯ ಬಳಕೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಯಾವ ನಿರ್ಧಾರ ಕೈಗೊಳ್ಳಲಿದೆ ಎಂಬುದು ಈಗ ಕುತೂಹಲ ಮೂಡಿಸಿದೆ. ನ್ಯಾಯಾಲಯದ ತೀರ್ಪಿನ ಬಳಿಕ ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣಾ ವೇಳಾಪಟ್ಟಿ ಮತ್ತು ಮತದಾರರ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆಯ ಮುಂದಿನ ನಡೆ ಸ್ಪಷ್ಟವಾಗಲಿದೆ.

ಸಚಿವ ರಿಜ್ವಾನ್ ಅರ್ಷದ್ ವಿರುದ್ಧ ಮುರುಗೇಶ್ ನಿರಾಣಿ ವಾಗ್ದಾಳಿ

ಎಥೆನಾಲ್ ಮಿಶ್ರಣ ವಿಚಾರದಲ್ಲಿ ಸುಳ್ಳು ಮಾಹಿತಿ ನೀಡಿ ಜನರ ದಿಕ್ಕುತಪ್ಪಿಸುವ ಕೆಲಸ

ಮೈಸೂರು, ನ.18: ಎಥೆನಾಲ್ ಮಿಶ್ರಣದ ವಿಚಾರದಲ್ಲಿ ಸಚಿವ ರಿಜ್ವಾನ್ ಅರ್ಷದ್ ಸುಳ್ಳು ಸುದ್ದಿಗಳನ್ನು ಹಬ್ಬಿಸುವ ಮೂಲಕ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಮುರುಗೇಶ್ ನಿರಾಣಿ ವಾಗ್ದಾಳಿ ನಡೆಸಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, ಎಥೆನಾಲ್ ಉತ್ಪಾದನೆ ಬಿಜೆಪಿ ಸರ್ಕಾರ ಬಂದ ಮೇಲೆ ಆರಂಭವಾದದ್ದಲ್ಲ; ಬದಲಾಗಿ ಮೈಸೂರು ಮಹಾರಾಜರ ಕಾಲದಲ್ಲೇ ಇದಕ್ಕೆ ಚಾಲನೆ ನೀಡಲಾಗಿತ್ತು ಎಂದು ಸ್ಪಷ್ಟಪಡಿಸಿದರು.

ಪ್ರಸ್ತುತ ದೇಶದಲ್ಲಿ 500 ಎಥೆನಾಲ್ ಉತ್ಪಾದನಾ



ಕೇಂದ್ರಗಳಿದ್ದು, ಪ್ರತಿವರ್ಷ 1,200 ಕೋಟಿ ಲೀಟರ್ ಎಥೆನಾಲ್ ಅನ್ನು ಕೇವಲ ಪೆಟ್ರೋಲ್‌ಗೆ ಮಾತ್ರ ಮಿಶ್ರಣ ಮಾಡಲಾಗುತ್ತಿದೆಯೇ ಹೊರತು ಡೀಸೆಲ್‌ಗೆ ಮಿಶ್ರಣ ಮಾಡುತ್ತಿಲ್ಲ, ಅಲ್ಲದೆ ಪೆಟ್ರೋಲ್ ಬಂಕ್‌ಗಳಿಗೆ ಇದರಿಂದ ಯಾವುದೇ ಹೆಚ್ಚಿನ ಲಾಭವಿಲ್ಲ ಎಂದು ವಿವರಿಸಿದರು.

ಇದೇ ವೇಳೆ ಸಚಿವ ರಿಜ್ವಾನ್ ಅರ್ಷದ್ ಅವರ ಆರೋಪಗಳಿಗೆ ನೇರ ಸವಾಲು ಹಾಕಿದ ನಿರಾಣಿ, "ಸಚಿವರು ಯಾವ ಪೆಟ್ರೋಲಿಯಂ ಟರ್ಮಿನಲ್‌ನಿಂದ ಸ್ಯಾಂಪಲ್ ತೆಗೆದಿದ್ದಾರೆ ಮತ್ತು ಆ ಸಂದರ್ಭದಲ್ಲಿ ಯಾವೆಲ್ಲಾ ಅಧಿಕಾರಿಗಳು ಹಾಜರಿದ್ದರು ಎಂಬುದನ್ನು ಬಹಿರಂಗಪಡಿಸಲಿ" ಎಂದು ಆಗ್ರಹಿಸಿದರು.

ಸುಮ್ಮನೆ ಆರೋಪಗಳನ್ನು ಮಾಡುತ್ತಾ ತಪ್ಪಿಸಿಕೊಳ್ಳುವ ಬದಲು, ಸ್ಯಾಂಪಲ್ ಪರೀಕ್ಷೆಗಾಗಿ ಸಚಿವರು ತಕ್ಷಣವೇ ಒಂದು ಸಮಿತಿಯನ್ನು ರಚನೆ ಮಾಡಲಿ ಎಂದು ಅವರು ಒತ್ತಾಯಿಸಿದರು.

ಬರಪೀಡಿತ ರಾಜ್ಯಗಳಿಗೆ ನೆರವು ನೀಡುವುದು ಕೇಂದ್ರದ ಜವಾಬ್ದಾರಿ: ಸಚಿವ ಸಂತೋಷ್ ಲಾಡ್

ಬೆಂಗಳೂರು, ನ.18: ಕರ್ನಾಟಕಕ್ಕೆ ಬರ ಪರಿಹಾರ ನೀಡುವಲ್ಲಿ ಕೇಂದ್ರ ಸರ್ಕಾರದ ವಿಳಂಬದ ಬಗ್ಗೆ ಸಚಿವ ಸಂತೋಷ್ ಲಾಡ್ ಅಸಮಾಧಾನ ವ್ಯಕ್ತಪಡಿಸಿದ್ದು, ರಾಜ್ಯಗಳು ಬರಗಾಲಕ್ಕೆ ತುತ್ತಾದಾಗ ನೆರವು ನೀಡುವ ಜವಾಬ್ದಾರಿ ಕೇಂದ್ರ ಸರ್ಕಾರದ್ದು ಎಂದಿದ್ದಾರೆ.

ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದಾಗಲೂ ಕೇಂದ್ರದಿಂದ ಹಣಕಾಸಿನ ನೆರವು ಸಿಕ್ಕಿರಲಿಲ್ಲ. ಈಗ ಕಾಂಗ್ರೆಸ್ ಸರ್ಕಾರ ಅಧಿಕಾರ ದಲ್ಲಿದ್ದರೂ ಕೇಂದ್ರದಿಂದ ಹಣ ಬಂದಿಲ್ಲ. ಬಿಜೆಪಿ ಸರ್ಕಾರವಿದ್ದಾಗಲೇ ಬರ ಬರಿಹಾರ ಬಂದಿಲ್ಲ ಎಂದರೆ ಈಗಲೂ ಬರುವುದಿಲ್ಲ ಎಂದೇ



ನಾವು ಭಾವಿಸುತ್ತಿದ್ದೇವೆ ಎಂದರು.

ಈ ಹಿಂದೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗ ರಾಜ್ಯ ಸರ್ಕಾರವು ಹಕ್ಕು ಮಂಡಿಸಿ ಸುಪ್ರೀಂ ಕೋರ್ಟ್‌ಗೆ ಹೋಗಿ ಬರ ಪರಿಹಾರ ಹಣವನ್ನು ಪಡೆದಿತ್ತು. ಆಗಲೇ ಕೇಂದ್ರಕ್ಕೆ ನಾಚಿಕೆಯಾಗಬೇಕಿತ್ತು. ಅದೇನು ಅವರ ದುಡ್ಡಲ್ಲ, ಅದು ನಮ್ಮದೇ ದುಡ್ಡು ಎಂದು ತಿಳಿಸಿದರು.

**ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಈ ವಿಷಯದ ಕುರಿತು ಮಾತುಕತೆ ನಡೆಸುತ್ತಿದ್ದು, ಸಕಾರಾತ್ಮಕ ಫಲಿತಾಂಶಕ್ಕಾಗಿ ಕಾಯುತ್ತಿರುವುದಾಗಿ ತಿಳಿಸಿದ್ದಾರೆ. ರಾಹುಲ್ ಗಾಂಧಿಯವರು ತಮ್ಮ ತಾಯಿ ಸೋನಿ



ಸಿಎಂ ಡಿ.ಕೆ.ಶಿವಕುಮಾರ್ ಅವರು ಮಾರುತಿ ಸೇವಾನಗರ ಮುಖ್ಯರಸ್ತೆ ಐಒಸಿ ಜಂಕ್ಷನ್ ರೋಟರಿ ಮೇಲ್ಸೇತುವೆಯ ಶಂಕುಸ್ಥಾಪನೆಯನ್ನು ಬುಧವಾರ ನೆರವೇರಿಸಿ ಮಾತನಾಡಿದರು. ಸಚಿವ ಕೃಷ್ಣ ಬೈರೇಗೌಡ, ಶಾಸಕ ಎ.ಸಿ. ಶ್ರೀನಿವಾಸ್, ಮುಖಂಡ ರಾಣಾ ಜಾರ್ಜ್ ಮತ್ತಿತರರು ಉಪಸ್ಥಿತರಿದ್ದರು

ಕುಡಿಯುವ ನೀರಿಗೆ ಸಮಸ್ಯೆ ಆಗದಿರಲಿ: ಸಚಿವ ಈಶ್ವರ ಖಂಡ್ರೆ

ಬೀದರ್, ನ. 18: ಜಿಲ್ಲೆಯ ಯಾವ ಭಾಗದಲ್ಲೂ ಕುಡಿಯುವ ನೀರಿಗೆ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು. ಇದು ಸಂಬಂಧಿಸಿದ ಆಯಾ ಭಾಗದ ಅಧಿಕಾರಿಗಳ ಜವಾಬ್ದಾರಿಯಾಗಿದೆ. ತಲಪ್ಪಿದರೆ ಕ್ರಮ ಎದುರಿಸಬೇಕಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯ ಬರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ, ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಜಿಲ್ಲೆಯ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು. ನೀರಿನ ಕೊರತೆ ಇರುವ ಗ್ರಾಮಗಳನ್ನು ತಕ್ಷಣ ಗುರುತಿಸಿ, ಅಗತ್ಯವಿರುವ ಕಡೆಗಳಲ್ಲಿ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆಯಬೇಕು. ಟ್ಯಾಂಕರ್‌ಗಳ ಮೂಲಕ ನೀರು ಪೂರೈಸುವುದು ಸೇರಿದಂತೆ ಪರ್ಯಾಯ ವ್ಯವಸ್ಥೆ ಕೈಗೊಳ್ಳಬೇಕು. ದೂರು ಬಂದಲ್ಲಿ ಸ್ಪಂದಿಸಿ: ಕೆಟ್ಟು ಹೋಗಿರುವ ಕೊಳವೆ ಬಾವಿಗಳು, ಪಂಪ್‌ಸೆಟ್‌ಗಳು ಹಾಗೂ ನೀರು ಸರಬರಾಜು ವ್ಯವಸ್ಥೆಗಳನ್ನು ತಕ್ಷಣ ದುರಸ್ತಿಗೊಳಿಸಬೇಕು. ಜನರಿಗೆ ಸಮರ್ಪಕವಾಗಿ ನೀರು ತಲುಪುವಂತೆ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆ ಕುರಿತು ಸಾರ್ವಜನಿಕರಿಂದ ದೂರುಗಳು ಬಂದಲ್ಲಿ ವಿಳಂಬ ಮಾಡದೆ ತಕ್ಷಣ ಸ್ಪಂದಿಸಬೇಕು ಎಂದು ಹೇಳಿದರು.

ಬರ ಪರಿಸ್ಥಿತಿಯಿಂದ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಜನರು ತೊಂದರೆ ಅನುಭವಿಸದಂತೆ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು.



ಬರಪೀಡಿತ ಪ್ರದೇಶಗಳ ಪರಿಸ್ಥಿತಿಯನ್ನು ನಿರಂತರವಾಗಿ ಪರಿಶೀಲಿಸಿ, ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಮನ್ವಯ ಇರಲಿ: ಗ್ರಾಮ ಪಂಚಾಯಿತಿಗಳು, ತಾಲ್ಲೂಕು ಪಂಚಾಯಿತಿಗಳು, ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಸಭೆಗಳಿಗೆ ಸೀಮಿತವಾಗದೆ, ಗ್ರಾಮಗಳಿಗೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಬೇಕು. ಜನರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಲು ಆದ್ಯತೆ ನೀಡಬೇಕು ಎಂ ದರು.

ಬರ ಮತ್ತು ಕುಡಿಯುವ ನೀರಿನ ಸಮಸ್ಯೆ ನಿರ್ವಹಣೆಯಲ್ಲಿ ಯಾವುದೇ ನಿರ್ಲಕ್ಷ್ಯ ಅಥವಾ ವಿಳಂಬ ಸಹಿಸುವುದಿಲ್ಲ. ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ. ಅಧಿಕಾರಿಗಳು ಸಂಪೂರ್ಣ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.

ಬಂದ್ ಕೈಬಿಡಲು ಮನವಿ: ಜಿಲ್ಲೆಯ ಔರಾದ್ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಹೊಸದಾಗಿ 10 ವಾರ್ಡ್ ಗಳಲ್ಲಿ ಕೊಳವೆ ಬಾವಿ ಕೊರೆಸಲು ಮತ್ತು ಹೊಸ ಮೋಟಾರ್ ಖರೀದಿಸಲು ಸಮ್ಮತಿಸಲಾಗಿದ್ದು, ಬಂದ್ ಕರೆ ಕೈಬಿಡಬೇಕು ಎಂದು ಸಚಿವ ಈಶ್ವರ ಖಂಡ್ರೆ ಮನವಿ ಮಾಡಿದರು. ಔರಾದ್ ಪಟ್ಟಣಕ್ಕೆ ಪ್ರಸ್ತುತ ತೇಗಂಪುರ ಕೆರೆಯಿಂದ ನೀರು ಪೂರೈಸಲಾಗುತ್ತಿದೆ. ಅದು 7 ವಾರ್ಡ್‌ಗಳಿಗೆ ಮಾತ್ರ ನೀರು ಒದಗಿಸುತ್ತಿದೆ. ಬಾಕಿ 13 ವಾರ್ಡ್‌ಗಳಿಗೆ ಅಗತ್ಯಕ್ಕೆ ಅನುಗುಣವಾಗಿ ನೀರು ಪೂರೈಸಲು 35 ಹಾಗೂ 30 ಎಚ್‌ಪಿ ಮೋಟಾರ್ ಅನ್ನು ತೇಗಂಪುರ ಕೇಂದ್ರಕ್ಕೆ ವರ್ಗಾಯಿಸಲೂ ಸೂಚಿಸಿದರು. ಜಿಲ್ಲಾ ಭೂಶಾಸ್ತ್ರಜ್ಞ ಹಾಗೂ ಅಂತರ್ಜಲ ವಿಜ್ಞಾನಿಗಳ ಅಭಿಪ್ರಾಯ ಪಡೆದು ನೀರು ಪೂರೈಕೆ ಆಗದಿರುವ 10 ವಾರ್ಡ್‌ಗಳಲ್ಲಿ ಹೊಸದಾಗಿ ಕೊಳವೆ ಬಾವಿ ಕೊರೆಸಲು ಮತ್ತು ಅದಕ್ಕೆ ಅಗತ್ಯವಾದ ಕೊಳವೆ ಮಾರ್ಗ, ಮೋಟಾರ್ ಮತ್ತು ವಿದ್ಯುತ್ ಸಂಪರ್ಕ ಪಡೆಯಲು ನಿರ್ದೇಶನ ನೀಡಿದರು.

ಬೀದರ್ ಉಪವಿಭಾಗಾಧಿಕಾರಿ ಮತ್ತು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಔರಾದ್ ಪಟ್ಟಣಕ್ಕೆ ಸಮರ್ಪಕವಾಗಿ ನೀರು ಪೂರೈಕೆ ಆಗುತ್ತಿದೆಯೇ ಎಂಬುದನ್ನು ಖುದ್ದು ಪರಿಶೀಲಿಸಿ, ಮೇಲುಸ್ತುವಾರಿ ವಹಿಸಬೇಕು ಸೂಚಿಸಿದರು.

ಜಲಜೀವನ್ ಮಿಷನ್ ಕಾಮಗಾರಿಗಳಲ್ಲಿ ಅವ್ಯವಹಾರ: ತನಿಖೆಗೆ ಆಗ್ರಹ



ಕಲಬುರಗಿ, ನ. 18: ಜಲಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೆ ಗಂಗೆ ಹೆಸರಿನಲ್ಲಿ ಜಿಲ್ಲೆಯ ಮಹಾಗಾಂವ ಸೇಯಿರಿದಂತೆ ಕಮಲಾಪುರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕೈಗೊಂಡಿರುವ ಕುಡಿಯುವ ನೀರು ಸರಬರಾಜು ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿವೆ. ಮಹಾಗಾಂವ ಗ್ರಾಮವೊಂದರಲ್ಲೇ ಸುಮಾರು 3.50 ಕೋಟಿ ರೂ. ವೆಚ್ಚದ ಕಾಮಗಾಯಿರಿಗಳಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪ ಕೇಳಿಬಂದಿದ್ದು, ಈ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಕರ್ನಾಟಕ ಯುವಶಕ್ತಿ ಸೈನ್ಯದ ಕಾರ್ಯಕರ್ತರು ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ ಮಾಡಿದರು.

ಈ ಸಂದರ್ಭದಲ್ಲಿ ಸಂಘಟನೆಯ ರಾಜ್ಯಾಧ್ಯಕ್ಷ ಲಿಂಗರಾಜ ಗುಂಡೂರ್‌ಕರ್ ಅವರು ಮಾತನಾಡಿ, ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಜಾರಿಗೊಳಿಸಿರುವ ಜಲಜೀವನ್ ಮಿಷನ್ ಯೋಜನೆಯ ಕಾಮಗಾರಿಗಳು ಮಹಾಗಾಂವ ಸೇರಿದಂತೆ ತಾಲೂಕಿನ ಹಲವು ಗ್ರಾಮಗಳಲ್ಲಿ ಕಳಪೆ ಮಟ್ಟದಲ್ಲಿ ನಡೆದಿವೆ ಎಂದು ಆರೋಪಿಸಿದರು. ಸರ್ಕಾರದ ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ ಎಂಬುದನ್ನು ಪರಿಶೀಲಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾಯಿರಿಗಳು ಕಾಮಗಾರಿಗಳ ಗುಣಮಟ್ಟದ ಕುರಿತು ಸಮಗ್ರ ತಪಾಸಣೆ ನಡೆಸಬೇಕು ಎಂದು ಒತ್ತಾಯಿಸಿದರು.

ಬಸವಕಲ್ಯಾಣ ನಗರಸಭೆಯಲ್ಲಿ, ನಕಲಿ ಇ-ಖಾತಾ ಸೃಷ್ಟಿ : ವಿಚಾರಣಾ ವರದಿಯಲ್ಲಿ ಬಹಿರಂಗ

ಬೀದರ್, ನ. 18: ಜಿಲ್ಲೆಯ ಬಸವ ಕಲ್ಯಾಣ ನಗರಸಭೆಯ ಪೌರಾಯುಕ್ತ ರಾಜು ಡಿ.ಬಣಕಾರ, ಪ್ರಭಾರ ಕಂದಾಯ ಅಧಿಕಾರಿ ಸುನಿಲಕುಮಾರ್ ವೀರಶೆಟ್ಟಿ ಹಾಗೂ ಪ್ರಭಾರ ಶಾಖಾ ಕಂದಾಯ ನಿರೀಕ್ಷಕ ಸೂರ್ಯಕಾಂತ್ ಅವರು ನಕಲಿ ಸ್ವತ್ತು ಖಾತೆಗಳನ್ನು ಸೃಷ್ಟಿಸಿ ಸರ್ಕಾರಕ್ಕೆ ಕೋಟ್ಯಂತರ ರೂಪಾಯಿ ನಷ್ಟ ಉಂಟುಮಾಡಿದ್ದಾರೆ ಎಂಬ ಆರೋಪ ಬಸವಕಲ್ಯಾಣದ ಸಹಾಯಕ ಆಯುಕ್ತರ ವಿಚಾರಣಾ ವರದಿಯಲ್ಲಿ ಬಹಿರಂಗವಾಗಿದೆ.

ಬಸವಕಲ್ಯಾಣ ನಗರದಲ್ಲಿ ಸರ್ಕಾರಿ ಜಮೀನು, ಗಾರ್ಡನ್, ಪಾರ್ಕಿಂಗ್ ಸ್ಥಳಗಳು ಹಾಗೂ ಕೆಲವು ಸರ್ವೆ ನಂಬರ್‌ಗಳ ಜಮೀನುಗಳಿಗೆ ಯಾವುದೇ ಸೇಲ್ ಡೀಡ್, ಆನ್‌ಲೈನ್ ಖಾತಾ ಮತ್ತು ಮ್ಯುಟೇಶನ್ ಇಲ್ಲದೆ ಖಾತೆಗಳನ್ನು ನೀಡಲಾಗಿದೆ ಎಂದು ಆರೋಪಿಸಿ ದೂರು ಸಲ್ಲಿಸಲಾಗಿತ್ತು. ಈ ದೂರಿನ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಬಸವಕಲ್ಯಾಣದ ಸಹಾಯಕ ಆಯುಕ್ತ ಪ್ರಕಾಶ್ ಬಿ. ಕುದರಿ ಅವರು ವಿಚಾರಣೆ ನಡೆಸಿ ವರದಿ ಸಲ್ಲಿಸಿದ್ದು, ಅದರಲ್ಲಿ ಅಕ್ರಮ ಖಾತೆಗಳ ಸೃಷ್ಟಿ ಪ್ರಕರಣ ಬೆಳಕಿಗೆ ಬಂದಿದೆ.

ಬಸವಕಲ್ಯಾಣ ನಗರದ ತ್ರಿಪುರಾಂತ ಗ್ರಾಮದ ಸರ್ವೆ ನಂ. 135/1ರಲ್ಲಿನ 2 ಎಕರೆ 39 ಗುಂಟೆ ಜಮೀನು, ಬಸವಕಲ್ಯಾಣ ನಗರದ ಸರ್ವೆ ನಂ. 106/ಬಿ ಜಮೀನು, ಬಸವಕಲ್ಯಾಣ ಗ್ರಾಮದ ಸರ್ವೆ ನಂ.



34/9ರಲ್ಲಿನ 4 ಎಕರೆ 16 ಗುಂಟೆ ಜಮೀನು, ತ್ರಿಪುರಾಂತ ಗ್ರಾಮದ ಸರ್ವೆ ನಂ. 266ರಲ್ಲಿನ 5 ಎಕರೆ ಜಮೀನು ಹಾಗೂ ಸರ್ವೆ ನಂ. 52/1ರ ಜಮೀನುಗಳಿಗೆ ನಗರಸಭೆಯ ಅಧಿಕಾರಿಗಳು ಕಾನೂನುಬಾಹಿರವಾಗಿ ಇ-ಆಸ್ತಿ ಖಾತಾ ಪ್ರತಿಗಳನ್ನು ವಿತರಿಸಿರುವುದು ಕಂಡುಬಂದಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಅಧಿಕಾರಿಗಳು ಮತ್ತು ಸಿಬ್ಬಂದಿ ತಮ್ಮ ಅಧಿಕಾರ ಹಾಗೂ ಕರ್ತವ್ಯಗಳನ್ನು ದುರುಪಯೋಗಪಡಿಸಿಕೊಂಡು, ಇ-ಆಸ್ತಿ ತಂತ್ರಾಂಶದ ಮೂಲಕ ಇ-ಖಾತಾ ನೀಡುವ ಪ್ರಮಾಣಿತ ಕಾರ್ಯವಿಧಾನ ಹಾಗೂ ನಿಯಮಗಳನ್ನು ಉಲ್ಲಂಘಿಸಿ ಕಾನೂನುಬಾಹಿರವಾಗಿ ನಕಲಿ ಸ್ವತ್ತು ಖಾತೆಗಳನ್ನು ಸೃಷ್ಟಿಸಿದ್ದಾರೆ. ಈ ಮೂಲಕ ಸರ್ಕಾರಿ ಬೊಕ್ಕಸಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವುದು ದಾಖಲೆಗಳಿಂದ ಸ್ಪಷ್ಟವಾಗಿ ಕಂಡು ಬರುತ್ತದೆ ಎಂದು ವಿಚಾರಣಾ ವರದಿಯಲ್ಲಿ ತಿಳಿಸಲಾಗಿದೆ.

ಆದ್ದರಿಂದ ಅಕ್ರಮವಾಗಿ ನೀಡಲಾದ ಖಾತೆಗಳು ಹಾಗೂ ಅನುಮತಿಗಳನ್ನು ನಿಯಮಾನುಸಾರ ಪರಿಶೀಲಿಸಿ ರದ್ದುಗೊಳಿಸಬೇಕು. ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ವರದಿಯಲ್ಲಿ ಶಿಫಾರಸು ಮಾಡಲಾಗಿದೆ.

ಟನ್ ಕಬ್ಬಿಗೆ 3600 ರೂ. ನೀಡಲು ಒಪ್ಪಿಗೆ ಹೋರಾಟ ಹಿಂಪಡೆದ ಕಬ್ಬು ಬೆಳೆಗಾರರು

ಬೆಳಗಾವಿ, ನ.18: ಒಂದು ಟನ್ ಕಬ್ಬಿಗೆ 5500 ರೂಪಾಯಿ ನಿಗದಿ ಮಾಡುವಂತೆ ರೈತರು ಭಾರೀ ಪ್ರಮಾಣದಲ್ಲಿ ಪ್ರತಿಭಟನೆ ನಡೆಸಿದ್ದು, ಅಂತಿಮವಾಗಿ ಸಕ್ಕರೆ ಕಾರ್ಖಾನೆಗಳು ಟನ್ ಕಬ್ಬಿಗೆ 3600 ರೂ. ನೀಡಲು ಒಪ್ಪಿಕೊಂಡಿವೆ. ಹೀಗಾಗಿ ಕಬ್ಬು ಬೆಳೆಗಾರರು ಪ್ರತಿಭಟನೆ ವಾಪಸ್ ಪಡೆದುಕೊಂಡಿದ್ದಾರೆ. ಆದ್ರೆ, ಇದೀಗ ಸಹಕಾರಿ ಇಲಾಖೆ ಸ್ವಾಮ್ಯದ ಘಟಪ್ರಭಾ ಸಕ್ಕರೆ ಕಾರ್ಖಾನೆ, ಖಾಸಗಿ ಕಾರ್ಖಾನೆಗಳಿಗೆ ಸೆಡ್ಡುಹೊಡೆದಿದ್ದು, ಪ್ರತಿ ಟನ್ ಕಬ್ಬಿಗೆ 3,800 ರೂ. ಘೋಷಣೆ ಮಾಡಿದೆ. ಮೊದಲ ಕಂತಿನ ದರ 3,800 ನೀಡುವುದಾಗಿ ಟಪ್ರಭಾ ಸಕ್ಕರೆ ಕಾರ್ಖಾನೆ ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಘೋಷಣೆ ಮಾಡಿದ್ದಾರೆ. ಅಲ್ಲದೇ ಸಕ್ಕರೆ ಮಾರಾಟದ ದರ ಆಧರಿಸಿ ರೈತರಿಗೆ ಹೆಚ್ಚುವರಿ ಹಣ ನೀಡುತ್ತೇವೆ ಎಂದಿದ್ದಾರೆ.ಬೆಳಗಾವಿ ಜಿಲ್ಲೆಯಲ್ಲಿ ಆಕ್ಟಿವ್ ಆಗಿರುವ 29 ಸಕ್ಕರೆ ಕಾರ್ಖಾನೆಗಳ ಪೈಕಿ 4 ಸಕ್ಕರೆ ಕಾರ್ಖಾನೆಗಳು ಮಾತ್ರ ಸಹಕಾರ



ಸಕ್ಕರೆ ಕಾರ್ಖಾನೆಗಳಾಗಿದ್ದು, ಬರಗಾಲದಿಂದ ಕಾರ್ಖಾನೆಗಳಿಗೆ ತೀವ್ರ ಸ್ವರೂಪದಲ್ಲಿ ಕಬ್ಬಿನ ಕೊರತೆ ಎದುರಾಗಿದೆ. ಹೀಗಾಗಿ ಕಬ್ಬು ನುರಿಸಲು ಕಾರ್ಖಾನೆಗಳು ಜಿದ್ದಿಗೆ ಬಿದ್ದಿವೆ. ಹೀಗಾಗಿ ಸತೀಶ್ ಜಾರಕಿಹೊಳಿ ಮಾಲೀಕತ್ವದ ಕಾರ್ಖಾನೆಗಳು ಸಹ ಪ್ರತಿ ಟನ್ ಕಬ್ಬಿಗೆ 3,800 ದರ ಘೋಷಣೆ ಮಾಡಿದ್ದು, ರೈತರಿಗೆ ಬಯಸದೇ ಬಂದ ಭಾಗ್ಯವಾಗಿದೆ.

ಸಂವಿಧಾನ ದಿನಾಚರಣೆಗೆ ಕಾಂಗ್ರೆಸ್ ವರಿಷ್ಠರಿಗೆ ಆಹ್ವಾನ

ಮೈಸೂರು, ನ.18: ನವೆಂಬರ್ 26ರಂದು ನಡೆಯಲಿರುವ ರಾಜ್ಯ ಸರ್ಕಾರದ ಅಧಿಕೃತ ಸಂವಿಧಾನ ದಿನಾಚರಣೆಗೆ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಆಹ್ವಾನಿಸಲಾಗಿದೆ. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಕೃಷಿ ಸಚಿವ ಪಿ.ಎಂ. ನರೇಂದ್ರಸ್ವಾಮಿ, ವಸತಿ ಸಚಿವ ಬಿ.ಝಡ್.ಜಮೀರ್ ಅಹಮದ್ ಖಾನ್ ಸೇರಿದಂತೆ ನಾಯಕರು ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿ ಆಹ್ವಾನ ಪತ್ರಿಕೆ ನೀಡಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರಾದ ಮೈಸೂರಿನಲ್ಲಿ ಈ ಬಾರಿಯ ಆಚರಣೆ ನಡೆಯುತ್ತಿರುವುದು ವಿಶೇಷ ಗಮನ ಸೆಳೆದಿದೆ.

ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2027: ವೇಳಾಪಟ್ಟಿ ಪ್ರಕಟ

ಬಳ್ಳಾರಿ,ನ.18. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 2027ನೇ ಸಾಲಿನ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆಗೆ ಸಂಬಂಧಿಸಿದ ವೇಳಾಪಟ್ಟಿಯನ್ನು ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯವು ಪ್ರಕಟಿಸಿದ್ದು, ಅರ್ಹ ಮತದಾರರು ಈ ಪ್ರಕ್ರಿಯೆಯ ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಚುನಾವಣಾಧಿಕಾರಿ ಆದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ತಿಳಿಸಿದ್ದಾರೆ.

ದಿನಾಂಕಗಳ ವಿವರ:

ಮತಗಟ್ಟೆಗಳ ತಾರ್ಕೀಕರಣ: ನವೆಂಬರ್ 23, 2026ರೊಳಗೆ ಪೂರ್ಣಗೊಳ್ಳಲಿದೆ.

ಸಂಯೋಜಿತ ಕರಡು ಮತದಾರರ ಪಟ್ಟಿ ಪ್ರಕಟಣೆ: ಡಿಸೆಂಬರ್ 01, 2026.

ಆಕ್ಷೇಪಣೆ ಹಾಗೂ ಹಕ್ಕುಗಳ ಸಲ್ಲಿಕೆ ಅವಧಿ: ಡಿಸೆಂಬರ್ 01 ರಿಂದ ಡಿಸೆಂಬರ್ 31 ರವರೆಗೆ. ಹಕ್ಕುಗಳು ಮತ್ತು ಆಕ್ಷೇಪಣೆಗಳ



ವಿಲೇವಾರಿ: ಜನವರಿ 14, 2027ರೊಳಗೆ. ಅಂತಿಮ ಮತದಾರರ ಪಟ್ಟಿ ಪ್ರಕಟಣೆ: ಜನವರಿ 20, 2027.

ಅರ್ಜಿಗಳ ಸಲ್ಲಿಕೆ ವಿವರ:

ಹೊಸ ಹೆಸರು ಸೇರ್ಪಡೆ: ಅರ್ಹತಾ ದಿನಾಂಕಗಳಾದ 01.01.2027, 01.04.2027, 01.07.2027 ಹಾಗೂ 01.10.2027ಕ್ಕೆ 18 ವರ್ಷ ಪೂರ್ಣಗೊಂಡ ಅಥವಾ ಪೂರ್ಣಗೊಳ್ಳುವ ಎಲ್ಲಾ ಅರ್ಹ ಹಾಗೂ ನಿರೀಕ್ಷಿತ ಮತದಾರರು ನಮೂನೆ-6ನ್ನು ತಮ್ಮ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಅಥವಾ ತಾಲೂಕು ಕಚೇರಿಯಲ್ಲಿ ಸಲ್ಲಿಸಬಹುದಾಗಿದೆ.

ತಿದ್ದುಪಡಿಗಳಿಗೆ: ಹೆಸರು, ವಿಳಾಸ, ಭಾವಚಿತ್ರ ಹಾಗೂ ಇನ್ನಿತರೆ ವಿವರಗಳ ತಿದ್ದುಪಡಿಗೆ ನಮೂನೆ-8 ಅರ್ಜಿ ಸಲ್ಲಿಸಬಹುದು.

ಹೆಸರು ತೆಗೆದುಹಾಕಲು: ಮರಣ ಹೊಂದಿದ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲು ಸಂಬಂಧಿಕರು ನಮೂನೆ-7ರ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಬಳ್ಳಾರಿ ಜಿಲ್ಲೆಯ ಎಲ್ಲಾ ಅರ್ಹ ಮತದಾರರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ, ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲ ಪಡಿಸಲು ಸಹಕರಿಸಬೇಕಾಗಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾರ್ಟ್ ಸರ್ಕ್ಯೂಟ್ ಶಂಕೆ: ಅಗ್ನಿ ಅವಘಡಕ್ಕೆ ಎರಡು ಆಟೋಮೊಬೈಲ್ ಗ್ಯಾರೇಜ್ ಭಸ್ಮ

ಕಲಬುರಗಿ, ನ. 18: ಆಕಸ್ಮಿಕವಾಗಿ ಬೆಂಕಿ ಹೊತ್ತಿಕೊಂಡ ಪರಿಣಾಮ ಎರಡು ಆಟೋಮೊಬೈಲ್ ಗ್ಯಾರೇಜುಗಳು ಸಂಪೂರ್ಣ ಸುಟ್ಟು ಭಸ್ಮವಾಗಿರುವ ಘಟನೆ ಜಿಲ್ಲೆಯ ಅಫಜಲಪುರ ಪಟ್ಟಣದಲ್ಲಿ ನಡೆದಿದೆ. ಪಟ್ಟಣದ ಜವಳಿ ಆಟೋಮೊಬೈಲ್ ಹಾಗೂ ಸ್ಟಾರ್ ಕಾರ್ ಗ್ಯಾರೇಜ್ನಲ್ಲಿ ಈ ಅಗ್ನಿ ಅವಘಡ ಸಂಭವಿಸಿದೆ. ಶಾರ್ಟ್ ಸರ್ಕ್ಯೂಟ್ನಿಂದ ಬೆಂಕಿ ಹೊತ್ತಿಕೊಂಡಿರಬಹುದು ಎಂದು ಶಂಕಿಸಲಾಗಿದೆ.

ಮಂಜೂರು ದಫೇದಾರ್ ಹಾಗೂ ರಫೀಕ್ ಜವಳಿ ಅವರಿಗೆ ಸೇರಿದ ಎರಡೂ ಗ್ಯಾರೇಜ್ಗಳು ಬೆಂಕಿಯ ಕೆನ್ನಾಲಿಗೆಗೆ ಸಿಲುಕಿ ಸಂಪೂರ್ಣ ಸುಟ್ಟು ಹೋಗಿವೆ. ಗ್ಯಾರೇಜ್ಗಳಲ್ಲಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ಆಟೋಮೊಬೈಲ್ ಬಿಡಿಭಾಗಗಳು, ಉಪಕರಣಗಳು ಹಾಗೂ ಇತರೆ ಸಾಮಗ್ರಿಗಳು ಬೆಂಕಿಗೆ ಆಹು

ವಿಜಯಪುರ: ಜಿಲ್ಲಾಮಟ್ಟದ ಕಲಾ ಪ್ರತಿಭೋತ್ಸವ

ಮಕ್ಕಳ ಸುಪ್ತ ಪ್ರತಿಭೆ ಗುರುತಿಸಿ: ಗಂಗಾಧರ ಸಂಬಣ್ಣಿ



ವಿಜಯಪುರ,ನ.18:ಮಕ್ಕಳಲ್ಲಿನ ಸೂಪ್ತ ಪ್ರತಿಭೆಯನ್ನು ಗುರುತಿಸಿ, ಪೋಷಿಸುವುದರೊಂದಿಗೆ ಅವರಿಗೆ ಸೂಕ್ತ ಪ್ರೋತ್ಸಾಹ ಹಾಗೂ ಅವಕಾಶಗಳನ್ನು ಕಲ್ಪಿಸಬೇಕು. ಮಕ್ಕಳು ಕಲೆಯಲ್ಲಿ ಅರಳಿ, ತಮ್ಮ ಪ್ರತಿಭೆಯ ಮೂಲಕ ಕಲಾಜಗತ್ತಿನಲ್ಲಿ ಗುರುತಿಸಿಕೊಳ್ಳುವ ಆಶಯದೊಂದಿಗೆ ಮುನ್ನಡೆಯಬೇಕು ಎಂದು ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಎಸ್. ಸಂಬಣ್ಣಿ ಕರೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ್ ಪೋತದಾರ ಮಾತನಾಡಿ, ವಿಜಯಪುರ ಜಿಲ್ಲೆ ಸಾಂಸ್ಕೃತಿಕ ವೈವಿಧ್ಯತೆಯಿಂದ ಕೂಡಿದ್ದು, ಸಾಹಿತ್ಯ, ಸಂಸ್ಕೃತಿ ಹಾಗೂ ಪರಂಪರೆಯ ಶ್ರೀಮಂತಿಕೆಯನ್ನು ಇಂದಿಗೂ ಜೀವಂತವಾಗಿರಿಸಿಕೊಂಡಿದೆ. ಇಂತಹ ಕಲಾಪ್ರತಿಭೋತ್ಸವಗಳು ಮಕ್ಕಳಲ್ಲಿರುವ ಕಲಾಸಕ್ತಿಯನ್ನು ಬೆಳೆಸುವುದರ ಜತೆಗೆ ಅವರ ಪ್ರತಿಭೆ ಅನಾವರಣಗೊಳಿಸಲು ಉತ್ತಮ ವೇದಿಕೆಯಾಗಿವೆ ಎಂದರು.

ಸ್ಪರ್ಧೆಗಳಲ್ಲಿ ಸೋಲು-ಗೆಲುವಿಗಿಂತ ಭಾಗವಹಿಸುವಿಕೆ ಮುಖ್ಯ. ವಿದ್ಯಾರ್ಥಿಗಳು ಯಾವುದೇ ಸ್ಪರ್ಧೆಯಿಂದ ಹಿಂದೆ ಸರಿಯದೆ ಆತ್ಮವಿಶ್ವಾಸದಿಂದ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು. ಪ್ರತಿಭಾವಂತರನ್ನು ಗುರುತಿಸಿ ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಪ್ರೋತ್ಸಾಹಿಸುವ ಕಾರ್ಯವನ್ನು ಇಲಾಖೆಗಳು ಮಾಡುತ್ತಿವೆ. ಜಿಲ್ಲೆಯಲ್ಲಿ ಸಾಕಷ್ಟು ಪ್ರತಿಭಾವಂತರಿದ್ದು, ವಿದ್ಯಾರ್ಥಿಗಳು ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಇದರಿಂದ ಪ್ರತಿಭೆಯನ್ನು ಅನಾವರಣಗೊಳಿಸುವುದರೊಂದಿಗೆ ವಲಯ ಹಾಗೂ ರಾಜ್ಯಮಟ್ಟದಲ್ಲಿಯೂ ಗುರುತಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಬರ ಪರಿಹಾರ ತಕ್ಷಣ ಅರಂಭಿಸದಿದ್ದರೆ, ಜನರೊಂದಿಗೆ ಸರ್ಕಾರದ ವಿರುದ್ಧ ಹೋರಾಟ: ಶಾಸಕ ಮತ್ತಿಮಡು ಎಚ್ಚರಿಕೆ



ಕಲಬುರಗಿ, ನ. 18: ಮುಂಗಾರು ಮತ್ತು ಹಿಂಗಾರು ಮಳೆ ಬಾರದೇ ಎರಡೂ ಬೆಳೆಗಳು ಸಂಪೂರ್ಣ ವಿಫಲವಾಗಿವೆ. ಹಲವು ಬಾರಿ ಸಮೀಕ್ಷೆಯಿಂದ ದೃಢಪಟ್ಟಿದೆ. ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿಗೂ ಗತಿಯಿಲದೇ ಪರಿಸ್ಥಿತಿ ಗಂಭೀರವಾಗಿದೆ. ಕೂಡಲೇ ರಾಜ್ಯ ಸರ್ಕಾರವು ಬರ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳದಿದ್ದರೆ ಕ್ಷೇತ್ರದ ಜನರೊಂದಿಗೆ ಸರ್ಕಾರದ ವಿರುದ್ಧ ಉಗ್ರವಾದ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಹಾಗೂ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ್ ಮತ್ತಿಮೂಡ್ ಅವರು ಹೇಳಿದರು.

ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಗಳಾಗಿ ಪ್ರಥಮ ಬಾರಿಗೆ ನಗರಕ್ಕೆ ಆಗಮಿಸಿ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಕೈಗೊಂಡ ವಿಭಾಗದ ಅಧಿಕಾರಿಗಳ ಸಭೆಯಲ್ಲಿ ನಾನೇ ಈ ಕುರಿತು ಮಾತನಾಡಿ, ಬರ ಪರಿಹಾರಕ್ಕಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಂದು ಕೋಟಿ ರೂ.ಗಳ ಅನುದಾನ ಬಿಡುಗಡೆಗೆ ಒತ್ತಾಯಿಸಿದ್ದೆ. ಈಗಲೂ ಸಹ ಆ ಅನುದಾನ ಬಿಡುಗಡೆಯಾಗಿಲ್ಲ. ಭೀಕರ ಬರದಿಂದ ತತ್ತಪರಿಸುತ್ತಿರುವ ಈ ಸಂದರ್ಭದಲ್ಲಿ ಕುಡಿಯುವ ನೀರಿಗೂ ಸಹ ಹಾಹಾಕಾರ ಉಂಟಾಗಿದೆ. ಇದೇ ರೀತಿ ನಿರ್ಲಕ್ಷ್ಯ ಮುಂದುವರೆದರೆ ಜನಾಕ್ರೋಶಕ್ಕೆ ರಾಜ್ಯ ಸರ್ಕಾರವು ಒಳಗಾಗುತ್ತದೆ ಎಂದು ಎಚ್ಚರಿಸಿದರು. ರಾಜ್ಯ ಸರ್ಕಾರವು ಬರ ಪರಿಹಾರಕ್ಕಾಗಿ ಕೇಂದ್ರದ ಮೇಲೆ ದೂರುವುದನ್ನು ಕೈಬಿಡಬೇಕು. ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದಾಗ ರಾಜ್ಯ ಸರ್ಕಾರದ ವಿಶೇಷ ಅನುದಾನದ ಮೂಲಕವೇ ಬರ ಪರಿಹಾರ ಕೈಗೊಳ್ಳಲಾಗಿತ್ತು. ಯಡಿಯೂರಪ್ಪ ಅವರ ಮಾದರಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೂ ಸಹ ಬರ ಪರಿಹಾರ ಕಾಮಗಾರಿಗಳನ್ನು ತ್ವರಿತವಾಗಿ ಆರಂಭಿಸಬೇಕು ಎಂದು ಅವರು ಒತ್ತಾಯಿಸಿದರು. ಅನುದಾನದ ಕೊರತೆಯಿಂದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಆಗುತ್ತಿಲ್ಲ. ಇಂತಹ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳನ್ನು ಮಾಡಿದರೆ ನಾವು ಮತದಾರರ ಬಳಿಗೆ ಹೋಗುವುದು ಸಹ ಕಷ್ಟವಾಗುತ್ತದೆ. ಆದ್ದ ರಿಂದ ರಾಜ್ಯ ಸರ್ಕಾರವು ಕೂಡಲೇ ಬರ ಪರಿಹಾರಕ್ಕಾಗಿ ವಿಧಾನಸಭಾ ಕ್ಷೇತ್ರಕ್ಕೆ ಒಂದು ಕೋಟಿ ರೂ. ಗಳನ್ನು ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದರು.

ಕುಡಿಯುವ ನೀರಿಗಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನವನ್ನು ಬಳಸಲು ಸಾಧ್ಯವಿಲ್ಲ. ಮಂಡಳಿಯಿಂದ ನಿಗದಿತ ಯೋಜನೆಗಳಿಗೆ ಮಾತ್ರ ಅನುದಾನ ಇದೆ ಎಂದು ಹೇಳಿದ ಅವರು, ಕೂಡಲೇ ರಾಜ್ಯ ಸರ್ಕಾರವು ವಿಶೇಷ ಅನುದನವನ್ನು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಬಿಡುಗಡೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಅಧಿಕಾರಕ್ಕೆ ಬಂದು, ಈಗ ಹಾಲು, ವಿದ್ಯುತ್, ಬಸ್ ದರಗಳನ್ನು ಹೆಚ್ಚಿಸುತ್ತಿದೆ. ಇದರಿಂದ ಜನಸಾಮಾನ್ಯರಿಗೆ ಹೊರೆಯಾಗಿದೆ. ಇತ್ತ ಬರ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳದೇ ಇರುವುದು ಜನಾಕ್ರೋಶಕ್ಕೆ ಕಾರಣವಾಗಿದೆ. ನಾವೂ ಸಹ ವಿರೋಧ ಪಕ್ಷವಾಗಿ ಜನರೊಂದಿಗೆ ಸೇರಿ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಸ್ಟಿಂಗ್ ಆಪರೇಷನ್ ವಿವಾದದಲ್ಲಿ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವ-ರಿಗೆ ಹಳ್ಳಿ ಗುಗ್ಗು ಎಂದು ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಟೀಕಿಸಿರುವ ಕುರಿತು ಸುದ್ದಿಗಾರರು ಪ್ರಶ್ನಿಸಿದಾಗ ಕುಮಾರಸ್ವಾಮಿ ಅವರನ್ನೇ ಆ ಕುರಿತು ಪ್ರತಿಕ್ರಿಯೆ ಕೇಳಿ. ಎಚ್.ಡಿ. ಕುಮಾರಸ್ವಾಮಿ ಅವರು ಎರಡು ಬಾರಿ ಮುಖ್ಯಮಂತ್ರಿಗಳಾಗಿದ್ದಾರೆ. ಕೇಂದ್ರದಲ್ಲಿ ಸಚಿವರಾಗಿದ್ದಾರೆ. ಅವರ ಕುರಿತು ಲಘು ಹೇಳಿಕೆಯನ್ನು ನೀಡುವುದು ಸರಿಯಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರವು ಎಲ್ಲ ಕ್ಷೇತ್ರಗಳಲ್ಲಿಯೂ ಸಹ ಸಂಪೂರ್ಣ ವಿಫಲವಾಗಿದೆ. ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ಕೇಂದ್ರದ ವಿರುದ್ಧ ಹಾಗೂ ಬಿಜೆಪಿ ಮತ್ತು ಎನ್‌ಡಿಎ ನಾಯಕರ ವಿರುದ್ಧ ಅವಹೇಳನ ಮಾಡುವುದರಲ್ಲಿ ತೊಡಗಿದೆ ಎಂದು ಟೀಕಿಸಿದ ಅವರು, 2028ಕ್ಕೆ ರಾಜ್ಯದಲ್ಲಿ ನಮ್ಮದೇ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಹೈಕೋರ್ಟ್ ಆದೇಶ ಪಾಲನೆ: ಇಲಾಖೆಗಳಿಗೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೂಚನೆ

ಬೆಂಗಳೂರು, ನ.18: ವಿ ಹಕ್ಕುಗಳ ಕಾಯ್ದೆ 2016 ಹಾಗೂ ಅದರ ನಿಯಮಗಳ ಪರಿಣಾಮಕಾರಿ ಅನುಷ್ಠಾನ ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯವು ನೀಡಿರುವ ಪ್ರವೇಶ ಯೋಗ್ಯತೆ ಕುರಿತ ಕಾಲಮಿತಿಯ ನಿರ್ದೇಶನಗಳನ್ನು ಪಾಲಿಸುವ ಸಂಬಂಧ ರಾಜ್ಯ ಸರ್ಕಾರವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದ್ದಾರೆ.

ಎಲ್ಲಾ ಸರ್ಕಾರಿ ಇಲಾಖೆಗಳು ನೇಮಕಾತಿ ಅಧಿಸೂಚನೆ ಹೊರಡಿಸುವ ಮುನ್ನ ವಿಕಲಚೇತನ ಅಭ್ಯರ್ಥಿಗಳಿಗೆ ಶೇ.5ರಷ್ಟು ಹುದ್ದೆಗಳನ್ನು ಮೀಸಲಿಟ್ಟಿ ರುವ ಕುರಿತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ದೃಢೀಕರಿಸಿದ ಮಾಹಿತಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕು.

ಸಾರ್ವ ಜನಿಕ ಮೂಲಸೌಕರ್ಯ ಹಾಗೂ GIS ದಾಖಲೀಕರಣ: ನಗರ ಸ್ಥಳೀಯ ಸಂಸ್ಥೆಗಳ ರಸ್ತೆಗಳು, ಪಾದಚಾರಿ ಮಾರ್ಗಗಳು, ಉದ್ಯಾನವನ ಗಳು, ಮಾರುಕಟ್ಟೆಗಳು ಮತ್ತು ಸಾರ್ವಜನಿಕ ಶೌಚಾಲಯಗಳನ್ನು ವಿಕಲಚೇತನ ಸ್ನೇಹಿಯಾಗಿ ವಿನ್ಯಾಸ ಗೊಳಿಸಿರುವ ಬಗ್ಗೆ ಸಂಬಂಧಿತ ಇಂಜಿನಿಯರಿಂಗ್ ವಿಭಾಗಗಳು ದೃಢೀಕರಣ ನೀಡಬೇಕು. ಅಲ್ಲದೆ, ರಾಜ್ಯಾದ್ಯಂತ ಲಭ್ಯವಿರುವ ಕಟ್ಟಡಗಳ ಏಕೀಕೃತ ದಾಖಲೆಗಾಗಿ ಈ ಮಾಹಿತಿಯನ್ನು ಕರ್ನಾಟಕ ರಾಜ್ಯ ದೂರಸಂವೇದಿ ಅನ್ವಯಿಕ ಕೇಂದ್ರ ನಿರ್ವಹಿಸುತ್ತಿರುವ ಉಳಿಕ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಸೂಚಿಸಿದರು.

ಕಟ್ಟಡ ನಿರ್ಮಾಣ ನಿಯಮಗಳ ಪಾಲನೆ: ವಸತಿ ಯೋಜನೆಗಳು, ವಸತಿನಿಲಯಗಳು ಹಾಗೂ ಸಾರ್ವಜನಿಕ ಕಟ್ಟಡಗಳಲ್ಲಿ ವಿಕಲ



ಚೇತನರಿಗೆ ಪೂರಕ ವ್ಯವಸ್ಥೆಗಳನ್ನು ಅಳವಡಿಸುವುದು ಕಡ್ಡಾಯವಾಗಿದೆ. ನಿಗದಿತ ಮಾನದಂಡಗಳನ್ನು ಪಾಲಿಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪತ್ರ ಪೂರ್ಣಗೊಳಿಸುವಿಕೆ ಪ್ರಮಾಣಪತ್ರ ನೀಡದಿರಲು ಸೂಚಿಸಲಾಯಿತು.

ಸಾರಿಗೆ ಮತ್ತು ಸಂಚಾರ ವ್ಯವಸ್ಥೆ: ಸಾರ್ವಜನಿಕ ಸಾರಿಗೆ ಬಸ್ಸುಗಳು ಮತ್ತು ನಿಲ್ದಾಣಗಳಲ್ಲಿ ವಿಕಲಚೇತನರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದರ ಜೊತೆಗೆ ಸಿಬ್ಬಂದಿಗೆ ಸಂವೇದನಾಶೀಲತಾ ಶಿಬಿರಗಳನ್ನು ಆಯೋಜಿಸಬೇಕು. ಅಲ್ಲದೆ, ವಿಕಲಚೇತನರು ಸುಲಭವಾಗಿ ರಸ್ತೆ ದಾಟಲು ಅನುಕೂಲವಾಗುವಂತೆ ಟ್ರಾಫಿಕ್ ಸಿಗ್ನಲ್‌ಗಳ ಸಾಫ್ಟ್‌ವೇರ್‌ನಲ್ಲಿ ಅಗತ್ಯ ಬದಲಾವಣೆ ಮಾಡಲು ಪೊಲೀಸ್ ಇಲಾಖೆಗೆ ಸೂಚಿಸಲಾಯಿತು.


ಕ್ರೀಡೆ ಮತ್ತು ಶಿಕ್ಷಣಕ್ಕೆ ಉತ್ತೇಜನ: ಶಾಲಾ ಹಂತದಿಂದಲೇ ಪ್ಯಾರಾ ಕ್ರೀಡೆಗಳಿಗೆ ಉತ್ತೇಜನ ನೀಡಲು ಅರ್ಹ ಮಕ್ಕಳಿಗೆ ಶ್ರವಣ ಸಾಧನಗಳನ್ನು ಒದಗಿಸಿ ಅವರ ಕ್ರೀಡಾ ಪ್ರತಿಭೆಯನ್ನು ಗುರುತಿಸಬೇಕು. ಶಾಲಾ ಶಿಕ್ಷಣ ಇಲಾಖೆಯಲ್ಲಿ ಸಂಗೀತ ಶಿಕ್ಷಕರ ಹುದ್ದೆಗಳು ಇಲ್ಲದಿರುವುದರಿಂದ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಕ್ರಮವಹಿಸಲಾ ಗುವುದು. ನೋಡಲ್ ಅಧಿಕಾರಿಗಳ ನೇಮಕ ಮತ್ತು ನಿರಂತರ ಪರಿಶೀಲನೆ: ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಪ್ರವೇಶ ಯೋಗ್ಯತೆ ನೋಡಲ್ ಅಧಿಕಾರಿಗಳನ್ನು ನೇಮಿಸಿ, ಅವರ ವಿವರಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸ ಬೇಕು. ಸಾರ್ವಜನಿಕ ಸ್ಥಳಗಳಲ್ಲಿನ ಸೌಲಭ್ಯಗಳ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ನಿರಂತರ ಆಡಿಟ್ ನಡೆಸಿ ಸುಧಾರಣಾ ಕ್ರಮ ಕೈಗೊಳ್ಳಲಿದೆ. ಹಾಗೂ ವಿಕಲ ಚೇತನರಿಗೆ ಸಂಬಂಧಿಸಿದ ನೀತಿ, ನಿಯಮಗಳನ್ನೊಳಗೊಂಡ ಕೈಪಿಡಿಯನ್ನು ಸಿದ್ಧಪಡಿಸಲು ಸೂಚಿಸಲಾಯಿತು.

ವಾರದೊಳಗೆ ಅನುಪಾಲನಾ ವರದಿಗೆ ಸೂಚನೆ: ಉಚ್ಚನ್ಯಾಯಾಲಯದ ನಿರ್ದೇಶನಗಳ ಅನುಪಾಲನೆ ಕುರಿತು ಪ್ರತಿ ಕೆಡಿಪಿಸಭೆಗಳಲ್ಲಿ ವಿಷಯಸೂಚಿಯನ್ನು ಕಡ್ಡಾಯವಾಗಿ ಸೇರಿಸಬೇಕು. ಎಲ್ಲಾ ಇಲಾಖೆಗಳು ನಿಗದಿತ ಕಾಲಮಿತಿಯೊಳಗೆ ಕೈಗೊಂಡ ಕ್ರಮಗಳ ಕುರಿತು 'ಅನುಪಾಲನಾ ವರದಿ'ಯನ್ನು ಒಂದು ವಾರದೊಳಗಾಗಿ ಸಲ್ಲಿಸುವಂತೆ ಸಭೆಯಲ್ಲಿ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಯಿತು.



ಸಿಎಂ ಡಿ ಕೆ ಶಿವಕುಮಾರ್ ಅವರು ಕೆ.ಆರ್. ಪುರಂನ ಗೆದ್ದಲಹಳ್ಳಿ ರೈಲ್ವೆ ಹಳಿಗೆ ಅಡ್ಡಲಾಗಿ ನಿರ್ಮಿಸಿರುವ ಮಳೆನೀರು ಕಾಲುವೆಯನ್ನು ಬುಧವಾರ ಉದ್ಘಾಟಿಸಿ ಮಾತನಾಡಿದರು. ಸಚಿವರಾದ ಕೃಷ್ಣ ಬೈರೇಗೌಡ, ಶಾಸಕ ಬೈರತಿ ಬಸವರಾಜ್, ಮಾಜಿ ಕಾರ್ಪೊರೇಟರ್ ವಜೀದ್ ಮತ್ತಿತರರು ಇದ್ದರು.

ಪರಿವರ್ತನೆಯ ಹರಿಕಾರ ಬಿರ್ಸಾ ಮುಂಡಾ: ಸುರೇಖಾ ಬಣ್ಣನೆ



ಬೀದರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಕ್ರಾಂತಿವೀರ ಬಿರ್ಸಾ ಮುಂಡಾ ಅವರ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ ಎಕೆ ಅವರು, ಮುಂಡಾ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಡಿದರು.

ಬೀದರ್, ನ. 18: ಕ್ರಾಂತಿವೀರ ಬಿರ್ಸಾ ಮುಂಡಾ ಅವರು ಕೇವಲ ಸ್ವಾತಂತ್ರ್ಯ ಹೋರಾಟಗಾರರಾಗಿರಲಿಲ್ಲ. ಸಾಮಾಜಿಕ ಪರಿವರ್ತನೆಯ ಹರಿಕಾರ ರಾಗಿಯೂ ಗುರುತಿಸಿಕೊಂಡಿದ್ದರು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಎ.ಕೆ. ಹೇಳಿದರು.

ಕ್ರಾಂತಿವೀರ ಬಿರ್ಸಾ ಮುಂಡಾ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪನಮನ ಸಲ್ಲಿಸಿದ ಬಳಿಕ , ಬಿರ್ಸಾ ಮುಂಡಾ ಅವರು ಮೂಢನಂಬಿಕೆ, ಸಾಮಾಜಿಕ ಅಸಮಾನತೆ ಹಾಗೂ ಶೋಷಣೆ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸಿದ್ದರು. ಶಿಕ್ಷಣ, ಸಂಘಟನೆ ಮತ್ತು ಸ್ವಾಭಿಮಾನದ ಮೂಲಕ ಎಲ್ಲ ಸಮುದಾಯದ ಜನರು ಬದುಕು ಕಟ್ಟಿಕೊಳ್ಳಬೇಕು ಎಂಬ ಆಶಯ ಹೊಂದಿದ್ದರು.

ಅಲ್ಪಾವಧಿಯ ಬದುಕಿನಲ್ಲಿಯೇ ಅಪಾರ ಹೋರಾಟದ ಚೈತನ್ಯವನ್ನು ಸಮಾಜದಲ್ಲಿ ಮೂಡಿಸಿದ್ದರು ಎಂದರು.

ಆದಿವಾಸಿ ಸಮುದಾಯದ ಮೇಲೆ ಬ್ರಿಟಿಷರು ನಡೆಸುತ್ತಿದ್ದ ಶೋಷಣೆ, ಭೂಮಿ ಕಬಳಿಕೆ, ಸಾಮಾಜಿಕ ಅನ್ಯಾಯ ಮತ್ತು ದೌರ್ಜನ್ಯದ ವಿರುದ್ಧ ಧ್ವನಿ ಎತ್ತಿದ ಅವರು, ಜನರಲ್ಲಿ ಹೋರಾಟದ ಕಿಚ್ಚು ಹೊತ್ತಿಸಿದ್ದರು. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಆದಿವಾಸಿ ವೀರರ ತ್ಯಾಗ, ಬಲಿದಾನ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಸ್ಮರಿಸಿ ಗೌರವಿಸುವ ದಿನ ಇದಾಗಿದೆ ಎಂದು ಹೇಳಿದರು.

ರಾಜಗೊಂಡ ಕಾಲೊನಿಯ ಜೈ ಸೇವಾ ಆಶ್ರಮದ ರತನ್ ಮಹಾರಾಜ್ ಮಾತನಾಡಿ, ಬಿರ್ಸಾ ಮುಂಡಾ ಅವರು ಕೇವಲ 25 ವರ್ಷಗಳ ಅಲ್ಪಾವಧಿ ಬದುಕಿನಲ್ಲಿಯೇ ಸಮಾಜದ ಎಲ್ಲ ಸಮುದಾಯಗಳ ಜನರ ಹಿತಕ್ಕಾಗಿ ಮಹತ್ವದ ಹೋರಾಟ ನಡೆಸಿದ ವೀರರಾಗಿದ್ದರು. ಅವರ ಹೋರಾಟ ಮತ್ತು ಆದರ್ಶ ಗಳು ಇಂದಿಗೂ ಪ್ರಸ್ತುತವಾಗಿದ್ದು, ಯುವ ಪೀಳಿಗೆ ಅವುಗಳನ್ನು ಜೀವನದಲ್ಲಿ ಅಳವಡಿಸಿ ಕೊಂಡು ಮುನ್ನಡೆಯಬೇಕು ಎಂದರು.

ಬೃಹತ್ ಆರ್ಥಿಕ ಸೇರ್ಪಡೆ ಸ್ಯಾಚುರೇಶನ್ ಅಭಿಯಾನ ಯಶಸ್ವಿ



ಕಾರವಾರ, ನ.18– ಕೆನರಾ ಬ್ಯಾಂಕ್ ಕಡವಾಡ ಮತ್ತು ಕಡವಾಡ ಗ್ರಾಮ ಪಂಚಯಿತಿ ವತಿಯಿಂದ ಆಯೋಜಿಸಲಾದ ಬೃಹತ್ ಆರ್ಥಿಕ ಸೇರ್ಪಡೆ ಸ್ಯಾಚುರೇಶನ್ ಅಭಿಯಾನ ಯಶಸ್ವಿಯಾಗಿ ನಡೆಯಿತು. ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ದಿಲೀಶ್ ಶಶಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯಲ್ಲಿರುವ ಎಲ್ಲಾ ಬ್ಯಾಂಕ್‌ಗಳು ಸರ್ಕಾರಿ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಮಹತ್ತರ ಪಾತ್ರವನ್ನು ವಹಿಸುತ್ತಿವೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಭಾರತೀಯ ರಿಸರ್ವ್ ಬ್ಯಾಂಕ್‌ನ ಪ್ರಾದೇಶಿಕ ನಿರ್ದೇಶಕಿ ಕಾಯಾ ತ್ರಿಪಾಠಿ, ಕೆನರಾ ಬ್ಯಾಂಕ್ ಮಣಿಪಾಲ ವೃತ್ತದ ಉಪ ಮಹಾಪ್ರಬಂಧಕಿ ಎಂ. ಮಾಧವಿ ಅವರು ಪಿಎಂಜೆಡಿವೈ, ಪಿಎಂಎಸ್ಬಿವೈ, ಪಿಎಂಜೆಜೆಬಿವೈ, ಎಪಿವೈ ಯೋಜನೆಗಳ ಬಗ್ಗೆ ಮಾಹಿತಿಯನ್ನು ನೀಡಿದರು.

ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆಯಡಿಯಲ್ಲಿ ರೈಲ್ವೆ ಅಪಘಾತದಲ್ಲಿ ಶಾಶ್ವತ ಅಂಗವಿಕಲತೆ ಹೊಂದಿದ ಮತ್ತು ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆಯಡಿಯಲ್ಲಿ ಸಹಜ ಮರಣ ಹೊಂದಿದವರಿಗೆ ವಿಮಾ ಪರಿಹಾರದ ಚೆಕ್ ಅನ್ನು ವಿತರಿಸಲಾಯಿತು.

ಭಾರತೀ

ಟ್ರಂಪ್‌ಗೆ ಕ್ಸಿ ಅದ್ಧೂರಿ ಸ್ವಾಗತ: ವರ್ಷದ ಬಳಿಕ ಪುಟಿನ್-ಟ್ರಂಪ್ ಮೊದಲ ಭೇಟಿ

ಕ್ಸಿ ಸಮ್ಮುಖದಲ್ಲಿ ತ್ರಿಪಕ್ಷೀಯ ಮಾತುಕತೆಗೆ ವೇದಿಕೆ ಸಜ್ಜು

ಬೀಜಿಂಗ್, ನ.18: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ ಚೀನಾದ ಶೆನ್‌ಜೆನ್‌ಗೆ ಆಗಮಿಸಿದ್ದು, ಗುರುವಾರ ನಡೆಯಲಿರುವ ಐತಿಹಾಸಿಕ ತ್ರಿಪಕ್ಷೀಯ ಸಭೆಯತ್ತ ಜಗತ್ತಿನ ಗಮನ ಕೇಂದ್ರೀಕೃತವಾಗಿದೆ. ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಮತ್ತು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೊಂದಿಗೆ ಟ್ರಂಪ್ ಮಾತುಕತೆ ನಡೆಸಲಿದ್ದಾರೆ. ಏಷ್ಯಾ-ಪೆಸಿಫಿಕ್ ಆರ್ಥಿಕ ಸಹಕಾರ (ಅಪೆಕ್) ಶೃಂಗಸಭೆಯ ನೇಪಥ್ಯದಲ್ಲಿ ಈ ಸಭೆ ನಡೆಯಲಿದೆ.

ವಿಮಾನ ನಿಲ್ದಾಣದಲ್ಲಿ ಟ್ರಂಪ್ ಅವರನ್ನು ಸ್ವತಃ ಬರಮಾಡಿಕೊಂಡ ಕ್ಸಿ ಜಿನ್‌ಪಿಂಗ್, ಕೆಂಪುಹಾಸಿನ ಸ್ವಾಗತ ನೀಡಿದರು. ಚೀನಾದ ದೀರ್ಘಕಾಲದ ರಾಜತಾಂತ್ರಿಕ ಶಿಷ್ಟಾಚಾರವನ್ನು ಬದಿಗಿಟ್ಟು ನೀಡಿದ ಈ ವಿಶೇಷ ಸ್ವಾಗತ ಗಮನ ಸೆಳೆಯಿತು.

ಬುಧವಾರ ಮತ್ತು ಗುರುವಾರ ಕ್ಸಿ ಜಿನ್‌ಪಿಂಗ್ ಆತಿಥ್ಯದಲ್ಲಿ ಶೆನ್‌ಜೆನ್‌ನಲ್ಲಿ ಅಪೆಕ್ ಶೃಂಗಸಭೆ ನಡೆಯುತ್ತಿದೆ. ಪ್ರಮುಖ ಆರ್ಥಿಕ ಮತ್ತು ರಾಜತಾಂತ್ರಿಕ ವಿಚಾರಗಳು ಸಭೆಯಲ್ಲಿ ಚರ್ಚೆಯಾಗಲಿವೆ. ಟ್ರಂಪ್, ಕ್ಸಿ ಮತ್ತು ಪುಟಿನ್ ನಡುವಿನ ತ್ರಿಪಕ್ಷೀಯ ಮಾತುಕತೆ ಶೃಂಗಸಭೆಯ ಪ್ರಮುಖ ಆಕರ್ಷಣೆಯಾಗಿದ್ದು, ಜಾಗತಿಕ ನಾಯಕರು ಈ ಬೆಳವಣಿಗೆಯನ್ನು ಕುತೂಹಲದಿಂದ ಗಮನಿಸುತ್ತಿದ್ದಾರೆ.

ಇದಕ್ಕೂ ಮುನ್ನ ಮಂಗಳವಾರ ಫಿಲಿಪ್ಪೀನ್ಸ್‌ನಲ್ಲಿ ನಡೆದ ಆಸಿಯಾನ್ ಶೃಂಗಸಭೆಯಲ್ಲಿ ಭಾರತದ ಪ್ರಧಾನಿ ನರೇಂದ್ರ ಮೋದಿ, ಟ್ರಂಪ್ ಹಾಗೂ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಪಾಲ್ಗೊಂಡಿದ್ದರು. ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳ ನಡುವೆಯೇ ಇಂಧನ ಭದ್ರತೆ ಮತ್ತು ಡಿಜಿಟಲ್ ಆರ್ಥಿಕತೆಯಲ್ಲಿ ಸಹಕಾರ ವೃದ್ಧಿಸುವ ಕುರಿತು ನಾಯಕರು ಚರ್ಚಿಸಿದ್ದರು.

ಆಸಿಯಾನ್, ಕ್ವಾಡ್ ಶೃಂಗಸಭೆಯಲ್ಲಿ ಮೋದಿ ಹವಾ:

23ನೇ ಆಸಿಯಾನ್-ಭಾರತ ಶೃಂಗಸಭೆಯಲ್ಲಿ ಪಾಲ್ಗೊಂಡ ಪ್ರಧಾನಿ ನರೇಂದ್ರ ಮೋದಿ, ಕೃತಕ ಬುದ್ಧಿಮತ್ತೆ (ಎಐ) ಬಳಸಿ ವಿಪತ್ತು ಅಪಾಯದ ಮೌಲ್ಯಮಾಪನ, ತುರ್ತು ಪ್ರತಿಕ್ರಿಯೆ ಸಮನ್ವಯ, ಸಾಗರ ಸಹಕಾರ, ವೈಜ್ಞಾನಿಕ ಸಂಶೋಧನೆ ಹಾಗೂ ಪ್ರಾದೇಶಿಕ ಸಾಮರ್ಥ್ಯ ವೃದ್ಧಿಗೆ ಒತ್ತು ನೀಡಿದರು.



ಪರಮಾಣು ಇಂಧನ ಕ್ಷೇತ್ರದಲ್ಲಿ ತಾಂತ್ರಿಕ ವಿನಿಮಯಕ್ಕಾಗಿ ಭಾರತ-ಆಸಿಯಾನ್ ಉಪಕ್ರಮ ಹಾಗೂ ಬಾಹ್ಯಾಕಾಶ ಹ್ಯಾಕಥಾನ್ ಆರಂಭಿಸುವುದಾಗಿಯೂ ಘೋಷಿಸಿದರು.

ಇದೇ ವೇಳೆ ಅಮೆರಿಕ ಅಧ್ಯಕ್ಷ ಟ್ರಂಪ್, ಜಪಾನ್ ಪ್ರಧಾನಿ ಸನೇ ತಕೈಚಿ ಮತ್ತು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ ಕ್ವಾಡ್ ನಾಯಕರ ಶೃಂಗಸಭೆಯಲ್ಲೂ ಮೋದಿ ಭಾಗವಹಿಸಿದ್ದರು. ಸಾಗರ ಕಣ್ಗಾವಲು, ಸಮುದ್ರದಡಿ ಕೇಬಲ್ ಸಂಪರ್ಕ ಜಾಲ, ಎಐ ವೇಗವರ್ಧನೆ ಮತ್ತು ಸೈಬರ್ ಭದ್ರತಾ ಕಾರ್ಯಾಚರಣೆ ಸೇರಿದಂತೆ ಹಲವು ಉಪಕ್ರಮಗಳನ್ನು ನಾಯಕರು ಪ್ರಕಟಿಸಿದರು. ವ್ಯಾಪಾರ ಸಂಬಂಧಗಳನ್ನು ಬಲಪಡಿಸುವ ಉದ್ದೇಶದಿಂದ ಎಲ್ಲ ರಾಷ್ಟ್ರಗಳ ಉದ್ಯಮಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ನೀತಿತಜ್ಞರನ್ನು ಒಂದೇ ವೇದಿಕೆಗೆ ತರುವ 'ಕ್ವಾಡ್ ಉದ್ಯಮ ನಾಯಕರ ವೇದಿಕೆ' ಸ್ಥಾಪಿಸುವುದಾಗಿಯೂ ಘೋಷಿಸಲಾಯಿತು.

ಅಗ್ರ ಶೃಂಗಸಭೆಯತ್ತ ವಿಶ್ವದ ಚಿತ್ತ:

ಶೆನ್‌ಜೆನ್‌ನಲ್ಲಿ ನಡೆಯುತ್ತಿರುವ ಅಪೆಕ್ ಶೃಂಗಸಭೆಯಲ್ಲಿ ಅಮೆರಿಕ-ಇರಾನ್ ಸಂಘರ್ಷದ ಜಾಗತಿಕ ಆರ್ಥಿಕ ಪರಿಣಾಮಗಳು ಹಾಗೂ ದಕ್ಷಿಣ ಚೀನಾ ಸಮುದ್ರದಲ್ಲಿನ ಪ್ರಾದೇಶಿಕ ಹಕ್ಕುಗಳ ವಿವಾದ ಪ್ರಮುಖ ಚರ್ಚೆಯ ವಿಷಯಗಳಾಗುವ ನಿರೀಕ್ಷೆಯಿದೆ.

ವಿಶೇಷವಾಗಿ ಉಕ್ರೇನ್ ಯುದ್ಧವು ಟ್ರಂಪ್, ಪುಟಿನ್ ಮತ್ತು ಕ್ಸಿ ನಡುವಿನ ತ್ರಿಪಕ್ಷೀಯ ಮಾತುಕತೆಯಲ್ಲಿ ಪ್ರಮುಖವಾಗಿ ಪ್ರಸ್ತಾಪವಾಗುವ ಸಾಧ್ಯತೆಯಿದೆ.

ಪರಮಾಣು ನಿಶ್ಶಸ್ತ್ರೀಕರಣ, ಇರಾನ್-ಉಕ್ರೇನ್ ಸಂಘರ್ಷ ಚರ್ಚೆ

ಗುರುವಾರ ದಕ್ಷಿಣ ಚೀನಾದ ಶೆನ್‌ಜೆನ್‌ನಲ್ಲಿ ನಡೆಯಲಿರುವ ತ್ರಿಪಕ್ಷೀಯ ಸಭೆಯಲ್ಲಿ ಜಾಗತಿಕ ಶಾಂತಿ ಮತ್ತು ಪ್ರಮುಖ ಶಕ್ತಿಶಾಲಿ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಸ್ಥಿರತೆ ಕಾಪಾಡುವ ಕುರಿತು ಸಮಗ್ರ ಚರ್ಚೆ ನಡೆಯಲಿದೆ ಎಂದು ಚೀನಾ ತಿಳಿಸಿದೆ.

ಸಭೆಯಲ್ಲಿ ಪರಮಾಣು ನಿಶ್ಶಸ್ತ್ರೀಕರಣ, ಇರಾನ್ ಮತ್ತು ಉಕ್ರೇನ್ ಸಂಘರ್ಷಗಳ ಕುರಿತು ಚರ್ಚಿಸುವುದಾಗಿ ಟ್ರಂಪ್ ಹೇಳಿದ್ದಾರೆ. ಅಮೆರಿಕ-ಚೀನಾ ಸಂಬಂಧಗಳೂ ಈ ಸಭೆಯಲ್ಲಿ ಪ್ರಮುಖವಾಗಿವೆ. ಉಭಯ ರಾಷ್ಟ್ರಗಳು ವಿಸ್ತೃತ ವ್ಯಾಪಾರ ಕದನ ವಿರಾಮಕ್ಕೆ ಸಂಬಂಧಿಸಿದ ಬದ್ಧತೆಗಳನ್ನು ಈಡೇರಿಸುವಲ್ಲಿ ಹಿಂದೆ ಬಿದ್ದಿವೆ. ಅಪರೂಪದ ಭೂಧಾತುಗಳ ಪೂರೈಕೆ, ಕೃತಕ ಬುದ್ಧಿಮತ್ತೆ ಹಾಗೂ ಸುಂಕ ನೀತಿಗಳೂ ಮಾತುಕತೆಯ ಕಾರ್ಯಸೂಚಿಯಲ್ಲಿರುವ ನಿರೀಕ್ಷೆಯಿದೆ.

ಅಮೆರಿಕ-ಇರಾನ್ ನಡುವೆ ಪ್ರತೀಕಾರದ ದಾಳಿ ತೀವ್ರ ಗಲ್ಫ್ ರಾಷ್ಟ್ರಗಳು, ತೈಲ ಟ್ಯಾಂಕರ್‌ಗಳು ಗುರಿ




ವಾಷಿಂಗ್ಟನ್, ನ.18: ಹಾರ್ಮುಜ್ ಜಲಸಂಧಿಯಲ್ಲಿರುವ ಇರಾನ್ನ ಕ್ವೆಶ್ಮ್ ದ್ವೀಪದ ಮೇಲೆ ಅಮೆರಿಕ ದಾಳಿ ನಡೆಸಿದ ನಂತರ, ಇರಾನ್ ಉಡಾಯಿಸಿದ ಶಸ್ತ್ರಾಸ್ತ್ರಗಳನ್ನು ತಡೆಹಿಡಿದಿರುವುದಾಗಿ ಬಹ್ರೇನ್ ಮತ್ತು ಕುವೈತ್ ಬುಧವಾರ ತಿಳಿಸಿವೆ. ಕುವೈತ್ ಸೇನೆಯು ತಾನು "ಶತ್ರುತ್ವದ" ಡ್ರೋನ್ ದಾಳಿಗಳನ್ನು ಎದುರಿಸುತ್ತಿರುವುದಾಗಿ ಹೇಳಿದೆ; ಇತ್ತ ಬಹ್ರೇನ್ ಸಂಭಾವ್ಯ ಅಪಾಯದ ಎಚ್ಚರಿಕೆ ನೀಡಿದ್ದು, ತನ್ನ ನಾಗರಿಕರಿಗೆ ಶಾಂತವಾಗಿರುವಂತೆ ಕೋರಿದೆ. ಈ ಪ್ರದೇಶದಲ್ಲಿ ಉದ್ವಿಗ್ನತೆ ಮತ್ತೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ, ಪರ್ಷಿಯನ್ ಕೊಲ್ಲಿಯ ಅಮೆರಿಕದ ಮಿತ್ರರಾಷ್ಟ್ರಗಳ ಮೇಲೆ ಇರಾನ್ ತನ್ನ ದಾಳಿಗಳನ್ನು ತೀವ್ರಗೊಳಿಸುತ್ತಿರುವಂತೆ ತೋರುತ್ತಿದೆ. ಇರಾನ್ನ ಆಯಕಟ್ಟಿನ ಕ್ವೆಶ್ಮ್ ದ್ವೀಪದ ಮೇಲೆ ಮಂಗಳವಾರ ನಡೆಸಿದ ದಾಳಿಯು, ಈ ಪ್ರದೇಶದಲ್ಲಿ "ಅಮೆರಿಕದ ಸಿಬ್ಬಂದಿ ಮತ್ತು ಆಸ್ತಿಗಳನ್ನು" ಗುರಿಯಾಗಿಸಿಕೊಂಡಿದ್ದ ಇರಾನಿನ ಪಡೆಗಳಿಗೆ ನೀಡಿದ ರಕ್ಷಣಾತ್ಮಕ ಪ್ರತಿಕ್ರಿಯೆಯಾಗಿದೆ ಎಂದು ಅಮೆರಿಕದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಬಹ್ರೇನ್‌ನಲ್ಲಿರುವ ಅಮೆರಿಕದ ರಾಡಾರ್ ಕೇಂದ್ರವೊಂದನ್ನು ಒಂದು ವಾರದ ಅವಧಿಯಲ್ಲಿ ಮೂರನೇ ಬಾರಿಗೆ ಗುರಿಯಾಗಿಸಿಕೊಂಡಿದ್ದಾಗಿ ಇರಾನ್ ಘೋಷಿಸಿದ ಕೆಲವೇ ಗಂಟೆಗಳಲ್ಲಿ ಈ ದಾಳಿಗಳು ನಡೆದಿವೆ. ಈ ಎಲ್ಲಾ ದಾಳಿಗಳನ್ನು ತಡೆಯಲಾಗಿದೆ ಎಂದು ಅಮೆರಿಕದ ಅಧಿಕಾರಿಗಳು ತಿಳಿಸಿದ್ದಾರೆ. ಅಮೆರಿಕದ ದಾಳಿಯು ತಮ್ಮ ಸೈನಿಕರು ಮತ್ತು ಆಸ್ತಿಗಳ ವಿರುದ್ಧ ಇರಾನ್ ನಡೆಸಿದ ಆಕ್ರಮಣಕ್ಕೆ ಪ್ರತಿಕ್ರಿಯೆಯಾಗಿದೆ ಎಂದು ಸೇನಾ ಅಧಿಕಾರಿಯೊಬ್ಬರು 'ಅಲ್ ಜಜೀರಾ'ಗೆ ತಿಳಿಸಿದ ಬೆನ್ನಲ್ಲೇ, ಕ್ವೆಶ್ಮ್ ದ್ವೀಪದ ಮೇಲಿನ ಅಮೆರಿಕದ ದಾಳಿಯಿಂದ ಮೂಲಸೌಕರ್ಯಗಳಿಗೆ ಯಾವುದೇ ಹಾನಿಯಾಗಿಲ್ಲ ಎಂದು ಇರಾನಿನ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಅಮೆರಿಕದ ವಿರುದ್ಧ 'ಡರ್ಟಿ ಬಾಂಬ್' (ವಿಕಿರಣಶೀಲ ಬಾಂಬ್) ಬಳಸಲು ಇರಾನ್ ಯೋಜನೆ ರೂಪಿಸುತ್ತಿದೆ ಎಂಬ ಅಮೆರಿಕದ ಮಾಧ್ಯಮ ವರದಿಗಳನ್ನು ಟೆಹ್ರಾನ್ ತಳ್ಳಿಹಾಕಿದೆ. ಇಂತಹ ವರದಿಗಳು "ಮುಂದಿನ ಆಕ್ರಮಣಗಳು ಮತ್ತು ಯುದ್ಧ ಅಪರಾಧಗಳಿಗೆ ನೆಪಗಳಾಗಿವೆ" ಎಂದು ಅದು ಟೀಕಿಸಿದೆ.

ಭೂಮಿಯಿಂದ ಒಂದು ಬೆಳಕಿನ ದಿನದಷ್ಟು ದೂರ ಸಾಗಿದ ವಾಯೇಜರ್-1

49 ವರ್ಷಗಳ ನಿರಂತರ ಪಯಣ; 2590 ಕೋಟಿ ಕಿ.ಮೀ. ದೂರ ಕ್ರಮಿಸಿದ ಮಾನವ ನಿರ್ಮಿತ ನೌಕೆ



ನವದಹಲಿ, ನ.18: ಅಮೆರಿಕದ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ನಾಸಾ ಉಡಾವಣೆ ಮಾಡಿದ್ದ ವಾಯೇಜರ್-1 ಬಾಹ್ಯಾಕಾಶ ನೌಕೆ ಮತ್ತೊಂದು ಐತಿಹಾಸಿಕ ಮೈಲಿಗಲ್ಲು ಸಾಧಿಸಿದೆ. ಸುಮಾರು 49 ವರ್ಷಗಳ ನಿರಂತರ ಪಯಣದ ಬಳಿಕ ಭೂಮಿಯಿಂದ ಒಂದು ಬೆಳಕಿನ ದಿನದಷ್ಟು ದೂರವನ್ನು ಕ್ರಮಿಸಿದ ಮೊದಲ ಮಾನವ ನಿರ್ಮಿತ ವಸ್ತು ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಇಂದು ಭಾರತೀಯ ಕಾಲಮಾನ ಮಧ್ಯಾಹ್ನ 3.46ಕ್ಕೆ ವಾಯೇಜರ್-1 ಭೂಮಿಯಿಂದ ಸುಮಾರು 2590 ಕೋಟಿ ಕಿಲೋಮೀಟರ್ ದೂರ ತಲುಪಿದೆ. ಬೆಳಕು ಒಂದು ದಿನದಲ್ಲಿ ಕ್ರಮಿಸುವ ದೂರವನ್ನು ಒಂದು ಬೆಳಕಿನ ದಿನ ಎಂದು ಕರೆಯಲಾಗುತ್ತದೆ. ಬೆಳಕು ಪ್ರತಿ ಸೆಕೆಂಡ್‌ಗೆ 3 ಲಕ್ಷ ಕಿಲೋಮೀಟರ್ ವೇಗದಲ್ಲಿ ಚಲಿಸುತ್ತದೆ. ಈ ಲೆಕ್ಕದಲ್ಲಿ ಒಂದು ಬೆಳಕಿನ ದಿನದ ದೂರ ಸುಮಾರು 25.9 ಶತಕೋಟಿ ಕಿಲೋಮೀಟರ್ ಆಗಿದೆ. ವಾಯೇಜರ್-1 ಪ್ರಸ್ತುತ ಗಂಟೆಗೆ ಸುಮಾರು 61 ಸಾವಿರ ಕಿಲೋಮೀಟರ್ ವೇಗದಲ್ಲಿ ಚಲಿಸುತ್ತಿದೆ. ಇಷ್ಟೊಂದು ವೇಗದಲ್ಲಿ ಸಾಗುತ್ತಿದ್ದರೂ ಒಂದು ಬೆಳಕಿನ ದಿನದಷ್ಟು ದೂರ ಕ್ರಮಿಸಲು ಅದಕ್ಕೆ ಸುಮಾರು ಐದು ದಶಕಗಳೇ ಬೇಕಾಗಿವೆ.

1977ರಲ್ಲಿ ಆರಂಭವಾದ ಪಯಣ

1977ರ ಸೆಪ್ಟೆಂಬರ್ 5ರಂದು ನಾಸಾ ವಾಯೇಜರ್-1 ನೌಕೆಯನ್ನು ಉಡಾವಣೆ ಮಾಡಿತ್ತು. ಅದರ ಅವಳಿ ನೌಕೆ ವಾಯೇಜರ್-2 ಉಡಾವಣೆಯಾದ 16 ದಿನಗಳ ಬಳಿಕ ವಾಯೇಜರ್-1 ತನ್ನ ಪಯಣ ಆರಂಭಿಸಿತ್ತು. ಸೌರವ್ಯೂಹದ ಹೊರಗಿನ ಗ್ರಹಗಳ ಅಧ್ಯಯನ ಇದರ ಪ್ರಮುಖ ಉದ್ದೇಶವಾಗಿತ್ತು.

1979ರಲ್ಲಿ ಗುರುಗ್ರಹದ ಸಮೀಪ ಹಾದುಹೋದ ವಾಯೇಜರ್-1, 1980ರಲ್ಲಿ ಶನಿಗ್ರಹದ ಸಮೀಪ ಸಂಚರಿಸಿತ್ತು. ಈ ಸಂದರ್ಭದಲ್ಲಿ ಗ್ರಹಗಳು, ಅವುಗಳ ಉಪಗ್ರಹಗಳು ಹಾಗೂ ಉಂಗುರಗಳ ಕುರಿತು ಮಹತ್ವದ ಮಾಹಿತಿಯನ್ನು ಭೂಮಿಗೆ ರವಾನಿಸಿತ್ತು. ಶನಿಯ ಉಪಗ್ರಹ ಟೈಟನ್‌ನ ಸಮೀಪ ಹಾದುಹೋದ ಬಳಿಕ ಸೌರವ್ಯೂಹದ ಗ್ರಹಗಳ ಕಕ್ಷೆಯ ಸಮತಲದಿಂದ ಹೊರಕ್ಕೆ ಸಾಗುವ ಮಾರ್ಗವನ್ನು ಪಡೆದುಕೊಂಡಿತ್ತು.

ಸಂದೇಶ ತಲುಪಲು 24 ಗಂಟೆ

ವಾಯೇಜರ್-1 ಭೂಮಿಯಿಂದ ಇಷ್ಟು ದೂರ ಸಾಗಿರುವುದರಿಂದ ಅದರೊಂದಿಗೆ ಸಂಪರ್ಕ ಸಾಧಿಸುವುದೂ ಸವಾಲಾಗಿದೆ. ಭೂಮಿಯಿಂದ ಕಳುಹಿಸುವ ರೇಡಿಯೊ ಸಂಕೇತ ನೌಕೆಯನ್ನು ತಲುಪಲು ಸುಮಾರು 24 ಗಂಟೆ ಬೇಕಾಗುತ್ತದೆ. ಅಲ್ಲಿಂದ ಪ್ರತಿಕ್ರಿಯೆ ಮರಳಿ ಭೂಮಿಗೆ ಬರಲು ಮತ್ತೊಂದು 24 ಗಂಟೆ ಬೇಕಾಗುತ್ತದೆ. ಅಂದರೆ, ಒಂದು ಸಂದೇಶ ಕಳುಹಿಸಿ ಉತ್ತರ ಪಡೆಯಲು ಸುಮಾರು ಎರಡು ದಿನ ಕಾಯಬೇಕಾಗುತ್ತದೆ. ವಾಯೇಜರ್-1 ತನ್ನೊಂದಿಗೆ ಗೋಲ್ಡನ್ ರೆಕಾರ್ಡ್ ಎಂಬ ವಿಶೇಷ ದಾಖಲೆಯನ್ನೂ ಹೊತ್ತೊಯ್ಯುತ್ತಿದೆ. ಇದರಲ್ಲಿ ಭೂಮಿಯ ವಿವಿಧ ಧ್ವನಿಗಳು, ಸಂಗೀತ, ಶುಭಾಶಯಗಳು ಮತ್ತು ಚಿತ್ರಗಳನ್ನು ಸಂಗ್ರಹಿಸಲಾಗಿದೆ. ಅನ್ಯಗ್ರಹದ ಜೀವಿಗಳಿಗೆ ಭೂಮಿಯ ಬಗ್ಗೆ ಪರಿಚಯಿಸುವ ಉದ್ದೇಶದಿಂದ ಇದನ್ನು ಕಳುಹಿಸಲಾಗಿದೆ.

ವಾಯೇಜರ್-1 ಮುಂದಿನ ಸುಮಾರು 40 ಸಾವಿರ ವರ್ಷಗಳಲ್ಲಿ ಗ್ಲೀಸ್ 445 ನಕ್ಷತ್ರದ ಸಮೀಪ ಹಾದುಹೋಗುವ ನಿರೀಕ್ಷೆಯಿದೆ. ಆದರೆ ಅದು ಆ ನಕ್ಷತ್ರವನ್ನು ತಲುಪುವುದಿಲ್ಲ. 1.7 ಬೆಳಕಿನ ವರ್ಷಗಳ ಅಂತರದಲ್ಲಿ ಹಾದು ಹೋಗಲಿದೆ. ಐದು ದಶಕಗಳ ಹಿಂದೆ ನಿರ್ಮಿಸಲಾದ ತಂತ್ರಜ್ಞಾನವನ್ನು ಹೊಂದಿರುವ ನೌಕೆ ಇಂದಿಗೂ ಬಾಹ್ಯಾಕಾಶದಲ್ಲಿ ಸಂಚರಿಸುತ್ತಿರುವುದು ಬಾಹ್ಯಾಕಾಶ ಸಂಶೋಧನೆಯ ಮಹತ್ವದ ಸಾಧನೆಯಾಗಿದೆ.

ಕಚ್ಚಾತೈಲ ದಾಸ್ತಾನು 5.28 ದಶಲಕ್ಷ ಬ್ಯಾರಲ್ ಏರಿಕೆ: ತೈಲಬೆಲೆ ಶೇ. 2 ರಷ್ಟು ಕುಸಿತ

ನ್ಯೂಯಾರ್ಕ್, ನ.18: ಯುಎಸ್ ಕಚ್ಚಾ ತೈಲ ಮತ್ತು ಇಂಧನ ದಾಸ್ತಾನುಗಳು ಹೆಚ್ಚಾದ ನಂತರ ಬುಧವಾರ ತೈಲ ಬೆಲೆಗಳು ಕುಸಿದವು, ಇದು ವಿಶ್ವದ ಅತಿದೊಡ್ಡ ತೈಲ-ಬಳಕೆಯ ದೇಶದಲ್ಲಿ ಹೆಚ್ಚಿನ ಪೂರೈಕೆಯನ್ನು ಸೂಚಿಸುತ್ತದೆ. ಆದಾಗ್ಯೂ, ಯುಎಸ್ ಮತ್ತು ಇರಾನ್ ನಡುವಿನ ನಿರಂತರ ಹೋರಾಟ ಮತ್ತು ಮಧ್ಯಪ್ರಾಚ್ಯದಲ್ಲಿ ಹಡಗುಗಳ ಮೇಲಿನ ದಾಳಿಗಳು ತೈಲಬೆಲೆಗಳ ಕುಸಿತವನ್ನು ಸೀಮಿತಗೊಳಿಸಿದವು.



ಅಮೆರಿಕ ಕಚ್ಚಾತೈಲ ದಾಸ್ತಾನು 5.28 ದಶಲಕ್ಷ ಬ್ಯಾರಲ್‌ಗಳಷ್ಟು ಏರಿಕೆಯಾಗಿವೆ:

ಮಂಗಳವಾರ ಮಾರುಕಟ್ಟೆ ಮೂಲಗಳು ಉಲ್ಲೇಖಿಸಿರುವ ಅಮೆರಿಕನ್ ಪೆಟ್ರೋಲಿಯಂ ಇನ್ಸ್ಟಿಟ್ಯೂಟ್‌ನ ಮಾಹಿತಿಯ ಪ್ರಕಾರ, ನವೆಂಬರ್ 13ಕ್ಕೆ ಕೊನೆಗೊಂಡ ವಾರದಲ್ಲಿ ಅಮೆರಿಕ ಕಚ್ಚಾತೈಲ ದಾಸ್ತಾನುಗಳು 5.28 ದಶಲಕ್ಷ ಬ್ಯಾರಲ್‌ಗಳಷ್ಟು ಏರಿಕೆಯಾಗಿವೆ. ಅದೇ ವಾರದಲ್ಲಿ ಅಮೆರಿಕ ಗ್ಯಾಸೋಲಿನ್ ದಾಸ್ತಾನು 5.12 ದಶಲಕ್ಷ ಬ್ಯಾರಲ್‌ಗಳಷ್ಟು ಏರಿಕೆಯಾಗಿವೆ.

ಡೀಸೆಲ್ ಮತ್ತು ತಾಪನ ತೈಲವನ್ನು ಒಳಗೊಂಡಿರುವ ಡಿಸ್ಟಿಲೇಟ್ ದಾಸ್ತಾನುಗಳು 351,000 ಬ್ಯಾರಲ್‌ಗಳಷ್ಟು ಏರಿಕೆಯಾಗಿವೆ ಎಂದು ಮಾರುಕಟ್ಟೆ ಮೂಲಗಳು ಉಲ್ಲೇಖಿಸಿವೆ. ಆದಾಗ್ಯೂ, ಯುಎಸ್-ಇರಾನ್ ಸಂಘರ್ಷ ಮತ್ತು ಹಾರ್ಮುಜ್ ಜಲಸಂಧಿಯ ಮೂಲಕ ತೈಲ ಸಾಗಣೆಯ ಸುರಕ್ಷತೆಯ ಬಗ್ಗೆ ಕಳವಳಗಳು ತೀವ್ರ ಕುಸಿತವನ್ನು ತಡೆಯಿತು.

ಅಮೆರಿಕ ಮತ್ತು ಇರಾನ್ ನಡುವಿನ ಉದ್ವಿಗ್ನತೆಯನ್ನು ಕಡಿಮೆ ಮಾಡಲು ನಡೆಯುತ್ತಿರುವ ರಾಜತಾಂತ್ರಿಕ ಪ್ರಯತ್ನಗಳ ಹೊರತಾಗಿಯೂ, ಮಧ್ಯಪ್ರಾಚ್ಯ ದಲ್ಲಿ ಹಡಗುಗಳ ಮೇಲಿನ ದಾಳಿಗಳು ಹೆಚ್ಚಾದ ಕಾರಣ ಮಂಗಳವಾರ ತೈಲ ಬೆಲೆಗಳು ಏರಿಕೆಯಾಗಿವೆ.

ಇರಾನ್ ಮತ್ತು ಮಧ್ಯವರ್ತಿಗಳಾದ ಒಮಾನ್ ಮತ್ತು ಕತಾರ್ ನಡುವಿನ ಮಾತುಕತೆಗಳು ಸಹ ಮುಂದುವರಿದಿವೆ ಎಂದು ರಾಯಿಟರ್ಸ್ ವರದಿ ಮಾಡಿದೆ.

GMT ಸಮಯ 1310 ರ ಹೊತ್ತಿಗೆ, ಬ್ರೆಂಟ್ ಕಚ್ಚಾತೈಲದ ಫ್ಯೂಚರ್ಸ್ ಬೆಲೆ ಪ್ರತಿ ಬಾರಲ್‌ಗೆ 4 ಸೆಂಟ್‌ಗಳಷ್ಟು ಕುಸಿದು 93.10 ಡಾಲರ್‌ಗೆ ತಲುಪಿದೆ. ಯುಎಸ್ ವೆಸ್ಟ್ ಟೆಕ್ಸಾಸ್ ಇಂಟರ್ ಮೀಡಿಯೇಟ್ ಫ್ಯೂಚರ್ಸ್ ಬೆಲೆ, ಆಗಸ್ಟ್ ಅಂತ್ಯದ ನಂತರದ ಕನಿಷ್ಠ ಮಟ್ಟವನ್ನು ಮುಟ್ಟಿದ ಬಳಿಕ, 47 ಸೆಂಟ್‌ಗಳಷ್ಟು ಇಳಿಕೆಯಾಗಿ 85.54 ಡಾಲರ್‌ಗೆ ತಲುಪಿದೆ.

ಫಿಲಿಪ್ಪೀನ್ಸ್: ಪತ್ರಕರ್ತರ ಪ್ರಶ್ನೆಗೆ ಮೋದಿ ಪೆಚ್ಚು

ಮನಿಲಾ, ನ.18::23ನೇ ಆಸಿಯಾನ್-ಭಾರತ ಶೃಂಗಸಭೆ ಹಾಗೂ 21ನೇ ಪೂರ್ವ ಏಷ್ಯಾ ಶೃಂಗಸಭೆಯಲ್ಲಿ ಭಾಗವಹಿಸಲು ಫಿಲಿಪ್ಪೀನ್ಸ್ ರಾಜಧಾನಿ ಮನಿಲಾಗೆ ಭೇಟಿ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಅವರ ಅನಿರೀಕ್ಷಿತ ಮಾಧ್ಯಮ ಮುಖಾಮುಖಿಯೊಂದು ಇದೀಗ ಅಂತಾರಾಷ್ಟ್ರೀಯ ಮಟ್ಟದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಪತ್ರಕರ್ತರ ಅನಿರೀಕ್ಷಿತ ಪ್ರಶ್ನೆಗಳ ಸುರಿಮಳೆಯ ನಡುವೆ ಪ್ರಧಾನಿ ಮೋದಿ ಅವರು ತೀವ್ರ ಮುಜುಗರಕ್ಕೆ ಒಳಗಾದಂತೆ ಕಂಡುಬಂದಿದ್ದು, ಈ ಕುರಿತ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗುತ್ತಿದೆ.

ಮನಿಲಾ ಶೃಂಗಸಭೆಯ ನೇಪಥ್ಯದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಜಪಾನ್ ಪ್ರಧಾನಿ ಸನೇ ತಕಾಯಿಚಿ ಮತ್ತು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ 'ಕ್ವಾಡ್' ನ